# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ್, ಬಿ, ಗುಡಗೇನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

VOL.04 ISSUE. 300 ₹4, THURSDAY, 25 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26




## ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಪ್ರಯಾಣಿಸುತ್ತಿದ್ದ ಕಾರು ಅಪಘಾತ

ಬುಧವಾರ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರ ಕಾರು ಅಪಘಾತಕ್ಕೀಡಾಗಿದ್ದು ಅವರ ತಲೆ ಮತ್ತು ಹಣೆಗೆ ಸಣ್ಣಪುಟ್ಟ ಗಾಯಗಳಾಗಿವೆ ಎಂದು ವರದಿಯಿಂದ ತಿಳಿದುಬಂದಿದೆ.

ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಅವರು ಬರ್ಧಮಾನ್‌ನಿಂದ ಕೋಲ್ಕತಾಕ್ಕೆ ವಾಪಸ್ ಬರುತ್ತಿದ್ದಾಗ ಕಾರು ಅಪಘಾತಕ್ಕೀಡಾಗಿದೆ.

ಇನ್ನು ಮಮತಾ ಅವರು ಪ್ರತಿಕೂಲ ಹವಾಮಾನದ ಕಾರಣದಿಂದ ಬರ್ಧಮಾನ್‌ನಿಂದ ಕೋಲ್ಕತಾಗೆ ವಾಪಸಾಗುತ್ತಿದ್ದರು. ಆಗ ಅವರ ಬೆಂಗಾವಲು ವಾಹನದ ಎದುರು ಏಕಾಏಕಿ ಕಾರೊಂದು ಬಂದಿತ್ತು.

ಹೀಗಾಗಿ ಮಮತಾ ಅವರ ಕಾರು ಚಾಲಕ ತಕ್ಷಣವೇ ಬ್ರೇಕ್ ಹಾಕಿದ್ದಾರೆ. ಇದರಿಂದ ಟಿಎಂಸಿ ನಾಯಕಿಗೆ ಗಾಯಗಳಾಗಿವೆ ಎಂದು ವರದಿ ತಿಳಿಸಿದೆ.

ಮಮತಾ ಅವರ ತಲೆಗೆ ಸಣ್ಣ ಪುಟ್ಟ ಗಾಯಗಳಾಗಿವೆ. ಅವರನ್ನು ಕೋಲ್ಕತಾಗೆ ವಾಪಸ್ ಕರೆತರಲಾಗುತ್ತಿದೆ ಎಂದು ವರದಿಯಾಗಿದೆ.

# ನರೇಂದ್ರ ಮೋದಿಯವರ ನಾಯಕತ್ವದಲ್ಲಿ, ಸರ್ಕಾರವು ಕಳೆದ 10 ವರ್ಷಗಳಲ್ಲಿ, 50 ದಶಕಗಳಿಗೂ ಮಿಗಿಲಾದ ಸುಧಾರಣಾ ಕಾರ್ಯಗಳನ್ನು ಕೈಗೊಂಡಿದೆ: ಅಮಿತ್ ಶಾ

ರಾಷ್ಟ್ರೀಯ ವಿಧಿ ವಿಜ್ಞಾನ ವಿಶ್ವವಿದ್ಯಾಲಯದಲ್ಲಿ (ಎನ್‌ಎಫ್‌ಎಸ್ಯು) ಮಂಗಳವಾರ ನಡೆದ 5ನೇ ಅಂತಾರಾಷ್ಟ್ರೀಯ ಮತ್ತು 44ನೇ ಅಖಿಲ ಭಾರತ ಅಪರಾಧ ವಿಜ್ಞಾನ ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ, "ಪ್ರಧಾನಿ ಶ್ರೀ ನರೇಂದ್ರ ಮೋದಿಯವರ ನೇತೃತ್ವದಲ್ಲಿ, ಕಳೆದ 10 ವರ್ಷಗಳಲ್ಲಿ ಸರ್ಕಾರವು 50 ದಶಕಗಳಿಗೂ ಹೆಚ್ಚಿನ ಸುಧಾರಣಾ ಕಾರ್ಯಗಳನ್ನು ಕೈಗೊಂಡಿದೆ. ಹೊಸ ಕಾನೂನುಗಳಲ್ಲಿ ತಂತ್ರಜ್ಞಾನದ ಬಳಕೆಯಿಂದ, ನವ ಭಾರತದಲ್ಲಿ ನ್ಯಾಯವು ಈಗ ಎಲ್ಲರಿಗೂ ಸುಲಭವಾಗಿ ಕೈಗುಟವಂತಾಗಿದೆ" ಎಂದರು.

ದೂರದೃಷ್ಟಿಯ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ,ಗೃಹ ವ್ಯವಹಾರ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಹಿಂದೆ ಬ್ರಿಟಿಷರು ಮಾಡಿದ್ದ ಕಾನೂನುಗಳನ್ನು ತಿದ್ದುಪಡಿ ಮಾಡಿ ಹೊಸ ಕಾನೂನುಗಳನ್ನು ಪ್ರಸ್ತಾಪಿಸಿದರು. ಹಿಂದಿನ ಕಾನೂನುಗಳು ಬ್ರಿಟಿಷ್ ಆಳ್ವಿಕೆಯನ್ನು ಭದ್ರಪಡಿಸಲು ಭಾರತೀಯರನ್ನು ಶಿಕ್ಷಿಸುವ ಗುರಿಯನ್ನು ಹೊಂದಿದ್ದವು, ಆದರೆ ಹೊಸ ಕಾನೂನುಗಳು ನ್ಯಾಯದ ಮೂಲಭೂತ ತತ್ವದೊಂದಿಗೆ ರಚಿಸಲ್ಪಟ್ಟಿವೆ. ಹಿಂದಿನ ಕಾನೂನುಗಳಲ್ಲಿ 'ಶಿಕ್ಷೆ' ಎಂಬ ಪದವು ಗಮನಾರ್ಹವಾದ ಮಹತ್ವವನ್ನು ಪಡೆದರೆ, ಹೊಸ ಕಾನೂನುಗಳಲ್ಲಿ 'ನ್ಯಾಯ' ಎಂಬ ಪದವು ಮಹತ್ವ ಪಡೆದಿದೆ. ಏಳು ವರ್ಷ ಅಥವಾ ಅದಕ್ಕಿಂತ ಹೆಚ್ಚಿನ ಶಿಕ್ಷೆ ವಿಧಿಸಬಹುದಾದ ಅಪರಾಧಗಳಲ್ಲಿ, ಅಪರಾಧ



ಸ್ಥಳಕ್ಕೆ ವಿಧಿ ವಿಜ್ಞಾನ (ಫೋರೆನ್ಸಿಕ್ ಸೈನ್ಸ್) ಅಧಿಕಾರಿಯ ಕಡ್ಡಾಯ ಭೇಟಿಯು, ತನಿಖೆಗಳನ್ನು ಸರಳಗೊಳಿಸಿ, ನ್ಯಾಯಾಧೀಶರ ಕೆಲಸವನ್ನು ಸುಲಭಗೊಳಿಸುತ್ತದೆ ಎಂಬುದು ಶಾರ ನಂಬಿಕೆ. ತಂತ್ರಜ್ಞಾನದ ನೆರವಿನೊಂದಿಗೆ, ಕ್ರಿಮಿನಲ್ ನ್ಯಾಯ ವ್ಯವಸ್ಥೆಯ ಸವಾಲುಗಳನ್ನು ನಿವಾರಿಸಿಕೊಂಡು, ಭಾರತದ ಕಾನೂನು ವ್ಯವಸ್ಥೆಯು ಮುಂದಿನ 5 ವರ್ಷಗಳಲ್ಲಿ ವಿಶ್ವದ ಅತ್ಯಂತ ಆಧುನಿಕ ನ್ಯಾಯ ವ್ಯವಸ್ಥೆಯಾಗಲಿದೆ.

ಗುಲಾಮಗಿರಿಯ ಮನಸ್ಥಿತಿಯನ್ನು ತೊಡೆದುಹಾಕುವಲ್ಲಿ ಸಿದ್ಧಹಸ್ತರಾಗಿರುವ ಮತ್ತು ಭಾರತದ ರಾಜಕೀಯ ರಂಗದಲ್ಲಿ ಚಾಣಕ್ಯನೆಂದೇ ಗುರಿತಿಸಿಕೊಂಡಿರುವ ಅಮಿತ್ ಶಾ ಅವರು ಮುಂದಿನ 5 ವರ್ಷಗಳಲ್ಲಿ, ಪ್ರತಿ ವರ್ಷಕ್ಕೆ 9,000 ಕ್ಕೂ ಹೆಚ್ಚು ವಿಧಿ ವಿಜ್ಞಾನ ಅಧಿಕಾರಿಗಳಿಗೆ ತರಬೇತಿ ನೀಡುವ ವ್ಯವಸ್ಥೆಯನ್ನು ಸ್ಥಾಪಿಸಿದ್ದಾರೆ. ಹೊಸ ಕಾನೂನುಗಳಲ್ಲಿ ತಂತ್ರಜ್ಞಾನದ ಬಳಕೆಯಿಂದ, ನ್ಯಾಯವು ಈಗ ಎಲ್ಲರಿಗೂ ಸುಲಭವಾಗಿ ಲಭ್ಯವಾಗಲಿದ್ದು, ಮುಂಬರುವ ವರ್ಷಗಳಲ್ಲಿ ಮೂರು ಹೊಸ ಕಾನೂನುಗಳು ಆರಕ್ಷಣೆ ಮತ್ತು ನ್ಯಾಯದ ಯುಗಕ್ಕೆ ನಾಂದಿ ಹಾಡಲಿವೆ. ಮುಂದಿನ ವರ್ಷದಲ್ಲಿ, ಓಈಖಿಗ ನ 9 ಕ್ಯಾಂಪಸ್ಗಳು ದೇಶದಾದ್ಯಂತ ತೆರೆಯಲ್ಪಟ್ಟು, ಅಪರಾಧ ನ್ಯಾಯ ವ್ಯವಸ್ಥೆಯಲ್ಲಿ ವಿಧಿ ವಿಜ್ಞಾನಕ್ಕೆ ಸಂಪನ್ಮೂಲಗಳನ್ನು ಸಿದ್ಧಪಡಿಸುವಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸಲಿವೆ.

ನ್ಯಾಯದೆಡೆಗೆ ಬದ್ಧತೆ ಹೊಂದಿರುವ ಭಾರತೀಯ ರಾಜಕೀಯದ ವಾಸ್ತುಶಿಲ್ಪಿ ಶಾ, ಮುಂದಿನ ಐದು ವರ್ಷಗಳಲ್ಲಿ ವಾರ್ಷಿಕವಾಗಿ 9,000 ಕ್ಕೂ ಹೆಚ್ಚು ವಿಧಿವಿಜ್ಞಾನ ಅಧಿಕಾರಿಗಳನ್ನು ಸಿದ್ಧ ಮಾಡುವ ವ್ಯವಸ್ಥೆಯನ್ನು ಸೃಷ್ಟಿಸಿದ್ದಾರೆ. ಈ ಬೆಳವಣಿಗೆಯಿಂದ ಭಾರತದ ಕ್ರಿಮಿನಲ್ ನ್ಯಾಯ ವ್ಯವಸ್ಥೆಯು ಮುಂದಿನ 5 ವರ್ಷಗಳಲ್ಲಿ ವಿಶ್ವದಲ್ಲೇ ಅತ್ಯಂತ ಆಧುನಿಕ ವ್ಯವಸ್ಥೆಯಾಗಲಿದೆ.

ಹೊಸ ಕಾನೂನುಗಳು ತನಿಖೆಗಳಲ್ಲಿ, ಕಾನೂನು ಕ್ರಮಗಳಲ್ಲಿ ಮತ್ತು ನ್ಯಾಯಾಂಗ ಪ್ರಕ್ರಿಯೆಗಳಲ್ಲಿ ವಿಧಿ ವಿಜ್ಞಾನದ ಪ್ರಾಮುಖ್ಯತೆಯನ್ನು ಒತ್ತಿಹೇಳುತ್ತಾ, ಯುವಕರಿಗೆ ಗಮನಾರ್ಹವಾದ ಉದ್ಯೋಗಾವಕಾಶಗಳ ಬಾಗಿಲನ್ನು ತೆರೆಯಲಿವೆ. ರಾಷ್ಟ್ರೀಯ ವಿಧಿವಿಜ್ಞಾನ ವಿಶ್ವವಿದ್ಯಾಲಯದಲ್ಲಿನ 5ನೇ ಅಂತಾರಾಷ್ಟ್ರೀಯ ಮತ್ತು 44ನೇ ಅಖಿಲ ಭಾರತ ಅಪರಾಧ ವಿಜ್ಞಾನ ಸಮ್ಮೇಳನದ ಉದ್ಘಾಟನೆಯು, ಭಾರತದ ಕ್ರಿಮಿನಲ್ ನ್ಯಾಯ ವ್ಯವಸ್ಥೆಯು ಹೊಸ ಯುಗವನ್ನು ಪ್ರವೇಶಿಸುತ್ತಿರುವ ಸಮಯದಲ್ಲಿಯೇ ಘಟಿಸಿದ್ದು ಕಾಕತಾಳೀಯವೇ ಸರಿ.

## ಡಿಸಿಎಂ ಸ್ಥಾನ ಬೇಕೆಂದು ನಾನು ಡಿಮ್ಯಾಂಡ್ ಮಾಡಿಲ್ಲ

ಬೆಂಗಳೂರು: ಡಿಸಿಎಂ ಸ್ಥಾನದ ಬಗ್ಗೆ ನಾನು ಎಲ್ಲಿಯೂ ಕೇಳಿಲ್ಲ. ಡಿಮ್ಯಾಂಡ್



ಕೂಡ ಮಾಡಿಲ್ಲ. ಇನೆನ್ನಿದ್ದರು ಲೋಕಸಭಾ ಚುನಾವಣೆ ಮುಗಿದ ಬಳಿಕ ಆ ಕುರಿತು ಮಾತನಾಡುವೆ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಡಿಸಿಎಂ ಆಗಬೇಕೆಂಬ ಬಯಕೆ ಇಲ್ಲಾ, ಆದರೆ ಸಮುದಾಯದ ಒತ್ತಡ ಇತ್ತು. ಇನೆನ್ನಿದ್ದರು ಚುನಾವಣೆ ಮುಗಿಯುವವರೆಗೂ ಸುಮ್ಮನಿರುವೆ. ಚುನಾವಣೆ ಆದ ಬಳಿಕ ಡಿಮ್ಯಾಂಡ್ ಮಾಡುತ್ತೇನೆಂದು ತಿಳಿಸಿದರು.

ನಿಗಮ ಮಂಡಳಿಗಳ ಅಧ್ಯಕ್ಷರ ಆಯ್ಕೆ ಕುರಿತು ಮಾತನಾಡಿದ ಸಚಿವರು, ನಿಗಮ ಮಂಡಳಿಗಳಿಗೆ ಶಾಸಕರ ಜತೆ ಕಾರ್ಯಕರ್ತರಿಗೂ ಅವಕಾಶ ಸಿಗಬೇಕೆಂಬುವುದು ನಮ್ಮ ಅನಸಿಕೆ. ನಮ್ಮ ಭಾಗದಲ್ಲಿ ದುಡಿದ ಕಾರ್ಯಕರ್ತರ ಹೆಸರು ಈಗಾಗಲೇ ಸೂಚಿಸಲಾಗಿದೆ. ಅಂತಿಮವಾಗಿ ಸಿಎಂ, ಡಿಸಿಎಂ ಫೈನಲ್ ಮಾಡುತ್ತಾರೆ. ಯಾರನ್ನು ಆಯ್ಕೆ ಮಾಡುತ್ತಾರೆ ಕಾಯ್ದು ನೋಡೋಣ ಎಂದು ತಿಳಿಸಿದರು.

ಕಳೆದ ವಿಧಾನಸಭಾ ಚುನಾವಣೆ ಸಮಯದಲ್ಲಿ ಟಿಕೆಟ್ ಕೊಡದ ಕಾರಣಕ್ಕೆ ಬಿಜೆಪಿ ತೊರೆದು ಕಾಂಗ್ರೆಸ್ ಸೇರಿದ ಜಗದೀಶ್ ಶೆಟ್ಟರ್ ಮತ್ತು ಲಕ್ಷ್ಮಣ್ ಸವದಿ ಅವರನ್ನು ಪುನಃ ಪಕ್ಷಕ್ಕೆ ಸೆಳೆದುಕೊಳ್ಳುವ ಹುನ್ನಾರ ಬಿಜೆಪಿ ನಾಯಕರು ನಡೆಸಿದ್ದಾರೆಯೇ ಎಂಬ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ಅವರು, ಇಬ್ಬರಿಗೂ ವಾಪಸ್ಸು ಹೋಗುವ ಅವಶ್ಯಕತೆಯಿಲ್ಲ, ಬಿಜೆಪಿಯಲ್ಲಿ ಸ್ಥಾನಮಾನ ಸಿಗದ ಕಾರಣ ಅವರು ಕಾಂಗ್ರೆಸ್ ಬಂದಿದ್ದಾರೆ ಮತ್ತು ತಮ್ಮ ಪಕ್ಷ ಅವರಿಗೆ ಸೂಕ್ತ ಸ್ಥಾನಮಾನಗಳನ್ನು ನೀಡಿ ಗೌರವಿಸಿದೆ ಎಂದು ಹೇಳಿದರು.

ಲೋಕಸಭಾ ಟಿಕೆಟ್ ಸಿಕ್ಕರೂ ಸಂಸತ್ತಿಗೆ ಹೋಗಿ ಅವರು ಮಾಡುವುದಾದರೂ ಏನು? ಶಾಸಕರಾಗೇ ಕರ್ನಾಟಕದಲ್ಲಿ ಆರಾಮಾಗಿ ಇರುತ್ತಾರೆ ಎಂದು ಸತೀಶ್ ಜಾರಕಿಹೊಳಿ ಹೇಳಿದರು.

## ಕೇಂದ್ರ ಸಚಿವೆ ಕರಂದ್ಲಾಜೆ ಭಾಷಣದ ವೇಳೆ ನಿದ್ದೆಗೆ ಜಾರಿದ ಸಂಸದ



ತುಮಕೂರು: ತುಮಕೂರಿನ ಎಪಿಎಮ್ಸಿ ಆವರಣ ದಲ್ಲಿ ಹಮ್ಮಿಕೊಂಡಿದ್ದ ಕೊಬ್ಬರಿ ಉಂಡೆ ಖರೀದಿ ಕೇಂದ್ರ ವೇದಿಕೆ ಕಾರ್ಯಕ್ರಮದಲ್ಲಿ ಕೇಂದ್ರದ ಸಚಿವೆ ಶೋಭಾ ಕರಂದ್ಲಾಜೆ ಭಾಷಣ ಮಾಡುತ್ತಿದ್ದ ವೇಳೆ ಸಂಸದ ಜಿ.ಎಸ್. ಬಸವರಾಜ್ ಅವರು ಗಡದ್ ನಿದ್ದೆಗೆ ಜಾರಿದ ಘಟನೆ ನಡೆದಿದೆ.

ಕಾರ್ಯಕ್ರಮದಲ್ಲಿ ರೈತರಿಗೆ ನಿರಂತರವಾಗಿ ಸಮಸ್ಯೆ ಇದೆ. ಸರಿಯಾದ ಸಮಯದಲ್ಲಿ ಮಳೆ ಬೆಳೆ ಬರಲ್ಲ, ಇದನ್ನ ಶತಮಾನಗಳಿಂದ ರೈತರು ಅನುಭವಿಸಿಕೊಂಡು ಬಂದಿದ್ದಾರೆ. ಸಣ್ಣ- ಮಧ್ಯಮ ರೈತರು ದೇಶದಲ್ಲಿ 80% ಹೆಚ್ಚು ಇದ್ದಾರೆ. ಜೊತೆಗೆ ನಮ್ಮದು ಮಳೆಯಾಧಾರಿತ ದೇಶ, ನಮಗೆ ಇನ್ನೂ ನೀರಾವರಿ ನೀಡಲು ಆಗ್ತಿಲ್ಲ. ಆ ನೀರನ್ನ ಸದುಪಯೋಗ ಕೂಡ ಮಾಡಿಕೊಂಡಿಲ್ಲ ಎಂದು ರೈತರ ಸಮಸ್ಯೆ ಕುರಿತು ಮಾತನಾಡುತ್ತಿದ್ದರು. ಈ ವೇಳೆ ಸಂಸದ ಜಿಎಸ್ ಬಸವರಾಜ್ ಅವರು ಗಡದ್ ನಿದ್ದೆಗೆ ಜಾರಿದ್ದಾರೆ ಈ ವಿಡಿಯೋ ಎಲ್ಲಡೇ ವೈರಲ್ ಆಗುತ್ತಿದೆ.

# ಬಿಜೆಪಿಯವರೇ ರಾಮನನ್ನು ಸೀತೆಯಿಂದ ಬೇರ್ಪಡಿಸಿದ್ದಾರೆ: ಸಿಎಂ ಸಿದ್ದರಾಮಯ್ಯ

ಮೈಸೂರು: ನಾವು ಮಹಾತ್ಮ ಗಾಂಧಿ ಹೇಳುವ ರಾಮನ ಮೇಲೆ ನಂಬಿಕೆ ಇಟ್ಟಿದ್ದೇವೆ. ರಘುಪತಿ ರಾಘವ ರಾಜಾರಾಮ್, ಪತೀತ ಪಾವನ ಸೀತಾರಾಮ್ ಎಂದು ಹೇಳಿದ್ದಾರೆ. ನಾವು ಪೂಜಿಸುವ ರಾಮನ ಜತೆಗೆ ಸೀತೆ, ಲಕ್ಷ್ಮಣ, ಹನುಮಂತ ಇರುತ್ತಾರೆ. ಅದಕ್ಕೆ ನಾವು ಸೀತಾರಾಮ ಅಂತ ಕರೆಯುತ್ತೇವೆ. ಬಿಜೆಪಿಯವರು ರಾಮನ ಹೆಸರಲ್ಲಿ ರಾಜಕೀಯ ಮಾಡುತ್ತಿದ್ದಾರೆ. ಆದ್ದರಿಂದಲೇ ಸೀತೆ, ಲಕ್ಷ್ಮಣ, ಹನುಮಂತನನ್ನು ಬೇರ್ಪಡಿಸಿದ್ದಾರೆ. ರಾಮನನ್ನು ಮಾತ್ರ ಉಳಿಸಿಕೊಂಡಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.



ಪಿರಿಯಾಪಟ್ಟಣ ತಾಲೂಕಿನ ಕೊಪ್ಪ ಗ್ರಾಮದಲ್ಲಿ ಮಾತನಾಡಿದ ಅವರು, ನರೇಂದ್ರ ಮೋದಿ ಕೆಲಸ ಮಾಡಿಲ್ಲ. ಎರಡು ಕೋಟಿ ಉದ್ಯೋಗ ಕೊಡಿಲಿಲ್ಲ. ಮೋದಿಯವರು ನುಡಿದಂತೆ ನಡೆಯಲು ಸಾಧ್ಯವಾಗಿಲ್ಲ. ಅದಕ್ಕೆ ರಾಮನನ್ನು ಮುಂದಿಟ್ಟುಕೊಂಡು ಬಂದಿದ್ದಾರೆ. ಪೆಟ್ರೋಲ್, ಡೀಸೆಲ್, ಗೊಬ್ಬರದ ಬೆಲೆ ಬಗ್ಗೆ ಮಾತನಾಡಲ್ಲ. ಈಗ ರಾಮ ರಾಮ ಅಂತಿದ್ದಾರೆ. ಜನ ಬುದ್ದಿವಂತರು, ಎಲ್ಲವೂ ಅರ್ಥ ಆಗುತ್ತದೆ ಎಂದರು.

ಬಿಜೆಪಿಯವರು ಜನರನ್ನು ಮರಳು ಮಾಡುತ್ತಿದ್ದಾರೆ. ಹಿಂದುತ್ವದ ಹೆಸರಲ್ಲಿ ಅಧಿಕಾರ ಹಿಡಿದು ಕುಳಿತಿದ್ದಾರೆ. ರಾಮಮಂದಿರ ಉದ್ಘಾಟನೆ ಮಾಡಿದ್ದಾರೆ, ವೃತ ಮಾಡುತ್ತಾರಂತೆ. ನಾವು ರಾಮನ ಪೂಜೆ ಮಾಡುವುದಿಲ್ಲವೇ? ರಾಮನ ಭಜನೆ ಮಾಡಲ್ವ? ಧನುರ್ಮಾಸದಲ್ಲಿ ನಾನೂ ಬೆಳಗ್ಗೆ ಎದ್ದು ದೇವಸ್ಥಾನಕ್ಕೆ ಹೋಗಿ ರಾಮನ ಭಜನೆ ಹಾಡುತ್ತಿದ್ದೆ. ಮೊನ್ನೆ ಬೆಂಗಳೂರಿನಲ್ಲಿ ರಾಮಮಂದಿರ ಉದ್ಘಾಟನೆ ಮಾಡಿದೆ. ಜೈ ಶ್ರೀರಾಮ್ ಅಂತ ಘೋಷಣೆ ಕೂಗಿಸಿದೆ. ನನ್ನ ಹೆಸರು ಸಿದ್ದರಾಮಯ್ಯ. ನನ್ನ ಹೆಸರಲ್ಲೇ ರಾಮ ಇದ್ದಾನೆ. ನಮ್ಮಪ್ಪನ ಹೆಸರು ಸಿದ್ದರಾಮೇಗೌಡ. ತಮ್ಮಂದಿರ ಹೆಸರು ರಾಮೇಗೌಡ ಸಿದ್ದೇಗೌಡ, ಸಿದ್ದರಾಮೇಗೌಡ. ನಾವ್ಯಾರೂ ಹಿಂದೂಗಳು ಅಲ್ಲವೇ? ಬಿಜೆಪಿಯವರು ಭಾವನೆಗಳ ಮೇಲೆ ಮತ ಕೇಳುತ್ತಾರೆ. ಅವರನ್ನು ನೀವು ನಂಬಬೇಡಿ ಎಂದು ತಿಳಿಸಿದರು.

ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದ ವೇಳೆ ನುಡಿದಂತೆ ನಡೆದಿದ್ದೇವೆ. ಬಿಜೆಪಿಯವರು ನುಡಿದಂತೆ ನಡೆದಿದ್ದಾರಾ? ಬಿಜೆಪಿಯವರು ಕೊಟ್ಟ ಮಾತಿನಂತೆ ನಡೆದುಕೊಳ್ಳಲ್ಲ. ಕಾಂಗ್ರೆಸ್ ನವರು ಕೊಟ್ಟ ಮಾತಿನಂತೆ ನಡೆಯುತ್ತೇವೆ ಎಂದರು.

# 900ಕ್ಕೂ ಹೆಚ್ಚು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಹುದ್ದೆಗೆ ಶೀಘ್ರವೇ ನೇಮಕಾತಿ ಪ್ರಕ್ರಿಯೆ: ಗೃಹ ಸಚಿವ ಪರಮೇಶ್ವರ್

ಬೆಂಗಳೂರು: ಪೊಲೀಸ್ ಸಬ್ ಇನ್ಸ್‌ಪೆಕ್ಟರ್ (PSI) ಹುದ್ದೆ ಆಸೆಯಲ್ಲಿರುವ ಆಕಾಂಕ್ಷಿಗಳಿಗೆ ಸರ್ಕಾರ ಗುಡ್ ನ್ಯೂಸ್ ನೀಡಿದೆ. ಶೀಘ್ರವೇ 403+ 660 PSI ಹುದ್ದೆಗೆ ನೇಮಕಾತಿ ಪ್ರಕ್ರಿಯೆ ಶುರು ಮಾಡುವುದಾಗಿ ಗೃಹ ಸಚಿವ ಪರಮೇಶ್ವರ್ ತಿಳಿಸಿದ್ದಾರೆ.



ಬೆಂಗಳೂರಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಹಳ ದಿನಗಳಿಂದ ನಿರೀಕ್ಷೆ ಮಾಡಿದ್ದ PSI ಪರೀಕ್ಷೆ ಯಶಸ್ವಿಯಾಗಿ, ಸುಗಮವಾಗಿ ನಡೆದಿದೆ. ಪರೀಕ್ಷೆಯಲ್ಲಿ ಯಾವುದೇ ಅಕ್ರಮಗಳು ಆಗಿಲ್ಲ. ಅಭ್ಯರ್ಥಿಗಳಿಗೆ ಯಾವುದೇ ಬ್ಲೂಟೂತ್ ಕೂಡಾ ತರಲು ಸಾಧ್ಯವಾಗಿಲ್ಲ.

54 ಸಾವಿರ ಅಭ್ಯರ್ಥಿಗಳು ಪರೀಕ್ಷೆಗೆ ನೋಂದಣಿ ಆಗಿದ್ದರು. ಇದರಲ್ಲಿ 65% ರಿಂದ 70% ಹಾಜರಾತಿ ಇತ್ತು. ಆದಷ್ಟು ಮೌಲ್ಯಮಾಪನ ಮಾಡಿ ರಿಸಲ್ಟ್ ಕೊಟ್ಟು ನೇಮಕಾತಿ ಪ್ರಕ್ರಿಯೆ ಶುರು ಮಾಡುತ್ತೇವೆ ಎಂದಿದ್ದಾರೆ.

ಮುಂದಿನ ಹಂತದಲ್ಲಿ 403 ಜನ PSI ನೇಮಕಾತಿಗೂ ಪರೀಕ್ಷೆ ಮಾಡುತ್ತೇವೆ. ಅದನ್ನು ಕೂಡಾ ಏಇಂ ಮೂಲಕವೇ ಪರೀಕ್ಷೆ ನಡೆಸುತ್ತೇವೆ. PSI ಪರೀಕ್ಷೆ ಯಶಸ್ವಿಯಾಗಿ ನಡೆಸಿದ್ದಕ್ಕೆ KEA ಮತ್ತು ಅದರ ನಿರ್ದೇಶಕರಿಗೆ ಅಭಿನಂದನೆ ಸಲ್ಲಿಸುತ್ತೇನೆ. ಬಹಳ ಎಚ್ಚರಿಕೆಯಿಂದ ಪರೀಕ್ಷೆ ಮಾಡಿದ್ದಾರೆ. ಮುಂದೆಯೂ ಕೂಡಾ ಹೀಗೆ ಮಾಡಿದರೆ ಯಾವುದೇ ಗೊಂದಲ ಇರುವುದಿಲ್ಲ ಎಂದಿದ್ದಾರೆ.

ಈಗಾಗಲೇ 403 PSI ಹುದ್ದೆಗೆ ನೋಟಿಫಿಕೇಶನ್ ಮುಗಿದು, ದೈಹಿಕ ಪರೀಕ್ಷೆ ಕೂಡಾ ಮುಗಿದಿದೆ. ಇನ್ನೂ ಪರೀಕ್ಷೆ ಮಾತ್ರ ಬಾಕಿ ಉಳಿದಿದೆ.

ಆದಷ್ಟು ಬೇಗ ಪರೀಕ್ಷೆ ನಡೆಸುತ್ತೇವೆ. ಮಂಗಳವಾರ ನಡೆದ ಪರೀಕ್ಷೆಯಲ್ಲಿ 500 ಮತ್ತೆ 403 ಹುದ್ದೆ ಸೇರಿ 900ಕ್ಕೂ ಹೆಚ್ಚು ಪೊಲೀಸ್ ಹುದ್ದೆ ಭರ್ತಿ ಆಗುತ್ತವೆ ಎಂದಿದ್ದಾರೆ.

403 ಪೋಸ್ಟ್‌ಗೆ ಪರೀಕ್ಷೆ ಆದ ಮೇಲೆ 660 PSI ಪೋಸ್ಟ್‌ಗೆ ಆರ್ಥಿಕ ಇಲಾಖೆಯ ಅನುಮತಿ ಪಡೆದಿದ್ದೇವೆ. ಅದಕ್ಕೂ ಕೂಡಾ ನೋಟಿಫಿಕೇಶನ್ ಮಾಡುತ್ತೇವೆ. ಒಟ್ಟಾರೆ ಎರಡು ವರ್ಷದಲ್ಲಿ ಈ ಎಲ್ಲಾ ಪೋಸ್ಟ್‌ಗೆ ಪ್ರಕ್ರಿಯೆ ಮುಗಿಸುತ್ತೇವೆ. ನೇಮಕಾತಿ ಆದ ಮೇಲೆ ಒಂದು ವರ್ಷ ತರಭೇತಿ ಇರಲಿದೆ. ಹೀಗಾಗಿ ಪ್ರಕ್ರಿಯೆ ಬೇಗ ಮುಗಿಸುತ್ತೇವೆ ಎಂದಿದ್ದಾರೆ.

## ಸ್ಕೂಟಿಯಲ್ಲಿ ಇಟ್ಟಿದ್ದ 1 ಲಕ್ಷ 40 ಸಾವಿರ ಕಳ್ಳತನ



ಬೆಳಗಾವಿ: ಸ್ಕೂಟಿಯಲ್ಲಿ ಇಟ್ಟಿದ್ದ 1 ಲಕ್ಷ 40 ಸಾವಿರ ರೂ. ಹಣವನ್ನ ಖದೀಮರು ಕದ್ದು ಪರಾರಿಯಾದ ಘಟನೆ ನಗರದ ಎಪಿಎಂಸಿ ತರಕಾರಿ ಮಾರುಕಟ್ಟೆಯಲ್ಲಿ ನಡೆದಿದೆ.

ಎಪಿಎಂಸಿಯಲ್ಲಿ ಇರುವ ರಾಜದೀಪ ತರಕಾರಿ ಅಂಗಡಿ ಮುಂದೆ ನಿಲ್ಲಿಸಿದ ಬೈಕ್ ನಲ್ಲಿ ಇಟ್ಟಿದ್ದ ಹಣವನ್ನು ಎಗರಸಿದ ಕಳ್ಳ ಪರಾರಿಯಾಗಿದ್ದಾನೆ. ರಾಜದೀಪ ಅಂಗಡಿ ಸಿಸಿಟಿವಿ ಕ್ಯಾಮರಾದಲ್ಲಿ ಕಳ್ಳನ ಕರಾಮತ್ತು ಸೆರೆಯಾಗಿದ್ದು, ತರಕಾರಿ ವ್ಯಾಪಾರಸ್ಥರಾದ ರಾಜು ಡಿಕೊಸ್ಟರ್ ಎಂಬುವವರಿಗೆ ಸೇರಿದ ಹಣ ಕಳ್ಳತನವಾಗಿದೆ. ಸ್ಥಳಕ್ಕೆ ಭೇಟಿ ನೀಡಿದ ಎಪಿಎಂಸಿ ಪೋಲಿಸ್ ಠಾಣೆ ಪೊಲೀಸರು ಕಳ್ಳನ ಬಂಧನಕ್ಕೆ ಬಲೆ ಬೀಸಿದ್ದಾರೆ.

## ಅಂಬೇಡ್ಕರ್ ಪ್ರತಿಮೆಗೆ ಅಪಮಾನ ಪ್ರಕರಣ; ನಾಲ್ವರು ಅರೆಸ್ಟ್



ಕಲಬುರಗಿ: ನಗರದಲ್ಲಿ ಡಾ. ಬಿ. ಆರ್ ಅಂಬೇಡ್ಕರ್ ಅವರ ಪುತ್ಥಳಿಗೆ ಅಪಮಾನ ಮಾಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಇದೀಗ ನಾಲ್ವರು ಆರೋಪಿಗಳನ್ನು ಬಂಧಿಸಿದ್ದಾರೆ.

ನಗರದ ಜೇವರ್ಗಿ ರಸ್ತೆಯಲ್ಲಿರುವ ಕೋಟನೂರ್ (ಡಿ) ಲುಂಬಿಣಿ ಉದ್ಯಾನದಲ್ಲಿರುವ ಅಂಬೇಡ್ಕರ್ ಪುತ್ಥಳಿಗೆ ಕಿಡಿಗೇಡಿಗಳು ಚಪ್ಪಲಿ ಹಾರ ಹಾಕಿ ಅಪಮಾನ ಮಾಡಿದ್ದರು.

ಈ ಘಟನೆಯನ್ನು ಖಂಡಿಸಿ ವಿವಿಧ ದಲಿತಪರ ಸಂಘಟನೆಯ ಕಾರ್ಯಕರ್ತರು ಬೀದಿಗಳಿದು ಭಾರೀ ಪ್ರತಿಭಟನೆ ನಡೆಸಿದ್ದರು.

ಘಟನೆ ಸಂಬಂಧ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪೊಲೀಸರು ಸದ್ಯ ಆರೋಪಿಗಳ ಯಾವುದೇ ಮಾಹಿತಿಗಳನ್ನು ಹಂಚಿಕೊಂಡಿಲ್ಲ. ಸೂಕ್ತ ತನಿಖೆಯ ಬಳಿಕ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# 2-3 ದಿನದಲ್ಲೇ ರೈತರ ಖಾತೆಗೆ ಬರಗಾಲ ಪರಿಹಾರ ಹಣ ಜಮೆ: ಸಚಿವ ಕೃಷ್ಣ ಬೈರೇಗೌಡ

ಕಲಬುರಗಿ: ರಾಜ್ಯದಲ್ಲಿ ಮಳೆ ಅಭಾವ ಕಾರಣ ಬರಗಾಲ ಘೋಷಣೆ ಮಾಡಿದ್ದರಿಂದ ಬರಗಾಲ ಪರಿಹಾರದ ಆರಂಭಿಕ ಕಂತು ತಲಾ 2,000 ರೂ. ಈಗಾಗಲೇ ಕಲಬುರಗಿ ಜಿಲ್ಲೆಯ 2.25 ಲಕ್ಷ ರೈತರಿಗೆ 44.74 ಕೋಟಿ ರೂ. ಜಮೆ ಮಾಡಿದ್ದು, ಬಾಕಿ ಉಳಿದ 1.60 ಲಕ್ಷ ರೈತರಿಗೆ 2-3 ದಿನದಲ್ಲಿ ಹಣ ಜಮೆಯಾಗಲಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದರು.

ಬುಧವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕಂದಾಯ ಇಲಾಖೆ ಪ್ರಗತಿ ಪರಿಶೀಲನೆ ನಡೆಸಿದ ಅವರು, ಬರಗಾಲ ಘೋಷಣೆ ಮಾಡಿ ಎನ್.ಡಿ.ಆರ್.ಎಫ್. ಮಾರ್ಗಸೂಚಿಯಂತೆ ಪರಿಹಾತ ಹಣ ಬಿಡುಗಡೆಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದು, ಇದೂವರೆಗೆ ಯಾವುದೇ ಹಣ ಬಿಡುಗಡೆಯಾಗಿಲ್ಲ. ಸಂಕಷ್ಟದಲ್ಲಿದ ರೈತರಿಗೆ ನೆರವಿಗೆ ಧಾವಿಸಲು ಎನ್.ಡಿ.ಅರ್.ಆಫ್ ಅನುದಾನ ನಿರೀಕ್ಷಿಸಿ ಪರಿಹಾರ ಹಣ ಬಿಡುಗಡೆ ಮಾಡಲಾಗಿದೆ ಎಂದರು

ರಾಜ್ಯಾದ್ಯಂತ ಒಟ್ಟಾರೆ 35 ಲಕ್ಷ ರೈತರಿಗೆ 650 ಕೋಟಿ ರೂ. ಹಣ ಬಿಡುಗಡೆ ಮಾಡಿದೆ. ಇದೂವರೆಗೆ 24 ಲಕ್ಷ ಜನರಿಗೆ 519 ಕೋಟಿ ರೂ. ಪಾವತಿಯಾಗಿದೆ.

2-3 ದಿನದಲ್ಲಿ ರಾಜ್ಯದ ಉಳಿದ 11-12 ಲಕ್ಷ ಜನರಿಗೆ ಹಣ ಜಮೆ ಮಾಡಲಾಗುತ್ತದೆ ಎಂದರು.

ಡಿ.ಬಿ.ಟಿ. ಹಣ ಪಾವತಿ ಸಂದರ್ಭದಲ್ಲಿ ಎದುರಿಸಲಾಗುತ್ತಿದ್ದು, ಅಧಾರ್, ಬ್ಯಾಂಕ್ ಲಿಂಕ್ ಅಪಡೇಟ್ ಕಾರ್ಯ ಶೇ.60 ರಿಂದ 80ಕ್ಕೆ ಹೆಚ್ಚಿಸಿದರಿಂದ ಶೇ.80ರಷ್ಟು ಜನರಿಗೆ



ಪರಿಹಾರ ಸಿಕ್ಕಿದೆ. ನಮ್ಮ ಗುರಿಯಂತೆ ಇನ್ನು ಕನಿಷ್ಠ ಶೇ.5ರಷ್ಟು ಅಪಡೇಟ್ ಕಾರ್ಯ ಮಾಡ ಬೇಕಿದೆ. ಮುಂದಿನ ಕಂತು ಪಾವತಿಯೊಳಗೆ ಈ ಸಮಸ್ಯೆ ಬಗೆಹರಿಸಬೇಕು. ಇದನ್ನು ಮಿಷನ್ ಮೋಡ್ ನಲ್ಲಿ ಮಾಡಬೇಕು ಎಂದು ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅವರಿಗೆ ಸಚಿವರು ನಿರ್ದೇಶನ ನೀಡಿದರು.

ಕಳೆದ ಜುಲೈ ಮಾಹೆಯಲ್ಲಿ ಜಿಲ್ಲೆಯಲ್ಲಿ ಕಂದಾಯ ವಿಭಾಗ ಮಟ್ಟದ ಪ್ರಗತಿ ಪರಿಶೀಲನೆ ಮಾಡಿದಾಗ, ಕಲಬುರಗಿ ಜಿಲ್ಲೆಯಲ್ಲಿ ತಹಶೀಲ್ದಾರ ಬಳಿ ಬಾಕಿ ಇದ್ದ 790 ಕಂದಾಯ ಕೋರ್ಟ್ ಪ್ರಕರಣ ಇದೀಗ 294ಕ್ಕೆ ಇಳಿದಿದೆ.

ಇದಲ್ಲದೆ ರಾಜ್ಯದಲ್ಲಿ 6 ತಿಂಗಳ ಹಿಂದೆ ಒಂದು ವರ್ಷದ ಮೀರಿದ 60 ಸಾವಿರ ಪ್ರಕರಣಗಳು ವಿಲೇವಾರಿ ಬಾಕಿ ಇದ್ದವು. ಇದೀಗ ಅವು 34 ಸಾವಿರಕ್ಕೆ ಇಳಿಕೆಯಾಗಿದೆ. ಅಷ್ಟರ ಮಟ್ಟಿಗೆ ಕಂದಾಯ ನ್ಯಾಯಾಲಯಗಳು ತ್ವರಿತವಾಗಿ ಕೆಲಸ ನಿರ್ವಹಿಸಿವೆ ಎಂದು ಸಮಾಧಾನ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಐ.ಟಿ-ಬಿ.ಟಿ ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ, ಡಿ.ಸಿ. ಬಿ.ಫೌಜಿಯಾ ತರನ್ನುಮ್, ಶಾಸಕರಾದ ಎಂ.ವೈ.ಪಾಟೀಲ, ಕನೀಜ್ ಫಾತಿಮಾ, ಕಂದಾಯ ಇಲಾಖೆಯ ಆಯುಕ್ತ ಸುನೀಲ ಕುಮಾರ, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ ಸೇರಿದಂತೆ ತಹಶೀಲ್ದಾರರು, ಸಬ್ ರಿಜಿಸ್ಟ್ರಾರ್, ಇತರೆ ಅಧಿಕಾರಿಗಳು ಇದ್ದರು.

## ಅಪಘಾತ; ಇಬ್ಬರು ಸ್ಥಳದಲ್ಲಿಯೇ ಸಾವು: 15 ಜನರಿಗೆ ಗಂಭೀರ ಗಾಯ

ಗದಗ : ಜಿಲ್ಲೆಯ ಮುಡರಗಿ ತಾಲೂಕಿನ ಹಳ್ಳಿಗುಡಿ ಗ್ರಾಮದ ಬಳಿ ಸರ್ಕಾರಿ ಬಸ್ ಹಾಗೂ ಲಾರಿ ನಡುವೆ ಭೀಕರ ಅಪಘಾತ ಸಂಭವಿಸಿರುವ ಬಗ್ಗೆ ವರದಿಯಾಗಿದೆ. ಈ ದುರ್ಘಟನೆಯಲ್ಲಿ ಇಬ್ಬರು ಸ್ಥಳದಲ್ಲಿಯೇ ಸಾವನ್ನಪ್ಪಿದ್ದು, 15ಕ್ಕೂ ಹೆಚ್ಚು ಮಂದಿ ಗಾಯಗೊಂಡಿರುವ ಬಗ್ಗೆ ಸದ್ಯಕ್ಕೆ ಮಾಹಿತಿ ಲಭ್ಯವಾಗಿದ್ದು, ಇವರಲ್ಲಿ ಮೂವರ ಸ್ಥಿತಿ ಗಂಭೀರವಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಅಪಘಾತದ ಹಿನ್ನೆಲೆಯಲ್ಲಿ ಲಾರಿ ಹಾಗೂ ಸರ್ಕಾರಿ ಬಸ್ ನಜ್ಜುಗುಜ್ಜಾಗಿರೋದಾಗಿ ತಿಳಿದು ಬಂದಿದೆ. ಇನ್ನು ಗಾಯಾಳುಗಳನ್ನು ಜಿಮ್ಸ್ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಬಸ್ ನಲ್ಲಿದ್ದ ಓರ್ವ ಮಹಿಳಾ ಪ್ರಯಾಣಿಕ ಹಾಗೂ ಲಾರಿ ಚಾಲಕ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಲಾರಿ ಚಾಲಕ ವಿನೋದಕುಮಾರ್ ಹಾಗೂ ಕೊಪ್ಪಳ ಜಿಲ್ಲೆಯ ಭಾಗ್ಯನಗರ ನಿವಾಸಿ ಗೀತಾ ಎನ್ನಲಾಗಿದೆ. ಮೃತ ಮಹಿಳೆ ಸವದತ್ತಿ ತಾಲೂಕಿನ ಯಲ್ಲಮ್ಮನಗುಡ್ಡಕ್ಕೆ ಹೊರಟಿದ್ದರು ಎನ್ನಲಾಗಿದೆ. ಸ್ಥಳಕ್ಕೆ ಆಗಮಿಸಿದ ಪೊಲೀಸರು ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿದ್ದಾರೆ.

# ಉತ್ತರ ಕರ್ನಾಟಕ ಜಿಲ್ಲೆಯಲ್ಲಿ ಲುಲು ಗ್ರೂಪ್‌ನಿಂದ 300 ಕೋಟಿ ಹೂಡಿಕೆ: ಸಚಿವ ಎಂ.ಬಿ.ಪಾಟೀಲ

ಬೆಂಗಳೂರು: 'ವಿಶ್ವ ಆರ್ಥಿಕ ವೇದಿಕೆಯ ದಾವೋಸ್ ಶೃಂಗಸಭೆಯಲ್ಲಿ ಬಹುರಾಷ್ಟ್ರೀಯ ಕಂಪನಿಗಳ ಜತೆಗೆ ಮಾಡಿಕೊಂಡಿರುವ ಹಲವು ಒಪ್ಪಂದಗಳ ಫಲವಾಗಿ ಕರ್ನಾಟಕ ರಾಜ್ಯಕ್ಕೆ 23 ಸಾವಿರ ಕೋಟಿ ರೂಪಾಯಿಗೂ ಹೆಚ್ಚಿನ ಮೊತ್ತದ ಬಂಡವಾಳ ಹರಿದು ಬರಲಿದೆ ಎಂದು ಬೃಹತ್ ಹಾಗೂ ಮಧ್ಯಮ ಕೈಗಾರಿಕೆಗಳು ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ.

ವಿಧಾನಸೌದದ ಸಮ್ಮೇಳನ ಸಭಾಂಗಣದಲ್ಲಿ ಬುಧವಾರ ನಡೆದ ದಾವೋಸ್ ಪ್ರವಾಸದ ಫಲಶ್ರುತಿ ತಿಳಿಸುವ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಚಿವ ಎಂ.ಬಿ. ಪಾಟೀಲ್, 'ನೆಸ್ಲೆ, ಎಚ್‌ಪಿ, ಎಚ್‌ಸಿಎಲ್, ವೋಲ್ವೊ ಗ್ರೂಪ್, ಐಕಿಯಾ, ಸೋನಿ, ಮೈಕ್ರೊಸಾಫ್ಟ್, ಹಿಟಾಚಿ ಮತ್ತಿತರ ಜಾಗತಿಕ ಉದ್ಯಮಗಳ ಪ್ರಮುಖರ ಜತೆಗೆ ರಾಜ್ಯದ ನಿಯೋಗವು 50ಕ್ಕೂ ಹೆಚ್ಚಿನ ಸಭೆಗಳನ್ನು ನಡೆಸಿತು. ಬೆಂಗಳೂರಿನಲ್ಲಿ 100 ಮೆಗಾವಾಟ್ ಸಾಮರ್ಥ್ಯದ ಬೃಹತ್ ಗಾತ್ರದ ಡೇಟಾ ಸೆಂಟರ್ ಸ್ಥಾಪಿಸಲು ವೆಬ್ ವರ್ಕ್ಸ್ ಕಂಪನಿಯು 20,000 ಕೋಟಿ ಮೊತ್ತದ ಬಂಡವಾಳ ಹೂಡಿಕೆ ಮಾಡಲು ಬದ್ಧತೆ ಪ್ರಕಟಿಸಿದೆ. ಇದರಿಂದ 1000 ಜನರಿಗೆ ಉದ್ಯೋಗ ಅವಕಾಶಗಳು ದೊರೆಯಲಿವೆ. ಡಿಜಿಟಲ್ ಕೌಶಲ ವೃದ್ಧಿ ಪ್ರಕ್ರಿಯೆ ಹಮ್ಮಿಕೊಳ್ಳಲು ಮೈಕ್ರೊಸಾಫ್ಟ್ ವಾಗ್ದಾನ ಮಾಡಿದೆ. ಗ್ರಾಮೀಣ ಪ್ರದೇಶ ಕೇಂದ್ರಿತ ಆರ್ಥಿಕ ಬೆಳವಣಿಗೆ ಉತ್ತೇಜಿಸಲು ಹಿಟಾಚಿ ಕಂಪನಿಯು 'ಎಂಒಯು'ಗೆ ಸಹಿ ಹಾಕಿದೆ' ಎಂದು ಹೇಳಿದರು.

ಉತ್ತರ ಕರ್ನಾಟಕ ಭಾಗದಲ್ಲಿ ಹೂಡಿಕೆ: 'ಬೆಂಗಳೂರಿನ ಆಚೆ'ಗೂ ಕೈಗಾರಿಕೆಗಳ ಅಭಿವೃದ್ಧಿಗೆ ಸಮಾನ ಕೊಡುಗೆ ನೀಡಲು ಉತ್ತರ ಕರ್ನಾಟಕ ಭಾಗದಲ್ಲಿ ತಮ್ಮ ವಹಿವಾಟು ಆರಂಭಿಸಲು ಹಲವಾರು ಕಂಪನಿಗಳು ಆಸಕ್ತಿ ತೋರಿಸಿವೆ. ವಿಜಯಪುರ, ಹುಬ್ಬಳ್ಳಿ- ಧಾರವಾಡ, ಬೆಳಗಾವಿ



ಮತ್ತಿತರ ಸ್ಥಳಗಳಲ್ಲಿ ಕೈಗಾರಿಕೆಗಳ ಸಮಾನ ಅಭಿವೃದ್ಧಿ ಸಾಧಿಸುವುದಕ್ಕೆ ಕೊಡುಗೆ ನೀಡುವ ಹಲವಾರು ಉಪಕ್ರಮಗಳನ್ನು ಹಮ್ಮಿಕೊಳ್ಳಲಿವೆ' ಎಂದು ಎಂ.ಬಿ. ಪಾಟೀಲ್ ತಿಳಿಸಿದರು.

ಉತ್ತರ ಕರ್ನಾಟಕದ ಅಭಿವೃದ್ಧಿಗೆ ಆದ್ಯತೆ: 'ಲುಲು ಗ್ರೂಪ್, ಬಿಎಲ್ ಅಗ್ರೊ ವಿಜಯಪುರದಲ್ಲಿ ತಮ್ಮ ನೆಲೆ ವಿಸ್ತರಿಸಲಿವೆ. ವಿಜಯಪುರದಲ್ಲಿ 300 ಕೋಟಿ ರೂಪಾಯಿ ವೆಚ್ಚದಲ್ಲಿ ಹೊಸ ಆಹಾರ ಸಂಸ್ಕರಣಾ ಘಟಕ ಸ್ಥಾಪಿಸಲು ಹಾಗೂ ಕಲಬುರಗಿಯಲ್ಲಿನ ತನ್ನ ಘಟಕದ ಸಾಮರ್ಥ್ಯ ವಿಸ್ತರಿಸುವ ಉದ್ದೇಶಕ್ಕೆ ಬಂಡವಾಳ ಹೂಡಿಕೆ ಮಾಡಲು ಲುಲು ಸಮೂಹವು ಯೋಜಿಸಿದೆ. 'ಬಿಎಲ್ ಅಗ್ರೊ ಕಂಪನಿಯು ವಿಜಯಪುರದಲ್ಲಿ ಸುಸಜ್ಜಿತ ಆಹಾರ ಸಂಸ್ಕರಣಾ ಘಟಕವನ್ನು ಆರಂಭಿಸಲಿದೆ. ದೇಶಿ ಮತ್ತು ರಫ್ತು ಮಾರುಕಟ್ಟೆಗಳಿಗೆ ಪೂರೈಸಲು ಸ್ಥಳೀಯ ಆಹಾರ ಉತ್ಪನ್ನಗಳನ್ನು ಖರೀದಿಸಿ ಅವುಗಳ ಶ್ರೇಣೀಕರಣ, ವಿಂಗಡಣೆ ಮತ್ತು ಪ್ಯಾಕೇಜಿಂಗ್ ಉದ್ದೇಶಕ್ಕೆ ಈ ಘಟಕ ನೆರವಾಗಲಿದೆ ಎಂದು ಎಂ.ಬಿ. ಪಾಟೀಲ್ ಹೇಳಿದರು.

'ಸ್ಮಾರ್ಟ್ ಸಿಟಿ ಮೂಲಸೌಲಭ್ಯ, ನವೀಕರಿಸಬಹುದಾದ ಇಂಧನ ಪರಿಹಾರಗಳು, ಡೇಟಾ ಕೇಂದ್ರಗಳು ಮತ್ತು ಸಂಬಂಧಿತ ವಲಯಗಳಲ್ಲಿ ವಿವಿಧ ಕಂಪನಿಗಳಿಂದ ಒಟ್ಟಾರೆ 3,000 ಕೋಟಿ ರೂ. ಮೊತ್ತದ ಬಂಡವಾಳ ಹೂಡಿಕೆಯ ಒಳಹರಿವು ಕಂಡುಬಂದಿದೆ ಎಂದು ಎಂ.ಬಿ. ಪಾಟೀಲ್ ತಿಳಿಸಿದರು.

'ಎಬಿ ಇನ್‌ಬೇವ್ ಇಂಡಿಯಾ ಕಂಪನಿಯು ಕರ್ನಾಟಕದಲ್ಲಿ ತನ್ನ ಮದ್ಯ ತಯಾರಿಕಾ ಘಟಕಗಳ ತಯಾರಿಕಾ ಸಾಮರ್ಥ್ಯ ಹೆಚ್ಚಿಸಲು 400 ಕೋಟಿ ಮೊತ್ತದ ಬಂಡವಾಳ ತೊಡಗಿಸುವ ಇಂಗಿತ ವ್ಯಕ್ತಪಡಿಸಿದೆ' ಎಂದು ಸಚಿವ ಎಂ.ಬಿ. ಪಾಟೀಲ್ ವಿವರ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ ಎಸ್ ಸೆಲ್ವಕುಮಾರ್, ಐಟಿಬಿಟಿ ಕಾರ್ಯದರ್ಶಿ ಶ್ರೀಮತಿ ಕಪೂರ್‌ಕೌರ್, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯ ಆಯುಕ್ತೆ ಗುಂಜನ್ ಕೃಷ್ಣ, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ) ಸಿಇಒ ಡಾ. ಮಹೇಶ್ ಮತ್ತಿತರ ಉನ್ನತ ಅಧಿಕಾರಿಗಳು ಇದ್ದರು.

### ಮತದಾರರ ಪಟ್ಟಿ ಪರಿಷ್ಕರಣೆ: ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆ

# ಮತದಾರರ ಪಟ್ಟಿ ಪರಿಷ್ಕರಣೆ ಸಮರ್ಪಕ: ಅಂಜುಂ ಪರ್ವೇಜ್ ಮೆಚ್ಚುಗೆ

ಬೆಳಗಾವಿ: ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ಸಂಕ್ಷಿಪ್ತ ಪರಿಷ್ಕರಣೆ ಕಾರ್ಯ ಸಮರ್ಪಕವಾಗಿ ನಡೆದಿದ್ದು, ರಾಜ್ಯದಲ್ಲಿಯೇ ಅತೀ ಹೆಚ್ಚು ಅಂದರೆ ಒಂದು ಲಕ್ಷಕ್ಕೂ ಅಧಿಕ ಹೊಸ ಮತದಾರರು ನೋಂದಣಿ ಮಾಡಿಕೊಂಡಿರುತ್ತಾರೆ ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಯೂ ಆಗಿರುವ ಜಿಲ್ಲಾ ಮತದಾರರ ಪಟ್ಟಿಯ ವೀಕ್ಷಕರಾದ ಅಂಜುಂ ಪರ್ವೇಜ್ ಹೇಳಿದರು.

ಮತದಾರರ ಪಟ್ಟಿ ವಿಶೇಷ ಸಂಕ್ಷಿಪ್ತ ಪರಿಷ್ಕರಣೆ-2024ಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಬುಧವಾರ(ಜ.24) ನಡೆದ ನೋಂದಾಯಿತ ರಾಜಕೀಯ ಪಕ್ಷಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಂಕ್ಷಿಪ್ತ ಪರಿಷ್ಕರಣೆ ಬಳಿಕ ಮತದಾರರ ಪಟ್ಟಿಯನ್ನು ಈಗಾಗಲೇ ಜ.22 ರಂದು ಪ್ರಕಟಿಸಲಾಗಿದ್ದು, ಎಲ್ಲ ಏಳು ರಾಜಕೀಯ ಪಕ್ಷಗಳಿಗೆ ಸಾಫ್ಟ್ ಕಾಪಿ ನೀಡಲಾಗಿದೆ. ಮುದ್ರಿತ ಪಟ್ಟಿಯನ್ನು ಕೂಡ ಆಯಾ ಪಕ್ಷಗಳ ಕಚೇರಿಗೆ ಕಳಿಸಲಾಗುತ್ತಿದೆ.

ಬೆಳಗಾವಿಯಲ್ಲಿ ಅತೀ ಅಂದರೆ ಒಂದು ಲಕ್ಷಕ್ಕೂ ಅಧಿಕ ಹೆಚ್ಚು ಹೊಸ ಮತದಾರರ ಸೇರ್ಪಡೆಯಾಗಿದ್ದಾರೆ. 45 ಸಾವಿರಕ್ಕೂ ಅಧಿಕ ಮೃತರ ಹೆಸರುಗಳನ್ನು ಪಟ್ಟಿಯಿಂದ ಕೈಬಿಡಲಾಗಿದ್ದು, ಒಟ್ಟಾರೆ ಮತದಾರರ ಪಟ್ಟಿಯ ಸಂಕ್ಷಿಪ್ತ ಪರಿಷ್ಕರಣೆ ಸಮರ್ಪಕವಾಗಿ ಮಾಡಲಾಗಿರುತ್ತದೆ.

ಕಳೆದ ವರ್ಷಕ್ಕಿಂತ ಶೇ. 1.46 ರಷ್ಟು ಮತದಾರರ ಸಂಖ್ಯೆ ಹೆಚ್ಚಳವಾಗಿದೆ. ಮತದಾರರ ಪಟ್ಟಿ ಪರಿಷ್ಕರಣೆ ವೇಳೆ ಪ್ರತಿ ಸಂದರ್ಭದಲ್ಲೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡಲಾಗಿದೆ. ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಏನಾದರೂ ಲೋಪದೋಷ ಅಥವಾ ಕೊರತೆಗಳು ಕಂಡುಬಂದರೆ ಮಾಹಿತಿಯನ್ನು ನೀಡಬೇಕು ಎಂದರು.

ಪ್ರತಿ ಬಿ.ಎಲ್.ಓ.ಗಳ ಮಾಹಿತಿಯನ್ನು ರಾಜಕೀಯ ಪಕ್ಷಗಳಿಗೆ ಮಾಹಿತಿಯನ್ನು ನೀಡಬೇಕು. ಇದರಿಂದ



ಸಮನ್ವಯ ಸಾಧ್ಯವಾಗಲಿದೆ ಎಂದರು.

ಪ್ರತಿ ಮತಕ್ಷೇತ್ರವಾರು ರಾಜಕೀಯ ಪಕ್ಷಗಳ ಬೂತ್ ಮಟ್ಟದ ಏಜೆಂಟರ ಕ್ರೋಢೀಕೃತ ಮಾಹಿತಿಯನ್ನು ಬಿ.ಎಲ್.ಓ.ಗಳಿಗೂ ಒದಗಿಸುವಂತೆ ತಿಳಿಸಿದರು.

ರಾಜಕೀಯ ಪಕ್ಷಗಳ ಸಹಕಾರ ಮತ್ತು ಅಧಿಕಾರಿಗಳ ಶ್ರಮದಿಂದ ಪರಿಷ್ಕರಣೆ ಸಮರ್ಪಕವಾಗಿ ನಡೆದಿದೆ. ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇರುವುದನ್ನು ಮತದಾರರು ಸ್ವತಃ ತಾವೇ ಆನ್ ಲೈನ್ ಮೂಲಕ ಪರಿಶೀಲನೆ ಮಾಡಬಹುದು. ನಾಗರಿಕರು ತಮ್ಮ ಹೆಸರುಗಳನ್ನು ಮುಂಚಿತವಾಗಿಯೇ ಪರಿಶೀಲಿಸಬೇಕು ಎಂದು ಅಂಜುಂ ಪರ್ವೇಜ್ ತಿಳಿಸಿದರು.

**ಮತದಾರರ ನೋಂದಣಿಗೆ ಅವಕಾಶ; 90 ಹೊಸ ಮತಗಟ್ಟೆ ಸ್ಥಾಪನೆ:**

ಜಿಲ್ಲೆಯಾದ್ಯಂತ ಹೊಸದಾಗಿ ಯುವ ಮತದಾರರ ಸೇರ್ಪಡೆಗೆ ಸಂಬಂಧಿಸಿದಂತೆ ಕಾಲೇಜುಗಳಲ್ಲಿ ವಿಶೇಷ ಅಭಿಯಾನ ನಡೆಸಲಾಗಿತ್ತು.

ಆಯಾ ಕಾಲೇಜುಗಳಲ್ಲಿ ಶಿಬಿರ ಆಯೋಜಿಸಿ ಹದಿನೇಳು ವರ್ಷ ಪೂರ್ಣಗೊಳಿಸಿದ ವಿದ್ಯಾರ್ಥಿಗಳಿಂದಲೇ ಆನ್ ಲೈನ್ ಅರ್ಜಿಗಳನ್ನು ಭರ್ತಿ ಮಾಡುವ ಮೂಲಕ ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಇದಲ್ಲದೇ ಮಹಿಳಾ ಮತದಾರರ ಹೆಸರು ಸೇರ್ಪಡೆಗೂ ಕೂಡ ವಿಶೇಷ ಅಭಿಯಾನ ಕೈಗೊಂಡ ಪರಿಣಾಮ ಲಿಂಗಾನುಪಾತ ಪ್ರಮಾಣದಲ್ಲಿ ಮಹಿಳಾ ಮತದಾರರ ಸೇರ್ಪಡೆ ಕೂಡ ಹೆಚ್ಚಳವಾಗಿದೆ. ಜಿಲ್ಲೆಯಲ್ಲಿ ಮತದಾನಕ್ಕೆ ಅರ್ಹರಾಗಿರುವ ನೂರು ಜನರಲ್ಲಿ ಶೇ.71 ರಷ್ಟು ಮತದಾರರಿದ್ದಾರೆ.

ಮತದಾರರು ಎರಡು ಕಿ.ಮೀ. ಗಿಂತ ಅಧಿಕ ಹೋಗಬಾರದು ಎಂಬ ಆಶಯದೊಂದಿಗೆ ಜಿಲ್ಲೆಯಲ್ಲಿ 90 ಹೊಸ ಮತಗಟ್ಟೆಗಳನ್ನು ಸ್ಥಾಪಿಸಲಾಗಿದೆ. ಇದಕ್ಕೆ ಚುನಾವಣಾ ಆಯೋಗ ಕೂಡ ಅನುಮೋದನೆ ನೀಡಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಹಳೆ ಮತಗಟ್ಟೆ ಇರುವ ಕಂಪೌಂಡ್ ನಲ್ಲಿಯೇ ಹೊಸ ಕಟ್ಟಡ ನಿರ್ಮಾಣವಾಗಿರುವ ಕಡೆಗಳಲ್ಲಿ ಹೊಸ ಕಟ್ಟಡಕ್ಕೆ ಮತಗಟ್ಟೆ ಸ್ಥಳಾಂತರ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ನಾಮಪತ್ರ ಸಲ್ಲಿಕೆಗೆ ನಿಗದಿಪಡಿಸಲಾಗಿರುವ ಕಡೆಯ ದಿನದವರೆಗೆ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಣಿ, ಬದಲಾವಣೆ, ಹೆಸರು ಕೈಬಿಡುವುದಕ್ಕೆ ಅರ್ಜಿ ಸಲ್ಲಿಸಲು ಅವಕಾಶವಿರುತ್ತದೆ. ಏನಾದರೂ ಗೊಂದಲ ಕಂಡುಬಂದರೆ ಈಗಲೂ ಸರಿಪಡಿಸಲು ಅವಕಾಶಗಳಿವೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ, ಪ್ರೊಬೇಷನರಿ ಐ.ಎ.ಎ. ಅಧಿಕಾರಿ ಶುಭಂ ಶುಕ್ಲಾ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ಉಪ ವಿಭಾಗಾಧಿಕಾರಿ ಶ್ರವಣ ನಾಯಕ ಹಾಗೂ ಕಾಂಗ್ರೆಸ್, ಬಿಜೆಪಿ ಸೇರಿದಂತೆ ವಿವಿಧ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ದಿ 26 ರಂದು ಕೋಳಿ ಬೆಸ್ತ ಸಮಾಜದ ನೌಕರರ ಸಭೆಗೆ ಅಹ್ವಾನ

ಬೆಳಗಾವಿ ದಿ 24:-ಕರ್ನಾಟಕ ರಾಜ್ಯ ಕೋಳಿ -ಬೆಸ್ತ ಸಮಾಜ ನೌಕರರಕ್ಷೇಮಾಭಿವೃದ್ಧಿ ಸಂಘ, ಬೆಳಗಾವಿ ಜಿಲ್ಲಾ ಘಟಕದ ವತಿಯಿಂದ ಶುಕ್ರವಾರ ದಿ 26 ರಂದು ಹುಕ್ಕೇರಿ ಹಾಗೂ ಗೋಕಾಕ ನಗರಗಳಲ್ಲಿ ಸಭೆ ಆಯೋಜನೆ ಮಾಡಲಾಗಿದೆ

ಅಂದು ಮಧ್ಯಾಹ್ನ 3 ಘಂಟೆಗೆ ಹುಕ್ಕೇರಿ ತಾಲೂಕಿನಲ್ಲಿ ಕಾರ್ಯ ಮಾಡುತ್ತಿರುವ ಸಮಾಜದ ಸರಕಾರಿ, ಅರೆ ಸರಕಾರಿ, ನಿಗಮಮಂಡಳಿಯಲ್ಲಿ ಕಾರ್ಯನಿರ್ವಹಿಸುವ ನೌಕರರು ಹಾಗೂ ನಿವೃತ್ತಿ ನೌಕರರುಗಳ ಸಭೆಯನ್ನು ಹುಕ್ಕೇರಿಯ ಸಂಕೇಶ್ವರ ರಸ್ತೆಯಲ್ಲಿರುವ ಎಸ್ ಎಸ್ ಕನ್ವೆಶ್ಚನ್ ಹಾಲ್ ನಲ್ಲಿ ಮಧ್ಯಾಹ್ನ 3 ಘಂಟೆಗೆ ಕರೆಯಲಾಗಿದೆ ಸಭೆಯಲ್ಲಿ ಫೆಬ್ರವರಿ 4 ರಂದು ಬೆಳಗಾವಿ ಯಲ್ಲಿ ನಡೆಯುವ ಸಮಾಜದ ಬೃಹತ್ ಜನಜಾಗೃತಿಸ್ವಾಭಿಮಾನ ಸಮಾವೇಶ ಹಾಗೂ ತಾಲೂಕು ನೌಕರರ ಸಂಘಟನೆ ರಚನೆ ಹಾಗೂ ಇತರೆ ಮುಖ್ಯ ವಿಚಾರಗಳ ಕುರಿತು ಚರ್ಚಿಸಲಾಗುವುದು

ಜಿಲ್ಲಾ ಸಮಾಜ ಸಂಘದ ಅಧ್ಯಕ್ಷರಾದ ದಿಲೀಪ್ ಕುಮಾರ್ ಕುರಂದವಾಡೆಯವರು ಸಭೆಗೆ ಚಾಲನೆ ನೀಡುವರು, ತಾಲೂಕು ಸಮಾಜ ಸಂಘದ ಅಧ್ಯಕ್ಷರಾದ ಕಿಶೋರ್ ಶಿರಗೆ ಯವರು ಸೇರಿದಂತೆ ಸಮಾಜದ ಬಾಂಧವರು, ನೌಕರರು ಉಪಸ್ಥಿತರಿರುವರು

ಸಂಜೆ 5 ಘಂಟೆಗೆ ಗೋಕಾಕ ನಗರದ ಹೊಸಪೇಟೆ ಗಲ್ಲಿಯಲ್ಲಿರುವ ವಿಠ್ಠಲ ಮಂದಿರದಲ್ಲಿ ಸಭೆ ನಡೆಯಲಿದ್ದು, ತಾಲೂಕಾ ಅಧ್ಯಕ್ಷರಾದ ಎಮ್ ಎಲ್ ತಳವಾರರವರು ಸಭೆಯನ್ನು ಉದ್ಘಾಟನೆ ಮಾಡುವರು

ಈ ಸಭೆಗಳಲ್ಲಿ ನೌಕರರ ಸಂಘದ ಜಿಲ್ಲಾ ಉಪಾಧ್ಯಕ್ಷರಾದ ಸಂಜೀವ ಮುತ್ತೆಪ್ಪಗೋಳ, ಪ್ರಧಾನಕಾರ್ಯದರ್ಶಿ ಅಶೋಕ ಕಬ್ಬಲಿಗೇರ, ಕೋಶಾಧ್ಯಕ್ಷರಾದ ಗಣಪತಿ ಬಾರ್ಕಿ, ಸಂಘಟನಾ ಕಾರ್ಯದರ್ಶಿಗಳಾದ ಶ್ರೀಮತಿ ಚನ್ನಮ್ಮ ಶೀಗಿಹೊಳಿಯವರು ಭಾಗವಹಿಸುವರು, ಕಾರಣ ಹುಕ್ಕೇರಿ ಹಾಗೂ ಗೋಕಾಕ ತಾಲೂಕಿನ ನೌಕರ ಬಂಧು ಗಳು ಆಯಾ ತಾಲೂಕಿನ ಸಭೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿರ ಬೇಕಾಗಿ ಜಿಲ್ಲಾ ಅಧ್ಯಕ್ಷರಾದ ಬಸವರಾಜ ಸುಣಗಾರ ರವರು ವಿನಂತಿಸಿದ್ದಾರೆ.



## ತುಂಗಭದ್ರಾ ಕಾಲುವೆ ಕಾಮಗಾರಿಯಲ್ಲಿ 650 ಕೋಟಿ ರೂ.ಅವ್ಯವಹಾರ: 28 ಇಂಜಿನೀಯರ್ಸ್ ಅಮಾನತು

ರಾಯಚೂರು: ನಕಲಿ ದಾಖಲೆ ಸೃಷ್ಟಿಸಿ ತುಂಗಭದ್ರಾ ಎಡದಂಡೆ ಕಾಲುವೆಯ ನವೀಕರಣ ಕಾಮಗಾರಿಯಲ್ಲಿ 650 ಕೋಟಿ ರೂಪಾಯಿ ಭ್ರಷ್ಟಾಚಾರ ಸಂಬಂಧ 28 ಇಂಜಿನೀಯರ್ಗಳನ್ನು ಅಮಾನತು ಮಾಡಲಾಗಿದೆ.

ತುಂಗಭದ್ರಾ ಎಡದಂಡೆ ಕಾಲುವೆ ನವೀಕರಣ ಕಾಮಗಾರಿಗಳಲ್ಲಿ ನಕಲಿ ದಾಖಲೆ ಸೃಷ್ಟಿಸಿ **KNNL** ನಲ್ಲಿ 650 ಕೋಟಿ ರೂಪಾಯಿಯನ್ನು 28 ಅಭಿಯಂತರರು ಅವ್ಯವಹಾರ ಮಾಡಿದ್ದಾರೆ.

ಈ ಹಿನ್ನೆಲೆಯಲ್ಲಿ ಜಲಸಂಪನ್ಮೂಲ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಎನ್.ಹರ್ಷ ಅವರು ಅಮಾನತು ಆದೇಶ ಹೊರಡಿಸಿದ್ದಾರೆ. ಭ್ರಷ್ಟ ಅಧಿಕಾರಿಗಳಿಗೆ ಸರ್ಕಾರ ಕೊನೆಗೂ ಶಾಕ್ ನೀಡಿದಂತೆ ಆಗಿದೆ.

ಕೊಪ್ಪಳ ಮತ್ತು ರಾಯಚೂರು ಜಿಲ್ಲೆಯಲ್ಲಿ 2009-10 ಮತ್ತು 2010-11ರಲ್ಲಿ ತುಂಗಭದ್ರಾ ಎಡದಂಡೆ ಕಾಲುವೆಯ ನವೀಕರಣ ಕಾಮಗಾರಿಗಳಲ್ಲಿ ಅವ್ಯವಹಾರ ಮಾಡಲಾಗಿತ್ತು.

ಇದರಲ್ಲಿ ಶಾಮೀಲು ಆಗಿದ್ದ 28 ಇಂಜಿನೀಯರ್ಗಳು ಸುಮಾರು 650 ಕೋಟಿ ರೂಪಾಯಿಗಳಷ್ಟು ಅವ್ಯವಹಾರ ಮಾಡಿದ್ದಾರೆ. ನಕಲಿ ದಾಖಲೆಗಳನ್ನು ಸೃಷ್ಟಿಸಿ ಯಾವುದೇ ಕಾಮಗಾರಿ ಮಾಡದೆ ಗುತ್ತಿಗೆದಾರರ ಜತೆ ಶಾಮೀಲಾಗಿ ಬಿಲ್ ಪಾವತಿ ಮಾಡಿ ದೊಡ್ಡಮಟ್ಟದಲ್ಲಿ ಭ್ರಷ್ಟಾಚಾರ ಮಾಡಿದ್ದರು.

## ಹೆಣ್ಣು ಮಕ್ಕಳ, ಆರೋಗ್ಯ, ಸುರಕ್ಷತೆಗೆ ಆದ್ಯತೆ: ಸಚಿವೆ ಹೆಬ್ಬಾಳಕರ್

ಬೆಳಗಾವಿ: ರಾಜ್ಯದಲ್ಲಿ ಹೆಣ್ಣು ಮಕ್ಕಳ ಶಿಕ್ಷಣ, ಆರೋಗ್ಯ, ಸುರಕ್ಷತೆಗೆ ಸರ್ಕಾರ ಹೆಚ್ಚಿನ ಅದ್ಯತೆ ನೀಡಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಆರ್. ಹೆಬ್ಬಾಳಕರ್ ಹೇಳಿದರು.

ಬೆಳಗಾವಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಆಶ್ರಯದಲ್ಲಿ ಆಯೋಜಿಸಿದ್ದ "ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ-2024" ರ ಕಾರ್ಯಕ್ರಮದಲ್ಲಿ ಸಚಿವರು ಪಾಲ್ಗೊಂಡು ಮಾತನಾಡಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮೂಲಕ ಸರ್ಕಾರ ಹೆಣ್ಣು ಮಕ್ಕಳಿಗೆ ಬಹಳ ಪ್ರೋತ್ಸಾಹ ನೀಡುತ್ತಿದೆ. ಹೆಣ್ಣು ಮಕ್ಕಳ ಒಳಿತಿಗಾಗಿಯೇ ಹತ್ತು ಹಲವು ಕಾರ್ಯಕ್ರಮಗಳನ್ನು ರೂಪಿಸಿದೆ. ಪ್ರತಿ ಮನೆಯಲ್ಲೂ ಗೃಹಲಕ್ಷ್ಮೀಯಾದ ಹೆಣ್ಣು ಮಗಳು ಇರಬೇಕೆನ್ನುವುದು ಸರ್ಕಾರದ ಆಶಯವಾಗಿದೆ . ಇತ್ತೀಚೆಗೆ ಹೆಚ್ಚುತ್ತಿರುವ ಹೆಣ್ಣು ಭ್ರೂಣಹತ್ಯೆ ತಡೆಗೆ ಕಠಿಣ ಕ್ರಮಕ್ಕೆ ಮುಂದಾಗಿದೆ ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆಯಾಗಿ ತಾವು ಕಾರ್ಯನಿರ್ವಹಿಸುತ್ತಿರುವುದು



ಸಂತಸ ತಂದಿದೆ ಎಂದು ಹೇಳಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು, ತಮ್ಮ ಇಲಾಖೆಯು ಬೇರೆಲ್ಲ ಇಲಾಖೆಗಳಿಗಿಂತ ತುಂಬಾ ಭಿನ್ನವಾದುದು. ಇದು ಮನುಷ್ಯನಿಗಾಗಿ ಮನುಷ್ಯತ್ವದಿಂದ ಕೆಲಸ ಮಾಡುವ ಇಲಾಖೆಯಾಗಿದ್ದು, ತಾನೂ ಹೆಣ್ಣಾಗಿ, ಹೆಣ್ಣು ಮಕ್ಕಳ ಭಾವನೆಗಳನ್ನು ಅರಿತು ಕೆಲಸ ಮಾಡಲು ನೆರವಾಗಿದೆ ಎಂದು ತಿಳಿಸಿದರು.

ಜಗತ್ತಿನ ಮೇಲೆ 16 ಸಾವಿರ ಜೀವರಾಶಿ ಇವೆಯಂತೆ; ಈ ಜೀವರಾಶಿಗಳಲ್ಲೇ ಅತ್ಯಂತ ಶ್ರೇಷ್ಠವಾದುದು ಮನುಷ್ಯ ಜೀವರಾಶಿ. ಇದನ್ನರಿತು ಮನುಷ್ಯ ಮನುಷ್ಯತ್ವದಿಂದ ವರ್ತಿಸಬೇಕು. ಪರಸ್ಪರ ಪ್ರೀತಿ-ವಿಶ್ವಾಸ-ಭಾತೃತ್ವದಿಂದ ಬದುಕಬೇಕು. ಸಮಾಜದಲ್ಲಿ ಜನರ ಜೀವನ ಹೇಗಿದೆ? ಅವರ ದುಃಖ-ದುಮ್ಮಾನಗಳೇನು? ಜೀವನದ ಸವಾಲುಗಳೇನು? ಎನ್ನುವುದನ್ನು ಪೋಷಕರಾದ ತಂದೆ ತಾಯಿಯಂದಿರು ಮಕ್ಕಳಿಗೆ ತಿಳಿ ಹೇಳಬೇಕು ಎಂದು ಸಲಹೆ ನೀಡಿದರು.

ಹೆಣ್ಣು ಮಕ್ಕಳು ಬದುಕಿನಲ್ಲಿ ಹಿಂಜರಿಯಬಾರದು. ಎಲ್ಲ ಕ್ಷೇತ್ರಗಳಲ್ಲೂ ದಾಪುಗಾಲು ಹಾಕಬೇಕು. ಮೊದಲಿಗೆ ಹೆತ್ತವರಿಗೆ ಒಳ್ಳೆಯ ಹೆಸರು ತರಬೇಕು. ಗುಂಪಿನಲ್ಲಿ ಗೋವಿಂದ ಆಗಬಾರದು. ಜೀವನದಲ್ಲಿ ಯಶಸ್ಸು ಸಾಧಿಸಬೇಕು. ಬದುಕಿನಲ್ಲಿ ಬರೀ ಓದು ಮುಖ್ಯವಲ್ಲ. ಬದುಕಿನ ಪಾಠವನ್ನು ಕಲಿಯಬೇಕು. ಎಲ್ಲರಿಗಿಂತ ಭಿನ್ನವಾಗಿ ಅಲೋಚನೆ ಮಾಡಬೇಕು. ಹಾಗಾದಾಗ ಜೀವನದಲ್ಲಿ ಯಶಸ್ಸು ಗಳಿಸಲು ಸಾಧ್ಯ ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಕ್ಕಳ ಸಂರಕ್ಷಣಾಧಿಕಾರಿ ಮಹಾಂತೇಶ ಭಜಂತ್ರಿ, ಯುವರಾಜಣ್ಣ ಕದಂ, ಬಾಳು ದೇಸೂರಕರ್ ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

## ಪ್ರೀತಿಸಿದ್ದಕ್ಕೆ ತಂಗಿಯೊಂದಿಗೆ ತಾಯಿಯನ್ನು ಕೆರೆಗೆ ತಳ್ಳಿ ಕಿರಾತಕ ಮಗ



ಮೈಸೂರು: ಅನ್ಯಕೋಮಿನ ಯುವಕನನ್ನ ಪ್ರೀತಿಸಿದ್ದಕ್ಕೆ ಕೋಪಗೊಂಡ ಸಹೋದರ ತಂಗಿ ಹಾಗೂ ತನ್ನ ತಾಯಿಯನ್ನು ಕೆರೆಗೆ ತಳ್ಳಿ ಕೊಲೆ ಮಾಡಿರುವ ಹೃದಯ ವಿದ್ರಾವಕ ಘಟನೆ ಹುಣಸೂರು ತಾಲೂಕಿನ ಮರೂರು ಗ್ರಾಮದಲ್ಲಿ ನಡೆದಿದೆ.

ಮಗಳು ಧನುಶ್ರೀ (19), ತಾಯಿ ಅನಿತಾ (43) ಕೆರೆಯಲ್ಲಿ ಮುಳುಗಿ ಸಾವನ್ನಪ್ಪಿದವರು. ಮಗ ನಿತಿನ್ನಿಂದ ಈ ಕೃತ್ಯ ನಡೆದಿದೆ. ಸಹೋದರಿ ಅನ್ಯ ಕೋಮಿನ ಯುವಕನನ್ನು ಪ್ರೀತಿಸುತ್ತಿದ್ದಳು. ಈ ವಿಷಯ ಸಹೋದರನಿಗೆ ಗೊತ್ತಾಗಿ ತಿಳಿ ಹೇಳಿದ್ದನು. ಬಳಿಕ ಇಬ್ಬರ ನಡುವೆಯು ವೈಮನಸ್ಸು ಮೂಡಿತ್ತು.

ಬಳಿಕ ತಂಗಿ ಮತ್ತು ತಾಯಿಯನ್ನು ಬೈಕ್ ಮೂಲಕ ಕೆರೆ ಬಳಿಗೆ ಕರೆದುಕೊಂಡು ಹೋಗಿದ್ದಾನೆ. ಆ ಬಳಿಕ ಮೊದಲು ಕೆರೆಯಲ್ಲಿ ತಂಗಿಯನ್ನು ತಳ್ಳಿದ್ದಾನೆ. ಇದರಿಂದ ಗಾಬರಿಗೊಂಡ ತಾಯಿ ತಕ್ಷಣ ಮಗಳನ್ನು ರಕ್ಷಣೆಗೆ ಮುಂದಾಗಿದ್ದಾಳೆ. ಈ ವೇಳೆ ತಾಯಿಯನ್ನು ಕೂಡ ಕೆರೆಗೆ ತಳ್ಳಿದ್ದಾನೆ.

ಕೆರೆ ನೀರಿನಲ್ಲಿ ಬಿದ್ದ ತಾಯಿ, ಮಗಳು ಇಬ್ಬರು ಮೃತಪಟ್ಟಿದ್ದಾರೆ. ಈ ಮಾಹಿತಿ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ಸಿಬ್ಬಂದಿ ಕಾರ್ಯಾಚರಣೆ ನಡೆಸಿ ಮೃತದೇಹಗಳನ್ನ ಹೊರ ತೆಗೆದಿದ್ದಾರೆ.

ಹುಣಸೂರು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಲಾಗಿದೆ.

## ಲೋಕಸಭಾ ಚುನಾವಣಾ ತಾತ್ಕಾಲಿಕ ದಿನಾಂಕ ಪ್ರಕಟ



ನವದೆಹಲಿ: ದೇಶಾದ್ಯಂತ ಲೋಕಸಭಾ ಚುನಾವಣೆಗೆ ರಾಜಕೀಯ ಪಕ್ಷಗಳು ಸಾಕಷ್ಟು ತಯಾರಿ ಮಾಡಿಕೊಳ್ಳುತ್ತಿದ್ದು, ಈ ನಡುವೆ ಕೇಂದ್ರ ಚುನಾವಣಾ ಆಯೋಗ ತಾತ್ಕಾಲಿಕ ದಿನಾಂಕ ಪ್ರಕಟ ಮಾಡಿದೆ.

ಚುನಾವಣಾ ಅಧಿಕಾರಿಗಳಿಗೆ ನೀಡಿರುವ ಪತ್ರದಲ್ಲಿ ಕೇಂದ್ರ ಚುನಾವಣಾ ಆಯೋಗ ತಾತ್ಕಾಲಿಕ ದಿನಾಂಕ ಪ್ರಕಟಿಸಿದೆ. ಇದರ ಪ್ರಕಾರ ಏಪ್ರಿಲ್ 16, 2024 ರನ್ನು ತಾತ್ಕಾಲಿಕ ದಿನವಾಗಿ ಘೋಷಿಸಿ ಈ ಕುರಿತು ಸುತ್ತೋಲೆ ಹೊರಡಿಸಿದೆ.

ಲೋಕಸಭಾ ಚುನಾವಣಾ ದಿನಾಂಕವನ್ನು ಇನ್ನೂ ದೃಢೀಕರಿಸಲಾಗಿಲ್ಲವಾದರೂ, ಭಾರತವು ಕೆಲವು ಹಂತಗಳಲ್ಲಿ ಏಪ್ರಿಲ್‌ನಲ್ಲಿ ಚುನಾವಣೆ ನಡೆಯುವ ಸಾಧ್ಯತೆಯಿದೆ ಮತ್ತು ಮೇ ತಿಂಗಳಲ್ಲಿ ಫಲಿತಾಂಶ ಬರಲಿದೆ ಎನ್ನಲಾಗಿದೆ. 2019 ರ ಚುನಾವಣೆಯು ಏಳು ಹಂತಗಳಲ್ಲಿ ನಡೆದಿತ್ತು. ಏಪ್ರಿಲ್ 11 ರಿಂದ ಪ್ರಾರಂಭವಾಗಿ ಮೇ 19 ಕ್ಕೆ ಕೊನೆಗೊಂಡಿತು, ಫಲಿತಾಂಶವು ಮೇ 23 ರಂದು ಪ್ರಕಟವಾಯಿತು. ಮುಖ್ಯ ಚುನಾವಣಾ ಆಯುಕ್ತರ ವಿವರ : ಸುಶೀಲ್ ಚಂದ್ರ ಅವರು ಭಾರತದ 24 ನೇ ಮುಖ್ಯ ಚುನಾವಣಾ ಆಯುಕ್ತರು. ಇವರು ಏಪ್ರಿಲ್ 2021 ರಲ್ಲಿ ಅಧಿಕಾರ ವಹಿಸಿಕೊಂಡಿದ್ದು. ಇವರ ಮುಂಚೆ ಸುನಿಲ್ ಅರೋರಾ ಅವರು ಆಯುಕ್ತರಾಗಿದ್ದರು. ಇನ್ನೂ ಕರ್ನಾಟಕದ ಪ್ರಸ್ತುತ ರಾಜ್ಯ ಚುನಾವಣಾ ಆಯುಕ್ತರಾಗಿ ಮನೋಜ್ ಕುಮಾರ್ ಮೀನಾ ಅಧಿಕಾರದಲ್ಲಿದ್ದಾರೆ.

## ಹೆಣ್ಣು ಮಕ್ಕಳು ಸರಿ-ಸಮಾನರಾಗಿ ಬೆಳೆಯುತ್ತಿದ್ದಾರೆ: ನ್ಯಾ.ಪುಷ್ಪಾಂಜಲಿ ದೇವಿ

ಬಳ್ಳಾರಿ: ಸಮಾಜದಲ್ಲಿ ಹೆಣ್ಣು ಮಕ್ಕಳು ಎಲ್ಲಾ ಕ್ಷೇತ್ರಗಳಲ್ಲಿ ಸರಿ-ಸಮಾನವಾಗಿ ಬೆಳೆಯುತ್ತಿದ್ದಾರೆ. ಇದು ಹೆಮ್ಮೆಯ ವಿಷಯವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಎಸ್.ಹೆಚ್.ಪುಷ್ಪಾಂಜಲಿ ದೇವಿ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಸಾರ್ವಜನಿಕ ಶಿಕ್ಷಣ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಆಸ್ಪತ್ರೆ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಪ್ರಯುಕ್ತ ಬೇಟಿ ಬಚಾವೋ ಬೇಟಿ ಪಡಾವೋ ಅಭಿಯಾನ 2023-24 ದಡಿ ಜಿಲ್ಲಾ ಆಸ್ಪತ್ರೆ



ಆವರಣದ ಜಿಲ್ಲಾ ಶಸ್ತ್ರ ಚಿಕಿತ್ಸಕರ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ "ಹೆಣ್ಣು ಮಗುವಿನ ಜನ್ಮೋತ್ಸವ" ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹೆಣ್ಣು ಮಾತೃ ಸ್ವರೂಪಿಯಾಗಿದ್ದು, ಈಗಿನ ಆಧುನಿಕ ವಾಸ್ತವಿಕತೆಯಲ್ಲಿ ಹೆಣ್ಣು ಮನಸ್ಸು ಮಾಡಿದರೆ, ಏನನ್ನಾದರೂ ಸಾಧಿಸಬಹುದು. ಹೆಣ್ಣು ಮಕ್ಕಳನ್ನು ಉಳಿಸಿ, ಓದಿಸಬೇಕು ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ರಾಷ್ಟ್ರದ ರಾಷ್ಟ್ರಪತಿಯವರು ಮತ್ತು ನಮ್ಮ ಜಿಲ್ಲೆಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರೂ ಹೆಣ್ಣು ಎಂದು ಪ್ರಶಂಸೆ ವ್ಯಕ್ತಪಡಿಸಿದರು.

ಸಮಾಜದಲ್ಲಿ ಎಲ್ಲಾ ರಂಗಗಳಲ್ಲಿ ಎಲ್ಲರಿಗೂ ಸಮಾನ ಅವಕಾಶವಿದೆ. ಸದಾವಕಾಶ ಬಳಸಿಕೊಂಡು ಪ್ರತಿಯೊಬ್ಬರೂ ತಮ್ಮದೇ ಆದ ಆತ್ಮಸ್ಥೈರ್ಯದಿಂದ ಮುನ್ನಡೆಯಬೇಕು ಎಂದು ಕಿವಿಮಾತು ಹೇಳಿದರು.

ಜಿಲ್ಲೆಯಲ್ಲಿ ಪಿಸಿ, ಪಿಎನ್ಡಿಟಿ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲಾಗುವುದು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಹೊರತಂದ ಭಿತ್ತಿಪತ್ರ ಬಿಡುಗಡೆಗೊಳಿಸಿದರು. ಕಾರ್ಯಕ್ರಮದಲ್ಲಿ ಬಾಣಂತಿಯರಿಗೆ ಸಾಮಾಗ್ರಿ ಕಿಟ್ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್ಕುಮಾರ್.ಕೆ.ಹೆಚ್., ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ಬಾಬು, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಬಸರೆಡ್ಡಿ, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಎ.ಕೆ. ಜಲಾಲಪ್ಪ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಾಮಕೃಷ್ಣ ನಾಯಕ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಜಿಲ್ಲಾಸ್ಪತ್ರೆಯ ವೈದ್ಯಾಧಿಕಾರಿಗಳು, ಸಿಬ್ಬಂದಿಗಳು ಹಾಗೂ ತಾಯಂದಿರು, ಇನ್ನಿತರರು ಉಪಸ್ಥಿತರಿದ್ದರು.

## ಮಾಜಿ ಸಚಿವರ ಪುತ್ರ ಆತ್ಮಹತ್ಯೆಗೆ ಶರಣು

ಬೆಂಗಳೂರು: ಮಾಜಿ ಸಚಿವ ದಿವಂಗತ ಎಲ್.ಜಿ. ಹಾವನೂರು ಅವರ ಪುತ್ರ ಅಶೋಕ್ ಅವರು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಘಟನೆ ನಗರದಲ್ಲಿ ನಡೆದಿದೆ.

ತುಮಕೂರು-ಬೆಂಗಳೂರು ಮುಖ್ಯರಸ್ತೆಯ ಹಾವನೂರು ಲೇಔಟ್‌ನಲ್ಲಿರುವ ನಿವಾಸದಲ್ಲಿ ಅವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಭಾನುವಾರ ಮಧ್ಯಾಹ್ನದವರೆಗೂ ಕೊಠಡಿಯಿಂದ ಹೊರಗೆ ಬಾರದಿದ್ದಾಗ, ಅವರ ಪತ್ನಿ ಮತ್ತು ಮಕ್ಕಳು ಹೋಗಿ ಪರಿಶೀಲಿಸಿದಾಗ ಒಳಗಿನಿಂದ ಬಾಗಿಲು ಹಾಕಿರುವುದು ಕಂಡು ಬಂದಿದೆ. ನಂತರ ಬಾಗಿಲು ಒಡೆದು ನೋಡಿದಾಗ ಫ್ಯಾನ್‌ಗೆ ನೇಣು ಬಿಗಿದುಕೊಂಡಿರುವುದು ಕಂಡು ಬಂದಿದೆ. ಆದರೆ, ಆತ್ಮಹತ್ಯೆಗೆ ನಿಖರ ಕಾರಣ ತಿಳಿದು ಬಂದಿಲ್ಲ.

ಈ ಸಂಬಂಧ ಪೊಲೀಸರು ಅಸಹಜ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಕೆಲವು ದಿನಗಳಿಂದ ಒಬ್ಬಂಟಿಯಾಗಿರುತ್ತಿದ್ದ ಅವರು ಫ್ಯಾನ್‌ಗೆ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ತಿಳಿದು ಬಂದಿದೆ. ಮೃತರು ಕಳೆದ ಹದಿನೈದು



ದಿನಗಳಿಂದ ಮನೆಯಲ್ಲಿದ್ದರು ಮತ್ತು ಹೊರಗೆ ಎಲ್ಲಿಯೂ ಹೋಗುತ್ತಿರಲಿಲ್ಲ. ಅವರು ಖಿನ್ನತೆಯಿಂದ ಬಳಲುತ್ತಿದ್ದ ಕಾರಣ ಆತ್ಮಹತ್ಯೆಗೆ ಕಾರಣವಾಗಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ.

ಹಾವನೂರು ಕುಟುಂಬದ ಸದಸ್ಯರು ಬೆಂಗಳೂರಿನಲ್ಲಿಯೇ ನೆಲೆಸಿದ್ದರು. ರಾಮಮೂರ್ತಿ ನಗರದಲ್ಲಿ ಎಲ್.ಜಿ.ಹಾವನೂರು ಅವರ ಹೆಸರಿನಲ್ಲಿಯೇ ಕಾನೂನು ಮಹಾವಿದ್ಯಾಲಯ ಆರಂಭಿಸಲಾಗಿದ್ದು, ಕಾಲೇಜು ಸಮಿತಿಯ ಅಧ್ಯಕ್ಷರಾಗಿ ಅಶೋಕ್ ಹಾವನೂರು ಅವರು ಕಾರ್ಯನಿರ್ವಹಿಸುತ್ತಿದ್ದರು.

## ಜ.30ರಿಂದ ಫೆ.13ರ ವರೆಗೆ ನಡೆಯುವ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ ಯಶಸ್ವಿಗೊಳಿಸಿ: ಎಡಿಸಿ ಮೊಹಮ್ಮದ್ ಝುಬೇರ್

ಬಳ್ಳಾರಿ: ಜಿಲ್ಲೆಯಲ್ಲಿ ಜ.30 ರಿಂದ ಫೆ.13 ರ ವರೆಗೆ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದ್ದು, ಇದಕ್ಕೆ ಬೇಕಾದ ಅಗತ್ಯ ಸಿದ್ಧತೆ ಮತ್ತು ಪ್ರಚಾರ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಅವರು ಹೇಳಿದರು.

ಬುಧವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನದ ಕುರಿತು ಆಯೋಜಿಸಿದ್ದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿಗಳ ಕಾರ್ಯಾಲಯ



ವತಿಯಿಂದ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನವನ್ನು ಜಿಲ್ಲಾ ಮಟ್ಟದಲ್ಲಿ ಜ.30ರಂದು ಆಯೋಜಿಸಲಾಗುವುದು. ಈ ಜಾಗೃತಿ ಅಭಿಯಾನವನ್ನು ಅದೇ ದಿನದಂದು ತಾಲೂಕು ಮಟ್ಟದಲ್ಲಿ ಆಯಾ ತಾಲೂಕು ಮಟ್ಟದ ಅಧಿಕಾರಿಗಳಿಂದ ಆಯೋಜಿಸಬೇಕು. ಪ್ರತಿ ಗ್ರಾಮ ಪಂಚಾಯಿತಿಗಳಲ್ಲಿ ಮತ್ತು ಶಾಲೆಗಳಲ್ಲಿ, ಅಂಗನವಾಡಿ ಕೇಂದ್ರಗಳಲ್ಲಿ ಇಒಗಳಿಂದ ನಡೆಸಬೇಕು ಎಂದು ಹೇಳಿದರು.

ಸಾರ್ವಜನಿಕರಲ್ಲಿ ಹೆಚ್ಚಿನ ಅರಿವು ಮೂಡಿಸಬೇಕು. ವ್ಯಾಪಕ ಮಾಹಿತಿ ನೀಡುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯ ಪ್ರಾಥಮಿಕ ಆರೋಗ್ಯ ಸಂರಕ್ಷಣಾ ಅಧಿಕಾರಿಗಳಿಗೆ ಹಾಗೂ ಆಶಾ ಕಾರ್ಯಕರ್ತೆಯರಿಗೆ ತಿಳಿಸಬೇಕು ಎಂದರು.

ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ.ವೀರೇಂದ್ರಕುಮಾರ್ ಅವರು ಮಾತನಾಡಿ, ಕುಷ್ಠರೋಗವು ಸಾಂಕ್ರಾಮಿಕ ರೋಗವಾಗಿದ್ದು, ಸಾರ್ವಜನಿಕರು ಇದಕ್ಕೆ ಭಯಪಡುವ ಅಗತ್ಯವಿಲ್ಲ, ಈ ಜಾಗೃತಿ ಅಭಿಯಾನದ ಸಂದರ್ಭದಲ್ಲಿ ಶಾಲಾ ಮಕ್ಕಳ ತಪಾಸಣೆ, ಉಪ ಆರೋಗ್ಯ ಕೇಂದ್ರ ಮೂಲಕ ಗ್ರಾಮದಲ್ಲಿ ಜಾಗೃತಿ ಮೂಡಿಸುವುದೂ ಸೇರಿದಂತೆ ಕುಷ್ಠರೋಗ ನಿರ್ಮೂಲನೆಯ ಕುರಿತು ಎಲ್ಲರಿಗೂ ಪ್ರತಿಜ್ಞಾವಿಧಿ ಬೋಧಿಸಲಾಗುವುದು ಎಂದರು.

ಪಾದಗಳ ಮತ್ತು ಬೆರಳುಗಳ ದೌರ್ಬಲ್ಯ, ಕಣ್ಣು ಮುಚ್ಚುವಲ್ಲಿ ತೊಂದರೆ, ವ್ಯಕ್ತಿಯ ದೇಹದ ಮೇಲೆ ಸ್ಪರ್ಶ ಜ್ಞಾನವಿಲ್ಲ ಮಚ್ಚೆಗಳು, ತ್ವಚ್ಚೆಯ ಮೇಲೆ ಕೆಂಪಾದ ಬಾವು, ನೋವಿನಿಂದ ಕೂಡಿದ ಹಗ್ಗದ ಹಾಗೆ ಊದಿಕೊಂಡ ನರಗಳು, ವ್ಯಕ್ತಿಯ ದೇಹದ ಯಾವುದೇ ಭಾಗಗಳಲ್ಲಿ ತಿಳಿ ಬಿಳಿ ತಾಮ್ರದ ವರ್ಣದ ಸ್ಪರ್ಶ ಜ್ಞಾನವಿಲ್ಲದ ಮಚ್ಚೆಗಳು ಕಂಡು ಬಂದಲ್ಲಿ ಸಮೀಪದ ಸರ್ಕಾರಿ ಆರೋಗ್ಯ ಕೇಂದ್ರಕ್ಕೆ ತೆರಳಿ ಪರೀಕ್ಷಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕುರಿತು ಪ್ರತಿಜ್ಞೆಯನ್ನು ಸ್ವೀಕರಿಸಿದರು. ನಂತರ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನದ ಭಿತ್ತಿಚಿತ್ರಗಳನ್ನು ಗಣ್ಯರು ಬಿಡುಗಡೆಗೊಳಿಸಿದರು.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ. ರಮೇಶ್ ಬಾಬು, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಜಿಲ್ಲಾ ಕುಟುಂಬ ಕಲ್ಯಾಣ ಅನುಷ್ಠಾನ ಅಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ್ ಸೇರಿದಂತೆ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

ಜಿಲ್ಲಾ ಪ್ರಗತಿ ಪರಿಶೀಲನಾ ಸಭೆ

# ಕುಡಿಯುವ ನೀರು ಕೊರತೆಯಾಗದಂತೆ ಕ್ರಮ ವಹಿಸಲು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಂಜುಂ ಪರ್ವೇಜ್ ಸೂಚನೆ

ಬೆಳಗಾವಿ: ಜಿಲ್ಲೆಯಲ್ಲಿ ಮುಂಬರುವ ದಿನಗಳಲ್ಲಿ ಯಾವುದೇ ಗ್ರಾಮಗಳಲ್ಲಿ ನೀರಿನ ಕೊರತೆ ಎದುರಾಗಬಾರದು. ಕುಡಿಯುವ ನೀರಿನ ಕೊರತೆ ಉಂಟಾಗಬಹುದಾದ ಗ್ರಾಮಗಳ ಪಟ್ಟಿಯನ್ನು ಮುಂಚಿತವಾಗಿ ಸಿದ್ಧಪಡಿಸಿಟ್ಟುಕೊಂಡು ಕುಡಿಯುವ ನೀರು ಪೂರೈಕೆಗೆ ಖಾಸಗಿ ಕೊಳವೆಬಾವಿ ಸೇರಿದಂತೆ ಲಭ್ಯ ಜಲಮೂಲಗಳನ್ನು ಮುಂಚಿತವಾಗಿ ಗುರುತಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಯೂ ಆಗಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಬುಧವಾರ(ಜ.24) ನಡೆದ ಬರ ನಿರ್ವಹಣೆ ಹಾಗೂ ಜಿಲ್ಲೆಯ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಳೆ ಕಡಿಮೆಯಾಗಿರುವುದರಿಂದ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸದಂತೆ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಬೇಕು. ಗ್ರಾಮೀಣ ಪ್ರದೇಶಗಳು ಮಾತ್ರವಲ್ಲದೇ ನಗರ ಸ್ಥಳೀಯ ಸಂಸ್ಥೆಗಳಲ್ಲೂ ಕೂಡ ಇದೇ ರೀತಿ ಯೋಜನೆ ರೂಪಿಸಬೇಕು ಎಂದು ಹೇಳಿದರು.

ಸದ್ಯಕ್ಕೆ ಕುಡಿಯುವ ನೀರಿನ ಕೊರತೆ ಕಂಡುಬಂದಿಲ್ಲ; ಆದಾಗ್ಯೂ ಮಾರ್ಚ್ ಅಥವಾ ಏಪ್ರಿಲ್ ನಲ್ಲಿ ಸಮಸ್ಯೆ ಉದ್ಭವಿಸಿದರೆ ಅದನ್ನು ಸಮರ್ಪಕವಾಗಿ ನಿರ್ವಹಣೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ನಗರಾಭಿವೃದ್ಧಿ ಯೋಜನಾ ಕೋಶದ ಯೋಜನಾ ನಿರ್ದೇಶಕ ಮಹಾಂತೇಶ ಕಲಾದಗಿ ವಿವರಿಸಿದರು.

ಬರಪೀಡಿತ ತಾಲ್ಲೂಕುಗಳಿಗೆ ಈಗಾಗಲೇ ತಲಾ 25 ಲಕ್ಷ ರೂಪಾಯಿ ಬಿಡುಗಡೆ ಮಾಡಲಾಗಿದೆ. ಇದಲ್ಲದೇ ಇದಕ್ಕೂ ಮುಂಚೆ ಬೆಳಗಾವಿ ಜಿಲ್ಲೆಗೆ 2 ಕೋಟಿ ರೂಪಾಯಿ ಕೂಡ ಸರಕಾರ ಬಿಡುಗಡೆ ಮಾಡಿದೆ ಎಂದು ಅಂಜುಂ ಪರ್ವೇಜ್ ತಿಳಿಸಿದರು.

ಬೆಳೆಹಾನಿ– ರೈತರ ಖಾತೆಗೆ 60.40 ಕೋಟಿ ಪರಿಹಾರ ಜಮೆ:

ಬರಗಾಲದಿಂದಾಗಿ ಬೆಳೆಹಾನಿಯಾಗಿರುವುದಕ್ಕೆ ಸಂಬಂಧಿಸಿದಂತೆ ಈಗಾಗಲೇ ಜಿಲ್ಲೆಯಲ್ಲಿ 3,26,366 ರೈತರಿಗೆ 60,40,59,258 ಪರಿಹಾರ ಡಿಬಿಟಿ ಮೂಲಕ ಜಮೆ ಮಾಡಲಾಗಿದೆ. ಫ್ರೂಟ್ಸ್ ತಂತ್ರಾಂಶದಲ್ಲಿ ರೈತರ ನೋಂದಣಿ ಕಾರ್ಯವನ್ನು ಆದಷ್ಟು ಬೇಗನೇ ಪೂರ್ಣಗೊಳಿಸಿ ಬೆಳೆಹಾನಿ ಪರಿಹಾರವನ್ನು ಸಮರ್ಪಕವಾಗಿ ವಿತರಿಸಬೇಕು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಂಜುಂ ಪರ್ವೇಜ್ ಹೇಳಿದರು.

ಜಿಲ್ಲೆಯಲ್ಲಿ ಬರಗಾಲದಿಂದ ಬೆಳೆಹಾನಿಯಾಗಿರುವುದಕ್ಕೆ ಸಂಬಂಧಿಸಿದಂತೆ 4.65 ಲಕ್ಷ ರೈತರ ಪೈಕಿ ಇದುವರೆಗೆ 3.24 ಲಕ್ಷ ಜನರಿಗೆ ಪರಿಹಾರ ವಿತರಿಸಲಾಗಿದೆ. ಮುಂದಿನ ಹಂತದಲ್ಲಿ ಇನ್ನುಳಿದ ರೈತರಿಗೆ ಪರಿಹಾರ ವಿತರಣೆಗೆ ಕೂಡ ತ್ವರಿತವಾಗಿ ಅನುಮೋದನೆ ನೀಡಬೇಕು ಎಂದು ಅವರು ತಿಳಿಸಿದರು.



ಜಿಲ್ಲೆಯಲ್ಲಿ ಪ್ರಸ್ತುತ ಶೇ.15 ರಷ್ಟು ಮಾತ್ರ ನರೇಗಾ ಕಾರ್ಮಿಕರು ನೂರು ದಿನಗಳ ಉದ್ಯೋಗವನ್ನು ಪಡೆದುಕೊಂಡಿದ್ದಾರೆ. ಅದೇ ರೀತಿ ಉಳಿದವರಿಗೂ ಕೆಲಸ ಒದಗಿಸಬೇಕು ಎಂದರು.

ಗೃಹಲಕ್ಷ್ಮೀ ಯೋಜನೆಯಲ್ಲಿ ನೋಂದಾಯಿತ ಶೇ.5 ರಷ್ಟು ಫಲಾನುಭವಿಗಳಿಗೆ ಇದುವರೆಗೆ ಹಣ ಜಮೆಯಾಗದಿರುವ ಬಗ್ಗೆ ವಿವರಣೆ ಕೇಳಿದ ಅವರು, ಕೆ.ವೈ.ಸಿ. ಪೂರ್ಣಗೊಳಿಸಿ ಹಣ ಜಮೆ ಮಾಡಬೇಕು ಎಂದು ಸೂಚನೆ ನೀಡಿದರು.

ಯುವನಿಧಿ ಯೋಜನೆಯಡಿ ಇದುವರೆಗೆ 10,318 ಜನರು ನೋಂದಣಿ ಮಾಡಿಕೊಂಡಿದ್ದು, ಪರಿಶೀಲನೆ ಬಳಿಕ ಭತ್ಯೆ ಜಮೆ ಮಾಡಲು ಕ್ರಮ ಕೈಗೊಳ್ಳಬೇಕು. ಬೈಲಹೊಂಗಲ ಉಪ ವಿಭಾಗಾಧಿಕಾರಿಗಳ ನ್ಯಾಯಾಲಯದಲ್ಲಿ ಎರಡು ವರ್ಷಕ್ಕಿಂತ ಹಳೆಯದಾಗಿರುವ 128 ಪ್ರಕರಣಗಳನ್ನು ಕೂಡಲೇ ವಿಲೇವಾರಿ ಮಾಡಬೇಕು ಎಂದು ನಿರ್ದೇಶನ ನೀಡಿದರು.

ಉಪ ವಿಭಾಗಾಧಿಕಾರಿಗಳ ನ್ಯಾಯಾಲಯದ ಪ್ರಕರಣಗಳ ಇತ್ಯರ್ಥಕ್ಕೆ ಆದ್ಯತೆ ನೀಡಬೇಕು ಎಂದರು.

ಜಿಲ್ಲೆಯಲ್ಲಿ ಯಾವುದೇ ಇಲಾಖೆಯ ಪ್ರಮುಖ ಯೋಜನೆ ಬಾಕಿ, ಜಮೀನು ಮಂಜೂರಾತಿ, ಅನುದಾನ ಬಿಡುಗಡೆ ಅಥವಾ ವಿಳಂಬ ಸೇರಿದಂತೆ ಏನೇ ಸಮಸ್ಯೆಗಳಿದ್ದರೂ ತಮ್ಮ ಗಮನಕ್ಕೆ ತಂದರೆ ರಾಜ್ಯಮಟ್ಟದಲ್ಲಿ ಚರ್ಚಿಸಿ ಬಗೆಹರಿಸಿಕೊಡುವುದಾಗಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಂಜುಂ ಪರ್ವೇಜ್ ತಿಳಿಸಿದರು.

ಅನ್ನಭಾಗ್ಯ ಯೋಜನೆಯಡಿ ಜುಲೈ ಮಾಹೆಯಿಂದ ಇಲ್ಲಿಯವರೆಗೆ ಒಟ್ಟಾರೆ 320 ಕೋಟಿ ರೂಪಾಯಿ ಡಿಬಿಟಿ ಮೂಲಕ ಜಮೆ ಮಾಡಲಾಗಿದೆ. ಐದು ಕೆ.ಜಿ.ಅಕ್ಕಿಯನ್ನು ವಿತರಿಸಲಾಗುತ್ತಿದ್ದು, ಉಳಿದ ಐದು ಕೆ.ಜಿ. ಅಕ್ಕಿ ಬದಲಾಗಿ ಪ್ರತಿ ಸದಸ್ಯರಿಗೆ ಪ್ರತಿ ಮಾಹೆ ತಲಾ 170 ರೂಪಾಯಿಯಂತೆ ಹಣವನ್ನು ಡಿಬಿಟಿ ಮೂಲಕ ನೀಡಲಾಗುತ್ತಿದೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ್ ಕಂಕಣವಾಡಿ ಸಭೆಯಲ್ಲಿ ತಿಳಿಸಿದರು.

ಜಿಲ್ಲೆಯ ಒಟ್ಟಾರೆ ಪ್ರಗತಿ ಹಾಗೂ ಬರ ನಿರ್ವಹಣೆಗೆ ತೆಗೆದುಕೊಳ್ಳಲಾಗಿರುವ ಮುಂಜಾಗ್ರತಾ ಕ್ರಮಗಳ ಬಗ್ಗೆ ಮಾಹಿತಿನೀಡಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು, ಬರಗಾಲದಿಂದ ಜಿಲ್ಲೆಯಲ್ಲಿ ಬೆಳೆಹಾನಿ ಅನುಭವಿಸಿರುವ 3,26,366 ರೈತರಿಗೆ 60,40,59,258 ಪರಿಹಾರ ಡಿಬಿಟಿ ಮೂಲಕ ಜಮೆ ಮಾಡಲಾಗಿದೆ ಎಂದು ಹೇಳಿದರು.

ಫಲಾನುಭವಿಗಳ ಹೆಸರು ಹಾಗೂ ಕ್ಷೇತ್ರಗಳ ಮಾಹಿತಿಯ ಹೊಂದಾಣಿಕೆ ಆಗದಿರುವುದರಿಂದ ತಾಂತ್ರಿಕ ಕಾರಣಗಳಿಂದ ಕೆಲವು ರೈತರಿಗೆ ಮಾತ್ರ ಇದುವರೆಗೆ ಪರಿಹಾರ ಮೊತ್ತ ಜಮೆಯಾಗಿರುವುದಿಲ್ಲ. ತಾಂತ್ರಿಕ ಸಮಸ್ಯೆ ಸರಿಪಡಿಸಿ ಆದಷ್ಟು ಬೇಗನೇ ಉಳಿದವರಿಗೂ ಪರಿಹಾರ ಜಮೆ ಮಾಡಲಾಗುವುದು ಎಂದರು.

72 ಸಾವಿರ ಮರಣ ಪ್ರಕರಣಗಳಿರುವುದರಿಂದ ಸ್ವಲ್ಪಮಟ್ಟಿಗೆ ತಡವಾಗಿದೆ ಎಂದು ಜಿಲ್ಲಾಧಿಕಾರಿ ಹೇಳಿದರು. ಸರಕಾರ ಈಗಾಗಲೇ ಮೇವಿನ ಮಿನಿ ಕಿಟ್ ಗಳನ್ನು ವಿತರಿಸಿದೆ. ಅದೇ ರೀತಿ ಮೇವಿನ ಕೊರತೆ ನೀಗಿಸಲು ಹಾಲು ಒಕ್ಕೂಟಗಳು ಕೂಡ ಸ್ವಯಂಪ್ರೇರಿತರಾಗಿ ಮಿನಿ ಕಿಟ್ ಗಳನ್ನು ವಿತರಿಸಲು ಕ್ರಮ ಕೈಗೊಳ್ಳಬೇಕು ಎಂದರು.

ಗ್ರಾಮೀಣ ಪ್ರದೇಶಗಳಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸೇವೆ ಸಲ್ಲಿಸಲು ಹೊರ ಗುತ್ತಿಗೆ ಆಧಾರಲ್ಲಿ ತಜ್ಞವೈದ್ಯರು ಆಸಕ್ತಿ ತೋರಿಸುತ್ತಿಲ್ಲ; ಆದ್ದರಿಂದ ಖಾಯಂ ತಜ್ಞ ವೈದ್ಯರನ್ನು ನೇಮಿಸಿದರೆ ಅನುಕೂಲವಾಗುತ್ತದೆ ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ ಹೇಳಿದರು.

ಪ್ರೊಬೇಷನರಿ ಐ.ಎ..ಎಸ್. ಅಧಿಕಾರಿ ಶುಭಂ ಶುಕ್ಲಾ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ, ಸ್ಮಾರ್ಟ್ ಸಿಟಿ ವ್ಯವಸ್ಥಾಪಕ ನಿರ್ದೇಶಕರಾದ ಸಯೀದಾ ಆಫ್ರಿನ್ ಬಾನು ಬಳ್ಳಾರಿ, ಉಪ ವಿಭಾಗಾಧಿಕಾರಿಗಳಾದ ಪ್ರಭಾವತಿ, ಶ್ರವಣ ನಾಯಕ, ಸಂಪಗಾವಿ ಸೇರಿದಂತೆ ಎಲ್ಲ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಕ್ಯಾಲೆಂಡರ್ ಬಿಡುಗಡೆ:

ಇದೇ ಸಂದರ್ಭದಲ್ಲಿ ಜಿಲ್ಲಾ ಪಜಚಾಯಿತಿ ಜಲಜೀವನ್ ಮಿಷನ್ ವತಿಯಿಂದ ಹೊರತರಲಾದ ಕ್ಯಾಲೆಂಡರ್ ಅನ್ನು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಂಜುಂ ಪರ್ವೇಜ್ ಬಿಡುಗಡೆಗೊಳಿಸಿದರು.

ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶಿಂಧೆ, ಯೋಜನಾ ನಿರ್ದೇಶಕರಾದ ರವಿ ಬಂಗಾರೆಪ್ಪನವರ ಮತ್ತಿತರರು ಉಪಸ್ಥಿತರಿದ್ದರು.

# ಲಾಭದಾಯಕ ಉದ್ಯೋಗದಿಂದ ದೇಶದ ಪ್ರಗತಿ: ಮುತ್ತುಕುಮಾರಸ್ವಾಮಿ

ಲಘು ಉದ್ಯೋಗ ಭಾರತಿ, ಸ್ವಾವಲಂಬಿ ಭಾರತ ಅಭಿಯಾನ ಕಾರ್ಯಕ್ರಮ

ಬೆಳಗಾವಿ: "ಲಘು ಉದ್ಯೋಗ ಭಾರತಿ ಯಾವಾಗಲೂ ಭಾರತದಲ್ಲಿನ ಸೂಕ್ಷ್ಮ ಉದ್ಯಮಗಳನ್ನು ಬೆಂಬಲಿಸಲು ಮತ್ತು ಉತ್ತೇಜಿಸಲು ಬದ್ಧವಾಗಿದೆ – ಲಾಭದಾಯಕ ಉದ್ಯೋಗವನ್ನು ಹೆಚ್ಚಿಸುವ ಗುರಿಯನ್ನು ಇಟ್ಟುಕೊಂಡಾಗ ಮಾತ್ರ ದೇಶ ಪ್ರಗತಿ ಹೊಂದಲು ಸಾಧ್ಯ ಎಂದು ಲಘು ಉದ್ಯೋಗ ಭಾರತಿ ಸಂಪನ್ಮೂಲ ಅಧಿಕಾರಿಗಳಾದ ಮತ್ತುಕುಮಾರಸ್ವಾಮಿ ಅವರು ಹೇಳಿದರು.

ಇಲ್ಲಿನ ಜೈನ ಇಂಜಿನಿಯರಿಂಗ್ ಮತ್ತು ಎಂಬಿಎ ಕಾಲೇಜ್ ಸಭಾಭವನದಲ್ಲಿ ಮಂಗಳವಾರ ಆಯೋಜಿಸಲಾದ ಲಘು ಉದ್ಯೋಗ ಭಾರತಿ, ಸ್ವಾವಲಂಬಿ ಭಾರತ ಮತ್ತು ವಿಟಿಪಿಸಿ ಸಹಯೋಗದಲ್ಲಿ "ಬೌದ್ಧಿಕ ಆಸ್ತಿಯ ಹಕ್ಕುಗಳ ಅವಕಾಶ ಮಹತ್ವ ಮತ್ತು ಆವಿಷ್ಕಾರ"ವೆಂಬ ವಿಷಯದ ಕುರಿತು ತರಬೇತಿಯ ವರ್ಗ ಹಾಗೂ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.



ವಿದ್ಯಾರ್ಥಿಗಳು ಶಿಕ್ಷಣ ಬದುಕಿನಲ್ಲಿ ಅಮೂಲ್ಯವಾದ ಗುರಿ ಇಟ್ಟು ಸಾಗಬೇಕಿದೆ. ದೇಶದಲ್ಲಿ ಹೊಸ–ಹೊಸ ಕೆಲಸಗಳನ್ನು ಸೃಷ್ಟಿಸುವ ಮೂಲಕ ಸಾವಿರಾರು ಜನರಿಗೆ ನೆರಳಾಗಬೇಕು. ವಿದ್ಯಾರ್ಥಿಗಳು ಉದ್ಯೋಗವನ್ನು ಹುಡುಕುವ ಬದಲು, ಉದ್ಯೋಗ ಸೃಷ್ಟಿಸುವ ಕಾರ್ಯದಲ್ಲಿ ತಲ್ಲೀಣರಾಗಬೇಕು ಎಂದರು.

ದಿನ ನಿತ್ಯ ವಸ್ತುಗಳಿಗೆ ವಿದೇಶಿ ವಸ್ತುಗಳನ್ನು ಬಳಸುವುದರ ಬದಲು ಸ್ವದೇಶಿ ವಸ್ತುಗಳನ್ನು ಬಳಸುವುದರಿಂದ ನಮ್ಮ ಆರೋಗ್ಯವೂ ಚೆನ್ನಾಗಿರುತ್ತದೆ. ಇದು ಸ್ವದೇಶಿ ಭಾರತಕ್ಕೆ ಕೂಡ ಪ್ರೋತ್ಸಾಹದಾಯಕವಾಗಲಿದೆ ಎಂದು ಹೇಳಿದರು.

ಲಘು ಉದ್ಯೋಗ ಭಾರತಿ ರಾಜ್ಯಾದ್ಯಕ್ಷರಾದ ಸಚಿನ್ ಸಬನಿಸ್ ಅವರು ಮಾತನಾಡಿ, ಲಘು ಉದ್ಯೋಗ ಭಾರತಿ ಜೊತೆಗೆ, ಭಾರತದಾದ್ಯಂತ 100 ಕ್ಕೂ ಹೆಚ್ಚು ಮೈಕ್ರೋ ಮಾರುಕಟ್ಟೆಗಳಲ್ಲಿ ಸೆಮಿನಾರ್‌ಗಳು, ಕಾರ್ಯಾಗಾರಗಳು ಮತ್ತು ಕಾರ್ಯಕ್ರಮಗಳ ಸರಣಿಯನ್ನು ಆಯೋಜಿಸಲಾಗಿದೆ. ಈ ಘಟನೆಗಳು ಲಘು ಉದ್ಯೋಗ ಭಾರತಿಯೊಂದಿಗೆ ಎಂಪನೇಲ್ ಮಾಡಲಾದ ಸಣ್ಣ ವ್ಯಾಪಾರಗಳ ಜಾಲವನ್ನು ಶಿಕ್ಷಣ ಮತ್ತು ಸಬಲೀಕರಣಗೊಳಿಸುವ ಗುರಿಯನ್ನು ಹೊಂದಿವೆ ಎಂದು ಹೇಳಿದರು.

ಭಾರತ ಕೃಷಿ ಪ್ರಧಾನ ರಾಷ್ಟ್ರ. ದೇಶದ ಬಹುತೇಕರ ಸ್ವಾವಲಂಬಿ ಜೀವನಕ್ಕೆ ಇದು ಅನುಕೂಲವಾಗಿದೆ. ದೇಶದ ಗ್ರಾಮೀಣ ಭಾಗದಲ್ಲಿ ಮೂಲ ಕಸುಬು ಕೃಷಿ ಕ್ಷೇತ್ರವಾಗಿದೆ. ಆದರೆ ಇತ್ತೀಚಿನ ದಿನಗಳಲ್ಲಿ ಕೃಷಿ ಕ್ಷೇತ್ರದೆಡೆಗಿನ ಒಲುವು ಕಡಿಮೆಯಾಗುತ್ತಿದೆ ಎಂಬ ಮಾತು ಕೇಳಿಬರುತ್ತಿದೆ. ಈ ಬಗ್ಗೆ ಗಮನಹರಿಸುವುದು ಕೂಡ ಅಗತ್ಯ. ಏಕೆಂದರೆ ದೇಶದ ಅಭಿವೃದ್ಧಿಯಲ್ಲಿ ಕೃಷಿ ಕ್ಷೇತ್ರದ ಕೊಡುಗೆ ಅಗ್ರಗಣ್ಯವಾಗಿದೆ.

ವಿಟಿಪಿಸಿ ಸಹಾಯಕ ನಿರ್ದೇಶಕರಾದ ಮಲ್ಲಿಕಾರ್ಜುನ ಟಿ ಎಸ್, ಲಘು ಉದ್ಯೋಗ ಭಾರತಿ ಜಿಲ್ಲಾ ಸಂಯೋಜಕರಾದ ನಳಿನಿ ವೆಮೋಲ್ಕರ್, ಸ್ವಾವಲಂಬಿಯ ಪ್ರಾಂತ ಸಹ ಸಮನ್ವಯಕರು ಮತ್ತು ಲಘು ಉದ್ಯೋಗ ಭಾರತೀಯ ರಾಜ್ಯ ಕಾರ್ಯದರ್ಶಿಗಳಾದ ಪ್ರಿಯಾ ಪುರಾನಿಕ್, ಹಾಗೂ ಜೈನ ಇಂಜಿನಿಯರಿಂಗ್ ಕಾಲೇಜ್ ನ ಪ್ರಾಂಶುಪಾಲರಾದ ಶಿವಕುಮಾರ್, ಎಂಬಿಎ ಕಾಲೇಜ್ ನ ಮುಖ್ಯಸ್ಥರಾದ ಡಾ.ಪ್ರಸಾದ್ ಕಪಿಲೇಶ್ವರಿ, ಪವನ ಶಿರೋಳ ಹಾಗು ವಿದ್ಯಾರ್ಥಿಗಳು ಇತರರು ಇದ್ದರು.

## ಮಾಸ್ತಮರಡಿ: ಹೆಣ್ಣು ಮಕ್ಕಳದಿನಾಚರಣೆ



ಬೆಳಗಾವಿ: ತಾಲೂಕಿನ ಮಾಸ್ತ ಮರಡಿಯ ಸರಕಾರಿ ಮಾದಚಿರಿ ಪ್ರಾಥಮಿಕ ಕನ್ನಡ ಶಾಲೆಯಲ್ಲಿಂದು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆಯ ನಿಮಿತ್ಯ ಶಾಲಾ ನಲಿಕಲಿ ವಿದ್ಯಾರ್ಥಿನಿಯರಿಗೆ ಹೂವು ನೀಡುವ ಮೂಲಕ ಶಾಲಾ ಮುಖ್ಯೋಪಾದ್ಯಾಯರಾದ ಬಸವರಾಜ ಫಕೀರಪ್ಪ ಸುಣಗಾರ ರವರು ಅಭಿನಂದಿಸಿ ಅವರ ಶೈಕ್ಷಣಿಕ ಬದುಕಿಗೆ ಉಜ್ವಲ ಭವಿಷ್ಯ ಕೋರಿದರು

6ನೆಯ ತರಗತಿಯ ವಿದ್ಯಾರ್ಥಿನಿ ಕುಮಾರಿ ಲಕ್ಷ್ಮೀ ಪೀರಾಜಿ ಪರಾಂಡೆ ಇವಳು ನೃತ್ಯ ಮಾಡುವ ವಿದ್ಯಾರ್ಥಿನಿಯ ಭಾವಚಿತ್ರವನ್ನು ರಚಿಸುವ ಮೂಲಕ ಗಮನ ಸೆಳೆದಳುಅವಳಿಗೆ ನೋಟ್ ಬುಕ್ ಗಳನ್ನು ಉಡುಗೊರೆಯಾಗಿ ನೀಡಲಾಯಿತು.

## ಬೆಂಗಳೂರಿನ ಈ ಹೊತ್ತಿಗೆಯ ನಾಟಕ ರಚನಾ ಕಮ್ಮಟ: ೨೦೨೪ರ ಉದ್ಘಾಟನಾ ಸಮಾರಂಭ

ಜನವರಿ 26, 27 ಮತ್ತು 28 ರಂದು ನಗರದ ಲಿಂಗಾಯತ ಭವನದಲ್ಲಿ, ಬೆಂಗಳೂರಿನ ಓದುಗರ ವೇದಿಕೆ 'ಈ ಹೊತ್ತಿಗೆ', ತನ್ನ ದಶಮಾನೋತ್ಸವದ ನಿಮಿತ್ತ, ಬೆಳಗಾವಿಯ ನಮ್ಮವರೊಂದಿಗೆ ಬಳಗದ ಸಹಯೋಗದಲ್ಲಿ ಮೂರು ದಿನಗಳ ನಾಟಕ ರಚನಾ ಕಮ್ಮಟವನ್ನು ಏರ್ಪಡಿಸಿದೆ. ನಾಡಿನ ಖ್ಯಾತ ವಿಮರ್ಶಕರು ಮತ್ತು ಬರಹಗಾರರೂ ಆದ ಡಾ. ಎಂ ಎಸ್ ಆಶಾದೇವಿ ಅವರು ಈ ಕಮ್ಮಟದ ನಿರ್ದೇಶಕರಾಗಿದ್ದಾರೆ. ಈ ಕಥಾ ಕಮ್ಮಟದಲ್ಲಿ ಬೆಳಗಾವಿ ಸಹಿತ ವಿವಿಧ ಜಿಲ್ಲೆಗಳಿಂದ 22 ಜನ ಬರಹಗಾರರು ಹಾಗೂ ಒಬ್ಬ ವಿದ್ಯಾರ್ಥಿ ಭಾಗವಹಿಸುತ್ತಿದ್ದಾರೆ.

ನಾಟಕ ರಚನಾ ಕಮ್ಮಟದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ನಾಡಿನ ಖ್ಯಾತ ನಾಟಕಕಾರರೂ, ವಿಮರ್ಶಕರೂ ಆದ ಡಾ. ಕೆ ವೈ ನಾಯಾರಣಸ್ವಾಮಿ, ಡಾ. ರಾಮಕೃಷ್ಣ ಮರಾಠೆ, ಡಾ. ಹೇಮಾ ಪಟ್ಟಣಶೆಟ್ಟಿ, ಡಾ. ಪ್ರಕಾಶ ಗರುಡ, ಡಾ. ಅರವಿಂದ ಕುಲಕರ್ಣಿ, ಡಾ. ಶ್ರೀಪಾದ ಭಟ್ ಮತ್ತು ಶ್ರೀಮತಿ. ರಜನಿ ಗರುಡ ಅವರು ಭಾಗವಹಿಸಲಿದ್ದಾರೆ. ದಿನಾಂಕ: 26/01/2024 ರಂದು ಮುಂಜಾನೆ 9.30 ಗಂಟೆಗೆ, ಲಿಂಗಾಯತ ಭವನದಲ್ಲಿ ಕಮ್ಮಟದ ಉದ್ಘಾಟನಾ ಸಮಾರಂಭವಿದ್ದು, ಉದ್ಘಾಟನೆಯನ್ನು ನಾಡಿನ ಖ್ಯಾತ ರಂಗ ನಿರ್ದೇಶಕರಾದ ಶ್ರೀ. ಸಿ. ಬಸವಲಿಂಗಯ್ಯ, ಮೈಸೂರು ಇವರು ನೆರವೇರಿಸಲಿದ್ದಾರೆ. ಈ ಹೊತ್ತಿಗೆ ಸಂಸ್ಥೆಯ ಸಂಸ್ಥಾಪಕರಾದ ಅಭಿನೇತ್ರಿ, ಬರಹಗಾರ್ತಿ, ಜಯಲಕ್ಷ್ಮಿ ಪಾಟೀಲ್ ಅವರು ಪ್ರಾಸ್ತಾವಿಕ ನುಡಿ, ಡಾ. ಎಂ ಎಸ್ ಆಶಾದೇವಿ ಆಶಯ ನುಡಿಗಳನ್ನಾಡಲಿದ್ದಾರೆ. ಶ್ರೀಮತಿ. ಸರ್ವಮಂಗಳಾ ಅರಳಿಮಟ್ಟಿ, ಸಂಸ್ಥಾಪಕರು 'ನಮ್ಮವರೊಂದಿಗೆ', ಬೆಳಗಾವಿ ಹಾಗೂ ಶ್ರೀಮತಿ ರತ್ನಪ್ರಭಾ ಬೆಲ್ಲದ, ಅಖಿಲ ಭಾರತ ವೀರಶೈವಲಿಂಗಾಯತ ಮಹಾ ಸಭಾ, ಬೆಳಗಾವಿ ಜಿಲ್ಲಾ ಘಟಕದ ಅಧ್ಯಕ್ಷರು ವೇದಿಕೆಯಲ್ಲಿರುತ್ತಾರೆ. ನಾಟಕ ರಚನಾ ಕಮ್ಮಟ ಇದಾಗಿದ್ದರಿಂದ, ಇದರ ಅಂಗವಾಗಿ, ದಿನಾಂಕ 26/01/2024 ರಂದು ಬೆಳಗಾವಿಯ ರಂಗಸಂಪದ ತಂಡದ ಸಹಕಾರದಿಂದ, ನಗರದ ಕನ್ನಡ ಭವನದಲ್ಲಿ, ಡಾ. ಅರವಿಂದ ಕುಲಕರ್ಣಿ ಅವರ ನಿರ್ದೇಶನದಲ್ಲಿ, ರಾಜೇಂದ್ರ ಕಾರಂತ ಅವರು ರಚಿಸಿದ, 'ಮರಣಮೃದಂಗ' ನಾಟಕದ ಪ್ರದರ್ಶನವಿದೆ. ಹಾಗೂ ದಿನಾಂಕ 27/01/2024 ರಂದು ಮುಂಬಯಿನ ಖ್ಯಾತ ರಂಗಭೂಮಿ ಕಲಾವಿದರಾದ ಶ್ರೀಮತಿ. ಅಹಲ್ಯಾ ಬಲ್ಲಾಳ್ ಅವರು, ರವೀಂದ್ರನಾಥ್ ಟ್ಯಾಗೋರ್ ಅವರ ಕತೆಗಳನ್ನಾಧರಿಸಿದ ಏಕವ್ಯಕ್ತಿ ಪ್ರಯೋಗ, 'ಅವಳ ಕಾಗದ'ವನ್ನು ಪ್ರಸ್ತುತಪಡಿಸಲಿದ್ದಾರೆ. ನಿರ್ದೇಶನ: ಡಾ. ಶ್ರೀಪಾದ ಭಟ್, ರಂಗರೂಪ: ಸುಧಾ ಆಡುಕಳ ಅವರದು. ದಿನಾಂಕ: 28ರಂದು ಸಂಜೆ ಕಮ್ಮಟದ ಸಮಾರೋಪವು ಡಾ. ಎಂ ಎಸ್ ಆಶಾದೇವಿ ಅವರಿಂದ ನೆರವೇರಲಿದೆ.

# ಏಡ್ಸ್ ಆಶ್ರಯ ಆರೈಕೆ ಕೇಂದ್ರ ನಿರ್ಮಾಣ ಕಾಮಗಾರಿ ಚಾಲನೆ

ಬೆಳಗಾವಿ: ಆಶ್ರಯ ಫೌಂಡೇಶನ್ ಮತ್ತು ಜಯಭಾರತ್ ಫೌಂಡೇಶನ್ ವತಿಯಿಂದ ಕರ್ನಾಟಕದ ಏಕೈಕ ಎಚ್ಐವಿ/ ಏಡ್ಸ್ ನಿಂದ ಬಾಧಿತರಾದ ಮಹಿಳೆಯರಿಗೆ ಆಶ್ರಯ ಆರೈಕೆ ಕೇಂದ್ರ ನಿರ್ಮಾಣ ಕಟ್ಟಡ ಕಾಮಗಾರಿಗೆ ಚಾಲನೆ ನೀಡಲಾಯಿತು.

ಅನೇಕ ಮಕ್ಕಳು, ಯುವಕರು, ಮಹಿಳೆಯರು ಏಡ್ಸ್ ಖಾಯಿಲೆಗೆ ತುತ್ತಾಗಿ ಬದುಕು ಕಳೆದುಕೊಳ್ಳುತ್ತಿದ್ದಾರೆ. ಏಡ್ಸ್ ಬಾಧಿತರ ಆರೈಕೆ ಮಾಡುವ ಉದ್ದೇಶದಿಂದ ಬೆಳಗಾವಿಯಲ್ಲಿ ಆಶ್ರಯ ಫೌಂಡೇಶನ್ ಮತ್ತು ಜಯಭಾರತ್ ಫೌಂಡೇಶನ್ ದಿಂದ ಆರೈಕೆ ಕೇಂದ್ರ ಕಟ್ಟಡ ನಿರ್ಮಾಣ ಮಾಡಲಾಗುತ್ತಿರುವುದು ಹೆಮ್ಮೆಯ ವಿಷಯ. ಏಡ್ಸ್ ಬಗ್ಗೆ ಹೆಚ್ಚಿನ ಜಾಗೃತ ಕಾರ್ಯಗಳು ನಡೆಸಲಾಗುವುದು. ಕಾರಂಜಿ ಮಠ ಶ್ರೀ ಗುರುಸಿದ್ಧ ಮಹಾಸ್ವಾಮೀಜಿಗಳ ಆಶೀರ್ವಾದಿಂದ ಸಮಾಜ ಸೇವೆ ಮಾಡುತ್ತಿದ್ದೆವೆ. ಇದಕ್ಕೆ , ಜನರ ಸಹಕಾರ ಬೇಕಿದೆ ಎಂದು ತಿಳಿಸಿದರು.



ಹೆಚ್ಐವಿ ಸೋಂಕಿತ ಮಕ್ಕಳ ಆರೈಕೆ ಮತ್ತು ಬೆಂಬಲ ನೀಡುವುದರೊಂದಿಗೆ ಸೋಂಕಿನೊಂದಿಗೆ ಜೀವಿಸುತ್ತಿರುವ ಅನೇಕ ಮಕ್ಕಳಿಗೆ ಸಾಂತ್ವನ ನೀಡಿ, ಮಕ್ಕಳಿಗೆ ಸುಸಜ್ಜಿತವಾದ ಆರೈಕೆ ಮಾಡಲಾಗುವುದು. ಸಾಮಾಜಿಕ– ಮಾನಸಿಕ ಹಾಗೂ ನೈತಿಕ ಜೀವನದ ಬೆಂಬಲದ ಜೊತೆ ಪೌಷ್ಠಿಕ ಆಹಾರ ನೀಡಲಾಗುವುದು. ಕಟ್ಟಡಕ್ಕೆ ಆರ್ಥಿಕ ಸಹಾಯ–ಸಹಕಾರ ನೀಡಲಾಗುವುದು ಎಂದು ಆಶ್ರಯ ಫೌಂಡೇಶನ್ , ಜಯಭಾರತ್ ಫೌಂಡೇಶನ್ ಅವರು ತಿಳಿಸಿದರು.

ಮಯೂರಾ ಜಯಂತ ಹುಂಬರವಾಡಿ, ಆಶ್ರಯ ಫೌಂಡೇಶನ್ ನಿರ್ದೇಶಕರಾದ ನಾಗರತ್ನ ರಾಮಗೌಡ, ಅರ್ಚನಾ ವಿನೋದ್ ಪದ್ಮನ್ನವರ್, ಪ್ರಮೀಳಾ ಕಾಡ್ರೊಳ್ಳಿ, ಅಭಿನಂದನೆ ಸಲ್ಲಿಸಿದರು .

ಆಶ್ರಯ ಫೌಂಡೇಶನ್ ವತಿಯಿಂದ ಸಂಸ್ಥೆಗೆ ಮಾಡುತ್ತಿರುವ ಪ್ರತಿಯೊಂದು ವ್ಯಕ್ತಿಗೂ ಹಾಗೂ ದಾನಿಗಳಿಗೆ ಕೃತಜ್ಞತೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಆರ್ ಟಿಒ ಆಯುಕ್ತರಾದ ಎಂ. ಪಿ. ಓಂಕಾರೇಶ್ವರಿ , ಗೋಪಾಲ ಜಿನಗೌಡ , ಜ್ಯೋತಿ ನಜಾರೆ , ಶ್ವೇತಾ ಮಹಾಂತೇಶ್, ಮಹೇಶ್ ಶೆಟ್ಟಿ ಮತ್ತು ದಿನೇಶ್ ನಾಯಕ್ , ಶೋಭಾ ಪೀ ದೊಡ್ಡಣ್ಣವರ್, ಓಂಪ್ರಕಾಶ್ ನಾಯಕ್ , ಸುಭಾಷ್ ವೋಲ್ಕರ್, ಫರ್ವೇಜ್ ಹವಾಲ್ದಾರ್, ಆಶಾ ಯಮಕನಮರಡಿ, ಅರುಣಾ ಸಾರಾಫ್, ಸುಶೀಲ್ ಮುಂಬೈ, ಶಾರದಾ ಬೊಳ್ಮಲ್ , ವಿಜಯ್ ಹನುಮಗೌಡ, ವರ್ಷಾ ಪದ್ಮಣ್ಣವರ್, ರಾಹುಲ್ ಕಲ್ಲನವರ್ , ವಿನೋದ್ , ಜಯಶ್ರೀ ಸೂರ್ಯವಂಶಿ, ಬಾಲಚಂದ್ರ ಪಾಟೀಲ್ ಉಪಸ್ಥಿತರಿದ್ದರು.

## ಬೆಳಗಾವಿ ಬಿಮ್ಸ್ ಆಸ್ಪತ್ರೆಗೆ ಅಂಜುಮ್ ಪರ್ವೇಜ್ ಭೇಟಿ

ಬೆಳಗಾವಿ: ಇಲ್ಲಿನ ಬಿಮ್ಸ್ ಆಸ್ಪತ್ರೆಗೆ ಬೆಳಗಾವಿ ಉಸ್ತುವಾರಿ ಕಾರ್ಯದರ್ಶಿ ಅಂಜುಮ್ ಪರ್ವೇಜ್ ದಿಢೀರ್ ಭೇಟಿ ನೀಡಿ ಆಸ್ಪತ್ರೆ ಕಟ್ಟಡ ಬುಧವಾರ ಪರಿಶೀಲನೆ ನಡೆಸಿದರು.

ಜಿಲ್ಲಾ ಆಸ್ಪತ್ರೆಯಲ್ಲಿ ರೋಗಿಯ ಸಂಬಂಧಿಕರಿಂದ ಹಣ ಪಡೆದು ಚಿಕಿತ್ಸೆ ನೀಡುತ್ತಿದ್ದಾರೆ ಎನ್ನುವ ದೂರನ್ನು ಇತ್ತೀಚೆಗೆ ಮಾಜಿ ಮೇಯರ್ ವಿಜಯ ಮೋರೆ ದೂರು ನೀಡಿದ್ದರು. ಅಲ್ಲದೆ, ಸಿಬ್ಬಂದಿಗಳು ಸರಿಯಾದ ಸಮಯಕ್ಕೆ ಹಾಜರಾಗುತ್ತಿಲ್ಲ ಎನ್ನುವ ಆರೋಪ ಕೇಳಿ ಬಂದ ಹಿನ್ನೆಲೆಯಲ್ಲಿ ಭೇಟಿ ನೀಡಿ ಪರಿಶೀಲನೆ ನಡೆದರು.

ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಬೆಳಗಾವಿ ಉಸ್ತುವಾರಿ ಕಾರ್ಯದರ್ಶಿ ಅಂಜುಮ್ ಪರ್ವೇಜ್ ಅವರು, ಬಿಮ್ಸ್ ಆಸ್ಪತ್ರೆಗೆ ಭೇಟಿ ನೀಡಿ ವೈದ್ಯರ ಹಾಜರಾತಿ, ವೈದ್ಯಕೀಯ ಸೌಲಭ್ಯಗಳು ನೂತನ ಕಟ್ಟಡ ಕಾಮಗಾರಿ ಕೊಠಡಿಗಳ, ಆಸ್ಪತ್ರೆ ಬೆಡ್ ಗಳ ಬಗ್ಗೆ ಪರಿಶೀಲನೆ ನಡೆಸಿದ್ದೇವೆ ಎಂದು ತಿಳಿಸಿದರು.



ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ಮಾತನಾಡಿ, ಅಂಜುಮ್ ಪರ್ವೇಜ್ ಯವರು ಸಿಎಂ ಆದೇಶದಂತೆ ಬಂದು ಬಿಮ್ಸ್ ಆಸ್ಪತ್ರೆ ದಿಢೀರ್ ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಆಸ್ಪತ್ರೆಯ ಡಯಾಲೀಸ್ ಕೇಂದ್ರ , ಮಡಿಕಲ್, ಆಸ್ಪತ್ರೆ ಬೆಡ್ ಗಳನ್ನು ಎಲ್ಲಾ ಪರಿಶೀಲಿಸಿದ್ದಾರೆ.

ನಂತರ ಅಂಗನವಾಡಿ ಕೇಂದ್ರಗಳು, ತಾಲೂಕು ಕಚೇರಿಯನ್ನು ಪರಿಶೀಲನೆ ಮಾಡುತ್ತಾರೆ. ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಶೀಘ್ರದಲ್ಲಿ ಉದ್ಘಾಟನೆ ಆಗುತ್ತೇದೆ ಎಂದು ಹೇಳಿದರು. ಈ ವೇಳೆ ಡಿ.ಹೆಚ್.ಓ .ಮಹೇಶ್ ಕೋಣಿ , ಸಿಇಒ ಶಿಂಧೆ, ಡಾ. ಅಣ್ಣಾಸಾಬ್ ಪಾಟೀಲ್ ಇತರರು ಇದ್ದರು.

## ಗಣರಾಜ್ಯೋತ್ಸವ ದಿನಾಚರಣೆ ಸಮಾರಂಭಗಳಲ್ಲಿ ಭಾರತ ರತ್ನ ಡಾ. ಬಿ.ಆರ್.ಅಂಬೇಡ್ಕರ್ ಭಾವಚಿತ್ರ ಕಡ್ಡಾಯ

ಬಳ್ಳಾರಿ: ಜ.26 ರಂದು ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ರಾಜ್ಯ ಸರ್ಕಾರಿ ಕಚೇರಿಗಳು, ಸರ್ಕಾರಿ ಸ್ವಾಮ್ಯಕ್ಕೆ ಒಳಪಡುವ ಸಂಸ್ಥೆಗಳು ಹಾಗೂ ಸರ್ಕಾರಿ ಶಾಲಾ ಕಾಲೇಜು ಸೇರಿದಂತೆ ಸರ್ಕಾರದ ವತಿಯಿಂದ ನಡೆಯುವ ಎಲ್ಲಾ ಗಣರಾಜ್ಯೋತ್ಸವ ಸಮಾರಂಭಗಳಲ್ಲಿ ಭಾರತ ಸಂವಿಧಾನ ಪಿತಾಮಹ ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರವನ್ನು ಕಡ್ಡಾಯವಾಗಿ ಇಡುವಂತೆ ಜಿಲ್ಲಾಡಳಿತ ಪ್ರಕಟಣೆ ತಿಳಿಸಿದೆ.

# ಕೆಎಲ್‌ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯಲ್ಲಿ ಮಕ್ಕಳ ಆರೋಗ್ಯ ಅಭಿವೃದ್ಧಿಕೇಂದ್ರ (ಸಿಡಿಸಿ) ದ ಪ್ರಾರಂಭ

ಬೆಳಗಾವಿ: ನಗರದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯಲ್ಲಿ ನವೀನವಾಗಿ ಮಕ್ಕಳ ಆರೋಗ್ಯ ಅಭಿವೃದ್ಧಿಕೇಂದ್ರದ ಉದ್ಘಾಟನೆಯನು ,ಯುಎಸ್‌ಎಮ್ ಕೆ ಎಲ್ ಇ ಯ ನಿರ್ದೇಶಕರಾದಡಾ. ಹೆಚ್ ಬಿ ರಾಜಶೇಖರ ಅವರ ಅಮೃತ ಹಸ್ತದಿಂದ ನೆರವೇರಿಸಲಾಯಿತು. ಉದ್ಘಾಟನಾರ್ಥವಾಗಿ ಮಾತನಾಡುತ್ತಿದ್ದ ಅವರು" ಪ್ರತಿಯೊಬ್ಬ ಮಗುವಿಗೂ ಆರೋಗ್ಯವಾಗಿ ಬೆಳೆಯುವ ಹಕ್ಕಿದೆ. ಅದನ್ನು ಸಾಕಾರಗೊಳಿಸುವದು ಪ್ರತಿಯೊಬ್ಬ ಪೋಷಕರ ಹಾಗೂ ವೈದ್ಯರಆದ್ಯಕರ್ತವ್ಯವಾಗಿದೆ.ಈ ನಿಟ್ಟಿನಲ್ಲಿ ಮಕ್ಕಳ ಸರ್ವತೋಮುಖ ಬೆಳವಣಿಗೆಯ ಕಡೆ ಗಮನಹರಿಸಿ ಅದುಕುಂಠಿತಗೊಂಡಿದ್ದರೆ ನುರಿತ ವೈದ್ಯರಿಗೆ ತೋರಿಸಿ ಆ ಮಗುವಿನ ಬೆಳವಣಿಗೆಗೆ ಸಹಕರಿಸಬೇಕು"ಎಂದು ತಿಳುವಳಿಕೆ ನೀಡುತ್ತಿದ್ದರು.

ಈ ಸಂದರ್ಭದಲ್ಲಿ ಮಾತನಾಡುತ್ತಿದ್ದ ಹಿರಿಯ ಚಿಕ್ಕಮಕ್ಕಳ ತಜ್ಞೆಡಾ.ಸೌಮ್ಯಾ ವೇರ್ಣೇಕರಅವರು ಮಕ್ಕಳಲ್ಲಿ, ಕುಂಠಿತ ಬೆಳವಣಿಗೆ, ಮಾತನಾಡುವದ 'ನ್ನುಕಲಿಯುವದರಲ್ಲಿ ವಿಳಂಬ, ಶಾಲಾ ಅಭಿವೃದ್ದಿಯಲ್ಲಿಅಸಮರ್ಥತೆ.ಕಲಿಕಾ ಅಸಮರ್ಥತೆ, ಕಲಿಕೆಯಲ್ಲಿ ನಿಧಾನವಾಗಿರುವ ಮಕ್ಕಳು, ವರ್ತನಾ ಸಮಸ್ಯೆಗಳು, ಆಟಿಸಂ, ಎಡಿಹೆಚ್‌ಡಿ, ಹದಿಹರೆಯದವರ ಸಮಾಲೋಚನೆ.ನವಜಾತ ಶಿಶುಗಳ ಮೇಲ್ವಿಚಾರಣೆ ಹಾಗೂ ಚಿಕಿತ್ಸೆ.ಹಾಗೂ ಮಕ್ಕಳಲ್ಲಿ ಸೆರೆಬ್ರಲ್ ಪಾಲ್ಸಿ ಮತ್ತುಡೌನ್ ಸಿಂಡ್ರೋಮ್ ಗಳಂತಹ ನರಸಂಬಂಧಿತ ಕಾಯಿಲೆಗಳ ಮೇಲೆ ನಿಖರಚಿಕಿತ್ಸೆ ಗಳನ್ನು ಈ ಕೇಂದ್ರದಆಧೀನದಲ್ಲಿ ಪಡೆದುಕೊಳ್ಳಬಹುದಾಗಿದೆ. ಈ ಸೇವೆಯು ನಮ್ಮಆಸ್ಪತ್ರೆಯ ಚಿಕ್ಕಮಕ್ಕಳ ವಿಭಾಗದಲ್ಲಿ ಪ್ರತಿ ಬುಧವಾರದಂದು ಲಭ್ಯವಿರುತ್ತದೆ. ಎಂದು ಮಕ್ಕಳ ಆರೋಗ್ಯ ಅಭಿವೃದ್ಧಿ ಕೇಂದ್ರದಕಾರ್ಯವೈಖರಿಯನ್ನುಕುರಿತು ಮಾತನಾಡಿದರು.




ಈ ಸಂದರ್ಬದಲ್ಲಿ ಚಿಕ್ಕಮಕ್ಕಳ ವಿಭಾಗದ ಮುಖ್ಯಸ್ಥರಾದ ಡಾ.ಎಮ್‌ಎಸ್‌ಕಡ್ಡಿ ಪ್ರಾಸ್ತಾವಿಕವಾಗಿ ಮಾತನಾಡಿಮಕ್ಕಳ ಆರೋಗ್ಯ ಅಭಿವೃದ್ಧಿ ಕೇಂದ್ರದ ಅವಶ್ಯಕತೆಯನ್ನುಕುರಿತು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತಿದ್ದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದಡಾ. ಎಸ್ ಸಿ ಧಾರವಾಡಅವರು ಮಾತನಾಡುತ್ತ"ಸುತ್ತಮುತ್ತಲ ನಾಗರಿಕರ ಮನೆಮಾತಾಗಿರುವ ನಮ್ಮಆಸ್ಪತ್ರೆಯಲ್ಲಿ ವಿನೂತನವಾಗಿ ಪ್ರಾರಂಭವಾದ ಈ ಕೇಂದ್ರವು ಮಕ್ಕಳ ನರವ್ಯೂಹಕ್ಕೆ ಸಂಭಂದಿಸಿದಂತಹ ಸಮಸ್ಯೆಗಳು, ಬೆಳವಣಿಗೆ ಹಾಗೂ ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೆ ನಿಖರಚಿಕಿತ್ಸೆಯನ್ನು ನೀಡಲಾಗುತ್ತದೆ.

,ಅಲ್ಲದೇ ಈ ಕೇಂದ್ರಗಳಲ್ಲಿ ಚಿಕಿತ್ಸೆಯನ್ನು ಬಯಸುವ ಮಕ್ಕಳಿಗೆ ನಮ್ಮಆಸ್ಪತ್ರೆಯ ಪ್ರಯೋಗಾಲಯ ಸೇವೆಗಳು ರಿಯಾಯತಿದರದಲ್ಲಿ ಲಭ್ಯವಿರುತ್ತವೆ. ಆದ್ದರಿಂದಚಿಕಿತ್ಸೆಯನ್ನು ಬಯಸುವ ಮಕ್ಕಳ ಪಾಲಕರು ಈ ಮೊಬೈಲ ಸಂಖ್ಯೆಗಳ 8550887777,7483377256 ಮೇಲೆ ಸಂಪರ್ಕಿಸಬಹುದುಎಂದು ತಿಳುವಳಿಕೆ ನೀಡಿದರು.

ಕಾರ್ಯಕ್ರಮದಲ್ಲಿ ಹಿರಿಯ ವೈದ್ಯಡಾ.ಸಿ ಎನ್‌ತುಗಶೆಟ್ಟಿ, ಜನರಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥರಾದ.ಡಾ. ಶ್ರೀನಿವಾಸ ಬಿ, ಶಸ್ತ್ರಚಿಕಿತ್ಸೆ ವಿಭಾಗದ ಮುಖ್ಯಸ್ಥರಾದಡಾ.ಎ ಕೆ ರಡ್ಡೆರ, ಕಿವಿ ಗಂಟಲು ಮೂಗು ವಿಭಾಗದತಜ್ಞಡಾ. ವಿ ಡಿ ಕೊಳ್ವೇಕರ, ಸ್ತ್ರೀ ರೋಗ ಹಾಗೂ ಪ್ರಸೂತಿ ವಿಬಾಗದತಜ್ಞಡಾ.ಸತೀಶಧಾಮ ನಕರ, ಡಾ.ಕೆ ಎನ್ ಹೋಲಿಕಟ್ಟಿ ಹಾಗೂ ಚಿಕ್ಕಮಕ್ಕಳ ವಿಭಾಗದ ಇನ್ನುಳಿದ ತಜ್ಞರಾದಡಾ.ಬಸವರಾಜಕುಡಸೋಮಣ್ಣವರ, ಡಾ.ಯೋಗೇಶ ರಾವಳ ಮುಂತಾದ ವೈದ್ಯಕೀಯ, ವೈದ್ಯಕೀಯೇತರ ಸಿಬ್ಬಂದಿ ಮತ್ತು ನಾಗರಿಕರು ತಮ್ಮ ಮಕ್ಕಳೊಂದಿಗೆ ಉಪಸ್ಥಿತರಿದ್ದರು.

ಕಾರ್ಯಕ್ರಮವನ್ನುಡಾ.ಸೌಮ್ಯಾ ವೇರ್ಣೇಕರ ಸ್ವಾಗತಿಸಿ ನಿರೂಪಿಸಿ.ಡಾ. ಯೋಗೇಶ ರಾವಳ ವಂದಿಸಿದರು.

## ಶಿಕ್ಷಕರ ಸಂಘಕ್ಕೆ ಪಾಟೀಲ್ ನೇಮಕ



ಕೆಂಭಾವಿ: ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಕೇಂದ್ರ ಸಂಘಟನಾ ಕಾರ್ಯದರ್ಶಿಯಾಗಿ ಸಮೀಪದ ಕರಿಭಾವಿ ಪ್ರಾಥಮಿಕ ಶಾಲೆಯ ಶಿಕ್ಷಕ ಶಿವನಗೌಡ ಎಸ್. ಪಾಟೀಲ ಕೆಂಭಾವಿ ರವರನ್ನು ನೇಮಕ ಮಡಲಾಗಿದೆ. ಈ ಕುರಿತು ಕೇಂದ್ರ ಸಂಘದ ಅಧ್ಯಕ್ಷ ಕೆ. ನಾಗೇಶ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ ಮಗ್ಗಲಿ ಜಂಟಿಯಾಗಿ ಅನುಮೋದನೆ ಪ್ರಮಾಣ ಪತ್ರ ನೀಡಿರುತ್ತಾರೆ.

## ವ್ಯಕ್ತಿ ನಾಪತ್ತೆ



ಬೆಳಗಾವಿ: ಕಲ್ಲೆಹೊಳ ಗ್ರಾಮದ ಪರಶುರಾಮ ನಾನಾ ಗೌಂಡಾಡಕರ (36) ಮತ್ತು ಚಂದಗಡ ತಾಲೂಕಿನ ಹಜಗೊಳಿ ಗ್ರಾಮದ ಮಾರುತಿ ಕೃಷ್ಣಾ ನಾಕಾಡಿ (55) ಇವರು ಜ.21 ರಂದು ಮುಂಜಾನೆ 11 ಗಂಟೆಗೆ ಮನೆಯಿಂದ ಹೊರಗೆ ಹೋಗಿ ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದಾರೆ. ಕಾಣೆಯಾದವರನ್ನು ಹುಡಕಿ ಕೊಡಬೇಕಾಗಿ ಮೀರಾ ಪರಶುರಾಮ ಗೌಂಡಾಡಕರ ಇವರು ಕಾಕತಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

ಕಾಣೆಯಾದ ವ್ಯಕ್ತಿಗಳ ವಿವರ:

ಪರಶುರಾಮ ನಾನಾ ಗೌಂಡಾಡಕರ ಇವರು ಮನೆಯಿಂದ ಹೋಗುವಾಗ ನೀಲಿ ಬಣ್ಣದ ಪುಲ್ ತೋಳಿನ ಶರ್ಟ್, ಕಾಕಿ ಬಣ್ಣದ ಹಾಫ್ ಪ್ಯಾಂಟ ಧರಿಸಿರುತ್ತಾರೆ. ಎತ್ತರ 5 ಅಡಿ 6 ಇಂಚು, ಕೆಂಪು ಬಣ್ಣ ಅಗಲ ಮುಖ, ಉದ್ದ ಮೂಗು, ಸದೃಡ ಮೈಕಟ್ಟು, ಇವರು ಹಿಂದಿ ಹಾಗೂ ಮರಾಠಿ ಭಾಷೆ ಮಾತನಾಡುತ್ತಾರೆ.

ಮಾರುತಿ ಕೃಷ್ಣಾ ನಾಕಾಡಿ ಇವರು ಮನೆಯಿಂದ ಹೋಗುವಾಗ ಬಿಳಿ ಬಣ್ಣದ ಪುಲ್ ತೋಳಿನ ಶರ್ಟ್, ಕಪ್ಪು ಬಣ್ಣದ ಹಾಫ್ ಪ್ಯಾಂಟ್ ಧರಿಸಿರುತ್ತಾರೆ. 5 ಅಡಿ 1 ಇಂಚು ಇದ್ದು, ಕಪ್ಪು ಮೈಬಣ್ಣ, ಅಗಲ ಮುಖ, ಉದ್ದ ಮೂಗು ಸದೃಡ ಮೈಕಟ್ಟು ಇರುತ್ತದೆ.

ಸದರಿ ವ್ಯಕ್ತಿಗಳ ಕುರಿತು ಮಾಹಿತಿ ತಿಳಿದು ಬಂದಲ್ಲಿ, ಕಾಕತಿ ಪೊಲೀಸ್ ಠಾಣೆಯ ದೂರವಾಣಿ 0831–2405203 ಅಥವಾ 9480804083/9480804115 ಸಂಖ್ಯೆಗಳಿಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮಾನತೆಯ ಕಡೆ ಎಂಬ ಕನ್ನಡ ಚಲನಚಿತ್ರ ಮರು ಪ್ರಸಾರ

ಬೆಳಗಾವಿ: ಅಸ್ಪೃಶ್ಯತೆ ನಿವಾರಣೆ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಸಲುವಾಗಿ "ಸಮಾನತೆಯ ಕಡೆ" ಎಂಬ ಕನ್ನಡ ಚಲನಚಿತ್ರವನ್ನು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪ್ರಾಯೋಜನೆ ಮಾಡಿ ಸರ್ಕಾರಿ ಟಿ.ವಿ ಚಾನಲ್ ಆದ ಚಂದನ ವಾಹಿನಿಯಲ್ಲಿ ಜ. 26 ರಂದು ಗಣರಾಜ್ಯೋತ್ಸವದ ದಿನದಂದು ಮಧ್ಯಾಹ್ನ 2.30 ರಿಂದ 4.30ರ ಅವಧಿಯಲ್ಲಿ ಪ್ರಸಾರ ಮಾಡಲಾಗುತ್ತಿದೆ.

ಆದ ಕಾರಣ ಸಾರ್ವಜನಿಕರು ಈ ಚಲನ ಚಿತ್ರವನ್ನು ವೀಕ್ಷಿಸಲು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಲಕ್ಷ್ಮಣ ಬಬಲಿ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ; ನೇರ ಸಂದರ್ಶನ

ಬೆಳಗಾವಿ: ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ವತಿಯಿಂದ ಹುಕ್ಕೇರಿಯ ತಾಲೂಕಿನ ಕಣಗಲಾನ ಇಂಡಸ್ಟ್ರಿಯಲ್ ಏರಿಯಾದಲ್ಲಿ ಜ. 29 ಮುಂಜಾನೆ 10.30 ರಿಂದ 2 ಗಂಟೆಯವರೆಗೆ, ಡಿಪ್ಲೋಮಾ (ಮೆಕ್ಯಾನಿಕಲ್, ಇಲೆಕ್ಟ್ರಿಕಲ್) ಮತ್ತು ಬಿಎಸ್‌ಸಿ (ಕೆಮೆಸ್ಟ್ರಿ) ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಗಾಗಿ ಖಾಸಗಿ ಕಂಪನಿಯಿಂದ ನೇರ ಸಂದರ್ಶನವನ್ನು ಆಯೋಜಿಸಲಾಗಿದೆ.

ಆಸಕ್ತ ಪುರುಷ ಅಭ್ಯರ್ಥಿಗಳು ੃ಣಣಠಿ://ಜುಟಿಥಿಣಡಿಟ.ಛಿಂಟ/3ಛಟಿತಿ3ಥಿಜ3 ಈ ವೆಬ್‌ಸೈಟ್‌ನಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಅಭ್ಯರ್ಥಿಗಳಿಗೆ ಉದ್ಯೋಗಾವಕಾಶವು ಉಚಿತವಾಗಿದ್ದು, ಇನ್ನುಳಿದ ಯಾವುದೇ ಸೌಲಭ್ಯಗಳು ಇರುವುದಿಲ್ಲ.

ಆಸಕ್ತ ಅಭ್ಯರ್ಥಿಗಳು ಹೆಚ್ಚಿನ ಮಾಹಿತಿಗಳಿಗಾಗಿ ಮೊಬೈಲ್ ಸಂಖ್ಯೆ: 7975856566 ಸಂಪರ್ಕಿಸಬೇಕು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗಣರಾಜ್ಯೋತ್ಸವ ದಿನಾಚರಣೆ ನಿಮಿತ್ಯ ಜಿಲ್ಲೆಯ ಎಲ್ಲ ಸಾರ್ವಜನಿಕ ದೇವಾಲಯ ವಿಶೇಷ ಪೂಜೆ ಜ.26 ರಂದು

ಬೆಳಗಾವಿ: ಗಣರಾಜ್ಯೋತ್ಸವ ದಿನಾಚರಣೆ ನಿಮಿತ್ಯ ಜ.26 ರಂದು ಬೆಳಿಗ್ಗೆ 6 ರಿಂದ 7 ಗಂಟೆವರೆಗೆ ಬೆಳಗಾವಿಯ ಎಲ್ಲ ಸಾರ್ವಜನಿಕ ದೇವಾಲಯ, ಮಂದಿರ, ಮಸೀದಿ, ಚರ್ಚ್, ಗುರುದ್ವಾರ, ಬೌದ್ಧ ಮಂದಿರ, ಹಾಗೂ ಜೈನ್ ಬಸದಿಗಳಲ್ಲಿ, ದೇಶದ ಶಾಂತಿ ಹಾಗೂ ಐಕ್ಯತೆಗಾಗಿ ವಿಶೇಷ ಪೂಜೆ, ಪ್ರಾರ್ಥನೆ, ಸಲ್ಲಿಸುವಂತೆ ಸಾರ್ವಜನಿಕ ಸಂಸ್ಥೆಗಳ ಪದಾಧಿಕಾರಿಗಳಿಗೆ ಹಿಂದೂ ಧಾರ್ಮಿಕ ದತ್ತಿ ಇಲಾಖೆ ಸಹಾಯಕ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷಿ ನವೋದ್ಯಮ ಕಾರ್ಯಕ್ರಮ

ಬೆಳಗಾವಿ: 2023–24ನೇ ಸಾಲಿನಲ್ಲಿ ಕೃಷಿ ಕ್ಷೇತ್ರದಲ್ಲಿ ಉದ್ಯಮಶೀಲತೆ ಹೊಂದಲು ಕೃಷಿ ನವೋದ್ಯಮ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಆಸಕ್ತ ಪ್ರಗತಿಪರ ರೈತರು ಕೃಷಿ ವಲಯದಲ್ಲಿ ನವೋದ್ಯಮ ಆರಂಭಿಸಲು ಸಹಾಯ ನೀಡಿ, ಗ್ರಾಮೀಣ ಭಾಗದಲ್ಲಿ ಉದ್ಯೋಗ ಸೃಜನೆ ಮಾಡುವುದು ಕಾರ್ಯಕ್ರಮದ ಉದ್ದೇಶವಾಗಿದೆ.

ಯೋಜನೆಯ ಘಟಕಗಳು:

ಕೃಷಿ ಕ್ಷೇತ್ರದಲ್ಲಿ ನೂತನ ಪರಿಕಲ್ಪನೆಯೊಂದಿಗೆ ಆರಂಭಿಸುವ ಹೊಸ ಕೃಷಿ ನವೋದ್ಯಮಿಗಳಿಗೆ ಬ್ಯಾಂಕ್‌ಗಳ ಮೂಲಕ ಶೇ.50% ರಷ್ಟು ಸಹಾಯಧನ ನೀಡಲಾಗುವುದು.

ಕೃಷಿ ವಲಯದಲ್ಲಿ ಸ್ಥಾಪಿಸಲಾದ ನವೋದ್ಯಮಗಳ ವಿಸ್ತರಣೆಗಾಗಿ, ಉನ್ನತಿಕರಣಕ್ಕಾಗಿ ಬ್ಯಾಂಕ್‌ಗಳ ಮೂಕಲ ಶೇ. 50 ರಷ್ಟು ಸಹಾಯಧನ ನೀಡಲಾಗುವುದು.

ಆಯ್ಕೆಯಾದ ನವೋದ್ಯಮಗಳ ಸಾಮರ್ಥ್ಯಾಭಿವೃದ್ದಿಗೆ ಕೃಷಿ ವಿಶ್ವವಿದ್ಯಾಲಯ **ICAR, CFTRI, CSIRC-CAMP** ಇತರೆ ಸಂಶೊಧನಾ ಸಂಸ್ಥೆಗಳಗೆ ವಿದ್ಯುನ್ಮಾನ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯಡಿ ಸ್ಥಾಪಿತವಾಗಿರುವ ಕೃಷಿ ನಾವೀನ್ಯತೆಗಾಗಿ ಶ್ರೇಷ್ಠತೆಯ ಕೇಂದ್ರಗಳ ಮೂಲಕ ತರಬೇತಿಗಳನ್ನು ನೀಡಲಾಗುವುದು.

ಆಸಕ್ತಿಯುಳ್ಳ ಫಲಾನುಭವಿಗಳು ಜ.25ರ ಒಳಗಾಗಿ ಅರ್ಜಿಯನ್ನು ತಮ್ಮ ತಾಲೂಕಿನ ಸಮೀಪದ ರೈತ ಸಂಪರ್ಕ ಕೇಂದ್ರ, ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ಬೆಳಗಾವಿ ವಿಭಾಗದ ಉಪ ಕೃಷಿ ನಿರ್ದೇಶಕರ ಕಛೇರಿ ಹಾಗೂ ಜಂಟಿ ಕೃಷಿ ನಿರ್ದೇಶಕರ ಕಛೇರಿ ಇವರಿಗೆ ಅರ್ಜಿಯನ್ನು ಸಲ್ಲಿಸಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ದುಡಿಯುವ ಕೈಗಳಿಗೆ ಕೆಲಸ ನೀಡಿ: ಜಿಪಂ ಸಿಇಓ ರಾಹುಲ್ ಶಿಂಧೆ



ಬೆಳಗಾವಿ: ಜಿಲ್ಲೆಯಲ್ಲಿ ಬರಗಾಲ ಸಂಭವಿಸಿದ್ದು, ಯಾವುದೇ ರೀತಿ ಸಮಸ್ಯೆ ಆಗದಂತೆ ಎಲ್ಲರೂ ಕೆಲಸ ಮಾಡಬೇಕು. ದುಡಿಯುವ ಕೈಗಳಿಗೆ ಮನರೇಗಾದಡಿ ಕೆಲಸ ನೀಡಬೇಕು ಎಂದು ಜಿಲ್ಲಾ ಪಂಚಾಯತ್ ಸಿಇಒ ರಾಹುಲ್ ಶಿಂಧೆ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ (ಜ.23) ವಿಡಿಯೋ ಸಂವಾದದ ಮೂಲಕ ತಾಲ್ಲೂಕು ಪಂಚಾಯತ್ ಅಧಿಕಾರಿಗಳೊಂದಿಗೆ ನಡೆದ ವಿವಿಧ ಯೋಜನೆಗಳ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮನರೇಗಾ ಯೋಜನೆಯ ಮೂಲಕ ಬಡವರಿಗೆ ಕೆಲಸ ನೀಡಬೇಕು. ಇದರಿಂದಾಗಿ ಅವರಿಗೆ ಬರಗಾಲ ಇರುವುದರಿಂದ ಅನುಕೂಲವಾಗುತ್ತದೆ. ಮನರೇಗಾದಡಿ ಕೈಗೊಂಡಿದ್ದ ಅಮೃತ ಸರೋವರಗಳ ಕಾಮಗಾರಿಗಳನ್ನು ಕೂಡಲೇ ಪೂರ್ಣಗೊಳಿಸಬೇಕು. ಪ್ರತಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಕಾಮಗಾರಿಗಳು ಪೂರ್ಣಗೊಳಿಸದೇ ಹಾಗೇ ಉಳಿದುಕೊಂಡಿವೆ. ಅಂತಹ ಕಾಮಗಾರಿಗಳನ್ನು ಸಂಬಂಧಿಸಿದ ಅಧಿಕಾರಿಗಳು ಪೂರ್ಣಗೊಳಿಸಬೇಕು ಎಂದು ಸೂಚನೆ ನೀಡಿದರು.

ಮನರೇಗಾ ಯೋಜನೆಯಡಿ ಗೋಮಾಳ ಅಭಿವೃದ್ಧಿ ಪಡಿಸುವ ನಿಟ್ಟಿನಲ್ಲಿ ಯೋಜನೆ ಕೈಗೊಂಡು ಕಾಮಗಾರಿ ಕೈಗೆತ್ತಿಕೊಳ್ಳಬೇಕು. ಶಾಂತಿ ಧಾಮಗಳನ್ನು ಕೂಡ ಕೂಡಲೇ ಅಭಿವೃದ್ಧಿಪಡಿಸಬೇಕು.

ವಸತಿ ಯೋಜನೆಯಡಿ ಆಯ್ಕೆ ಮಾಡಲಾದ ಫಲಾನುಭವಿಗಳಿಗೆ ಸಕಾಲದಲ್ಲಿ ಅನುದಾನ ತಲುಪಬೇಕಿದೆ.

ಅಲ್ಲದೇ ಫಲಾನುಭವಿಗಳು ಮನೆಗಳನ್ನು ಕಟ್ಟಿಕೊಳ್ಳಲು ಕ್ರಮ ವಹಿಸುವುದು. ಈ ನಿಟ್ಟಿನಲ್ಲಿ ಜಿಯೋ ಟ್ಯಾಗ್ ಮಾಡುವುದು ಸೇರಿದಂತೆ ಯಾವುದೇ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ಸ್ವಚ್ಛ ಭಾರತ ಮಿಷನ್ ಯೋಜನೆಗೆ ಸಂಬಂಧಿಸಿದಂತೆ ಪ್ರಗತಿಯಲ್ಲಿರುವ ಸಮುದಾಯ ಶೌಚಾಲಯಗಳನ್ನು ಒಂದು ವಾರದೊಳಗೆ ಮುಕ್ತಾಯ ಮಾಡಲು ತಿಳಿಸಿದರು. SWM ಸಂಬಂಧಿಸಿದಂತೆ ಪ್ರತಿ ಗ್ರಾಮ ಪಂಚಾಯತಿಗಳಲ್ಲಿ ಪ್ರತಿ ದಿನ ಕಸ ನಿರ್ವಹಣೆ ಕಾರ್ಯ ಪ್ರಗತಿಯಲ್ಲಿರಬೇಕು. ಎಂದು ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತಿಯ ಉಪಕಾರ್ಯದರ್ಶಿಗಳು (ಆಡಳಿತ), ಉಪಕಾರ್ಯದರ್ಶಿಗಳು (ಅಭಿವೃದ್ಧಿ), ಯೋಜನಾ ನಿರ್ದೇಶಕರು (ಡಿ.ಆರ್.ಡಿ.ಎ), ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಯೋಜನಾಧಿಕಾರಿಗಳು, ಜಿಲ್ಲೆಯ ಎಲ್ಲ ತಾಪಂ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು, ಪಿಡಿಒಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

## ಪ್ರೌಢ ಶಾಲಾ ವಿಭಾಗದ ಉಪಪ್ರಾಚಾರ್ಯ ಕೆ. ಬಿ. ಹಿರೇಮಠ ಬಂಧನ

ಬೆಳಗಾವಿ: ಬೆಳಗಾವಿಯ ಸಿದ್ದರಾಮೇಶ್ವರ ಶಿಕ್ಷಣ ಸಂಸ್ಥೆಯ ಸಂಯುಕ್ತ ಪ.ಪೂ ಮಹಾವಿದ್ಯಾಲಯದ ಬಸವೇಶ್ವರ ಪ್ರೌಢ ಶಾಲಾ ವಿಭಾಗದ ಉಪಪ್ರಾಚಾರ್ಯ ಕೆ.ಬಿ.ಹಿರೇಮಠ ಅವರು ಗಳಿಕೆ ರಜೆ ನಗದೀಕರಣ ಮಾಡಲು ಠರಾವು ಪ್ರತಿ ನೀಡಿದ್ದಕ್ಕಾಗಿ ಲಂಚ ಪಡೆಯುತ್ತಿದ್ದು, ಲಂಚ ಸ್ವಿಕರಿವ ಆಧಾರದ ಮೇಲೆ ಜ.23 ರಂದು ಲೋಕಾಯುಕ್ತ ಪೊಲೀಸರು ಬಂಧಿಸಿದ್ದಾರೆ.

ಫಿರ್ಯಾದಿದಾರರಾದ ರವೀಂದ್ರ ರಾಜಾರಾಮ ಮದಾಳೆ ಮುಖ್ಯೋಪಾಧ್ಯಾಯರು ಶ್ರೀ ಬಸವೇಶ್ವರ ಪ್ರೌಢ ಶಾಲೆ ನಾಗರನೂರ ತಾಃ ಬೈಲಹೊಂಗಲ ರವರ ಗಳಿಕೆ ರಜೆ ನಗದೀಕರಣ ಮಾಡುವದಕ್ಕೆ ಆಡಳಿತ ಮಂಡಳಿಯಿಂದ ಠರಾವು ಪ್ರತಿಯನ್ನು ನೀಡಿದ್ದಕ್ಕಾಗಿ ಗಳಿಕೆ ರಜೆಯ ಹಣದ ನಗದೀಕರಣ ಮೊತ್ತದ ಶೇ. 25% ರಂತೆ ಒಟ್ಟು ರೂ 13150/– ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದರು.

ಆಪಾದಿತ ಅಧಿಕಾರಿಯ ಲಂಚ ಬೇಡಿಕೆಯ ಬಗ್ಗೆ ಲೋಕಾಯುಕ್ತ ಪೊಲೀಸ್ ಠಾಣೆಗೆ ದೂರು ನೀಡಿದ ಹಿನ್ನೆಲೆಯಲ್ಲಿ ಲೋಕಾಯುಕ್ತ ಪೊಲೀಸ್ ಠಾಣೆ ಬೆಳಗಾವಿಯಲ್ಲಿ ಪ್ರಕರಣ ಸಂಖ್ಯೆ 01/2024 ಕಲಂ 7(ಬಿ) ಪಿಸಿ ಕಾಯ್ದೆ 1988 (ತಿದ್ದುಪಡಿ– 2018) ರಡಿಯಲ್ಲಿ ದಾಖಲಿಸಿಕೊಳ್ಳಲಾಗಿದೆ.

ಈ ಪ್ರಕರಣದ ಹಿನ್ನೆಲೆಯಲ್ಲಿ ಆಪಾದಿತ ಅಧಿಕಾರಿಯು ಜ.23 ರಂದು ಶ್ರೀ ಸಿದ್ದರಾಮೇಶ್ವರ ಶಿಕ್ಷಣ ಸಂಸ್ಥೆ ಬೆಳಗಾವಿಯ ಸಂಯುಕ್ತ ಪದವಿಪೂರ್ವ ಮಹಾವಿದ್ಯಾಲಯದ, ಪ್ರೌಢ ಶಾಲಾ ವಿಭಾಗದ ಕಾರ್ಯಾಯಲಯದಲ್ಲಿ ಫಿರ್ಯಾದಿಯಿಂದ ಲಂಚದ ಹಣವನ್ನು ಸ್ವೀಕರಿಸುವ ವೇಳೆ ಯಶಸ್ವಿಯಾಗಿ ಟ್ರ್ಯಾಪ್ ಮಾಡಿದ್ದು, ಸದರಿ ಉಪಪ್ರಾಚಾರ್ಯ ಕೆ. ಬಿ. ಹಿರೇಮಠ ಬೆಳಗಾವಿ ರವರನ್ನು ಬಂಧಿಸಿ ಸೂಕ್ತ ಕಾನೂನು ಕ್ರಮ ಜರುಗಿಸಲಾಗಿದೆ.

ಸದರಿ ಟ್ರ್ಯಾಪ್ ಕಾರ್ಯಾಚರಣೆಯನ್ನು ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಹನುಮಂತರಾಯ ಹಾಗೂ ಉಪಾಧೀಕ್ಷಕ ಬಿ. ಎಸ್. ಪಾಟೀಲ ಇವರ ಮಾರ್ಗದರ್ಶನದಲ್ಲಿ ತನಿಖಾಧಿಕಾರಿಗಳಾದ ಆರ್. ಎಲ್.ಧರ್ಮಟ್ಟಿ, ಅಜೀಜ್ ಕಲಾದಗಿ, ಅನ್ನಪೂರ್ಣ ಹುಲಗೂರ, ಹಾಗೂ ಸಿಬ್ಬಂದಿಗಳಾದ ರವಿ ಮಾವರಕರ, ಗಿರಿಶ್ ಪಾಟೀಲ, ವಿಠಲ ಬಸಕ್ರಿ, ಸಂತೋಷ ಬೆಡಗ, ಮತ್ತು ತಂಡದವರು ಕಾರ್ಯಚರಣೆ ಯಶಸ್ವಿಗೊಳಿಸಿದ್ದರು.

## ಬೆಳಗಾವಿ ಸ್ಮಾರ್ಟ ಸಿಟಿ ಲಿಮಿಟೆಡ್‌ಗೆ ಪ್ರಶಸ್ತಿ ಗರಿ



ಬೆಳಗಾವಿ: ದೆಹಲಿಯ ಪ್ರಗತಿ ಮೈದಾನದಲ್ಲಿ 2024ರ ಜನವರಿ 17 ರಿಂದ ಜ. 19 ರವರೆಗೆ ನಡೆದ 9 ನೇ ಸ್ಮಾರ್ಟ್ ಸಿಟೀಸ್ ಇಂಡಿಯಾ ಎಕ್ಸ್‌ಪೋದಲ್ಲಿ ಬೆಳಗಾವಿ ಸ್ಮಾರ್ಟ್ ಸಿಟಿ ಲಿಮಿಟೆಡ್ ಎರಡು ಪ್ರಶಸ್ತಿಗಳನ್ನು ಪಡೆದುಕೊಂಡಿದೆ.

ಬೆಳಗಾವಿ ಸ್ಮಾರ್ಟ್ ಸಿಟಿ ಲಿಮಿಟೆಡ್ ಅತ್ಯುತ್ತಮ ಸಾಮಾಜಿಕ ಅಂಶ ಮತ್ತು ಅತ್ಯುತ್ತಮ ನಗರ ಆಡಳಿತ ಇನಿಶಿಯೇಟಿವ್ ವಿಭಾಗಗಳ ಅಡಿಯಲ್ಲಿ ಜಾರಿಗೆ ತಂದ ಯೋಜನೆಗಳಿಗಾಗಿ ಪ್ರಶಸ್ತಿಗಳನ್ನು ಗಳಿಸಿದೆ.

ಬೆಳಗಾವಿ ಸ್ಮಾರ್ಟ್ ಸಿಟಿ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕರಾದ ಸೈಯದಾ ಅಫ್ರೀನ್ ಬಾನು ಬಳ್ಳಾರಿ ಅವರು ರಷ್ಯಾ ಸರ್ಕಾರದ ಸಚಿವರು ಮತ್ತು ಮಾಸ್ಕೊದ ಬಾಹ್ಯ ಅರ್ಥಶಾಸ್ತ್ರ ಮತ್ತು ಅಂತರಾಷ್ಟ್ರೀಯ ಸಂಬಂಧಗಳ ವಿಭಾಗದ ಮುಖ್ಯಸ್ಥರಾದ ಸೆರ್ಗೆಯ ಚೆರೆಮಿನ್ ಅವರಿಂದ ಪ್ರಶಸ್ತಿಯನ್ನು ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಭಾರತ ಸರ್ಕಾರದ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಜಂಟಿ ಕಾರ್ಯದರ್ಶಿ ಧನಲಕ್ಷ್ಮಿ ಮತ್ತು ನಿವೃತ್ತ ಐಎಎಸ್ ಅಧಿಕಾರಿ ಪ್ರದೀಪ್ ಸಿಂಗ್ ಖರೋಲಾ ಅವರು ಉಪಸ್ಥಿತರಿದ್ದರು.

ಅದೇ ರೀತಿಯಲ್ಲಿ ಬೆಳಗಾವಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಅಂಜುಮ್ ಪರ್ವೇಜ್ ಅವರು ಬುಧವಾರ (ಜ.24) ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಪರಿಶೀಲನಾ ಸಭೆಯಲ್ಲಿ ಸ್ಮಾರ್ಟ್ ಸಿಟಿ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕರಾದ ಸೈಯದಾ ಅಫ್ರೀನ್ ಬಾನು ಬಳ್ಳಾರಿ ಅವರಿಗೆ ಪ್ರಶಸ್ತಿ ಪ್ರದಾನ ಮಾಡಿದರು.

ಜಿಲ್ಲಾಧಿಕಾರಿ ನಿತೇಶ್ ಪಾಟೀಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ ಹಾಜರಿದ್ದರು.

# ಯುವ ಪ್ರತಿಭೆಗಳಿಗೆ ವೇದಿಕೆ ಯುವಜನೋತ್ಸವ: ಶ್ರೀ ಯಚ್ಚರಸ್ವಾಮಿಗಳು



ಹೊಳೆಆಲೂರ: ಯುವಜನತೆಯಲ್ಲಿ ಅಗಾಧ ಪ್ರತಿಭೆಯಿದ್ದು, ಯುವಜನೋತ್ಸವದಂತ ವೇದಿಕೆಗಳು ಅವಕಾಶ ಕಲ್ಪಿಸುತ್ತವೆ. ಇದನ್ನು ಸರಿಯಾದ ರೀತಿಯಲ್ಲಿ ಬಳಸಿಕೊಂಡಲ್ಲಿ ಯುವಪ್ರತಿಭೆಗಳು ಹೊರಹೊಮ್ಮಲು ಸಾಧ್ಯವಾಗುತ್ತದೆ ಎಂದು ಹೊಳೆಆಲೂರ ಶ್ರೀಯಚ್ಚರೇಶ್ವರ ಮಠದ ಶ್ರೀಯಚ್ಚರಸ್ವಾಮಿಗಳು ಹೇಳಿದರು.

ಅವರು ಗದಗ ಜಿಲ್ಲೆ ರೋಣ ತಾಲೂಕಿನ ಹೊಳೆ ಆಲೂರಿನ ಶ್ರೀ ಕಲ್ಮೇಶ್ವರ ವಿದ್ಯಾ ಪ್ರಸಾರಕ ಸಮಿತಿಯ ಕಲಾ, ವಿಜ್ಞಾನ, ವಾಣಿಜ್ಯ ಮಹಾವಿದ್ಯಾಲಯ ಹಾಗೂ ಕನ್ನಡ ಸ್ನಾತ್ತಕೋತ್ತರ ಅಧ್ಯಯನ ಕೇಂದ್ರ ವತಿಯಿಂದ ಕ.ವಿ.ವಿ. ಯ 2023–24 ನೇ ಸಾಲಿನ ಗದಗ ಜಿಲ್ಲಾ ವಲಯ ಮಟ್ಟದ ಯುವಜನೋತ್ಸವವನ್ನು ಉದ್ಘಾಟನಾ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಮಾತನಾಡುತ್ತಿದ್ದರು. ವಿವಿಧ ಮಹಾವಿದ್ಯಾಲಯದ ವಿದ್ಯಾರ್ಥಿ ವಿದ್ಯಾರ್ಥಿನಿಯರು ತಮ್ಮ ಪ್ರತಿಭೆಯನ್ನು ಇಲ್ಲಿ ತೋರಿಸುವ ಮೂಲಕ ತಮ್ಮ ಮಹಾವಿದ್ಯಾಲಯದ ಕೀರ್ತಿಯನ್ನು ತರುವಂತಾಗಲಿ ಎಂದು ಹಾರೈಸಿದರು.

ನಿವೃತ್ತ ಪ್ರಾಚಾರ್ಯ ಎಸ್. ಎಸ್.ಪಟ್ಟಣಶೆಟ್ಟಿಯವರು ದೀಪ ಬೆಳಗಿಸಿ ಉದ್ಘಾಟಿಸಿ ಸಂದರ್ಭೋಚಿತ ಮಾತನಾಡಿದರು. ನಿರ್ದೇಶಕರಾದ ಡಿ.ಎಸ್.ಶೆಲ್ಲಿಕೇರಿಯವರು ಮಾತನಾಡಿ ಸ್ಪರ್ಧೆಯಲ್ಲಿ ಸೋಲು–ಗೆಲವು ಮುಖ್ಯವಲ್ಲ.

ಸ್ಪರ್ಧೆಯಲ್ಲಿ ಪಾಲ್ಗೊಳ್ಳುವದು ಮುಖ್ಯ. ಸತತ ಅಭ್ಯಾಸಿ ಯಶ ಸಾಧಿಸುತ್ತಾನೆ ಎಂದರು. ಅಧ್ಯಕ್ಷತೆಯನ್ನು ಸಂಸ್ಥೆಯ ನಿರ್ದೇಶರಾದ ಬಿ.ಬಿ.ಸಾಸಳ್ಳಿ ವಹಿಸಿದ್ದರು. ಸಂಸ್ಥೆಯ ನಿರ್ದೇಶಕರಾದ ಮಹಾಂತೇಶ ಬ್ಯಾಡಗಿ, ಡಿ.ಎಸ್.ಶೆಲ್ಲಿಕೇರಿ, ಸಿ.ಆರ್.ಕಂಬಿ, ಪ್ರಾಚಾರ್ಯ ಪಿ.ಎಸ್.ಕಣವಿ ಮಹವಿದ್ಯಲಯದ ಪ್ರಧಾನ ಕಾರ್ಯದರ್ಶಿ ರವಿಚಂದ್ರ ಕುರಿ, ಮಹಿಳಾ ಪ್ರತಿನಿಧಿ ಅನಿತಾ ಅಂಗಡಕಿ, ಯುವಜನೋತ್ಸವ ಸಂಚಾಲಕ ವಿ.ಪಿ ಪಾಟೀಲ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಮಹಾವಿದ್ಯಾಲಯದ ಸಿಬ್ಬಂದಿಗಳಾದ ಪ್ರೊ.ಶರಣಯ್ಯ ಬ ಹಳ್ಳೂರ, ಪ್ರೊ.ಎನ್. ಆರ್. ಹಿರೇಸಕ್ಕರ ಗೌಡರ, ಡಾ.ಎಸ್.ಬಿ. ಸಜ್ಜನರ , ಡಾ.ಪ್ರಭು ಗಂಜಿಹಾಳ , ಪ್ರೊ. ಎಸ್.ವಾಯ್.ಪೂಜಾರ, , ಡಾ.ಕುಮಾರ ಹಂಜಗಿ, ಪ್ರಾಧ್ಯಾಪಕರಾದ ಆನಂದ ಕೆಂಚನಗೌಡ್ರ, ಎಂ.ಎಸ್.ಬೇವೂರ, ರೇಷ್ಮಾ ಟೆಕ್ಕೇದ, ಸಂತೋಷ ಮಾಳವಾಡ, ಜಯಶ್ರೀ ಪಾಟೀಲ, ಎಂ.ಆರ್.ಆರೇರ, ಕೆ.ಎಸ್. ಕೊಪ್ಪದ, ಶಿಲ್ಪಾ ಮೆದನಾಪೂರ, ಜಿ.ಎಂ. ಪೊಲೀಸಪಾಟೀಲ, ವಿ.ಬಿ.ಜಾಲಿಹಾಳ, ವಾಯ್.ಎಂ.ನದಾಫ, ಶ್ರೀಮತಿ ಎಸ್. ಆಯ್. ಗಡಗಿ , ಎಸ್.ಆರ್.ಮುಂದಿನಮನಿ, ಎಸ್.ಜಿ.ಮಾಳವಾಡ , ಮಂಜುನಾಥ ಸೋಮನಕಟ್ಟಿ, ಮಂಜುನಾಥ ಬಸರಕೋಡ ಮಹಾವಿದ್ಯಾಲಯದ ವಿದ್ಯಾರ್ಥಿವೃಂದ, ವಿವಿಧ ಮಹಾವಿದ್ಯಾಲಯಗಳಿಂದ ಆಗಮಿಸಿದ್ದ ಪ್ರಾಧ್ಯಾಪಕರು, ಸ್ಪರ್ಧಾಳುಗಳು ಉಪಸ್ಥಿತರಿದ್ದರು. ನಂತರ ವಿವಿಧ ಸ್ಪರ್ಧೆಗಳು ಆರಂಭಗೊಂಡವು.

## ಪುರಸಭೆ ಹಾಗೂ ಪೋಲಿಸ್ ಇಲಾಖೆ ವತಿಯಿಂದ ಸಭೆ



ಘಟಪ್ರಭಾ: ಎಲ್ಲ ಅಂಗಡಿ–ಮುಗಟ್ಟುಗಳ ನಾಮ ಫಲಕಗಳ ಮೇಲೆ ಸರ್ಕಾರದ ಆದೇಶದಂತೆ ಕಡ್ಡಾಯವಾಗಿ ಕನ್ನಡ ಭಾಷೆ ಶೇಕಡ 60% ರಷ್ಟು ಹಾಕುವ ಸಲುವಾಗಿ ಎಲ್ಲ ಅಂಗಡಿ–ಮುಗಟ್ಟುಗಳ ಮಾಲೀಕರ ಸಭೆ ಕರೆಯುವಂತೆ ಘಟಪ್ರಭಾ ಪೊಲೀಸ್ ಠಾಣೆಯ ಪೊಲೀಸ್ ಇನ್ಸಪೇಕ್ಟರ್ ಬಸವರಾಜ ಕಾಮನಬೈಲು ಅವರಿಗೆ ಇಂದು ಕನ್ನಡ ಪರ ಸಂಘಟನೆಗಳ ಒಕ್ಕೂಟದ ಮುಖಂಡರಗಳು ಸೇರಿ ಮನವಿ ಮಾಡಲಾಯಿತು. ಮುಖಂಡರುಗಳ ಮನವಿಗೆ ಸ್ಪಂದಿಸಿ ಮಾತನಾಡಿದ ಪೊಲೀಸ್ ಇನ್ಸ್ಪೆಕ್ಟರ್ ಬಸವರಾಜ ಕಾಮನಬೈಲು ಅವರು ಸ್ಥಳೀಯ ಪುರಸಭೆ ಇಲಾಖೆ ಹಾಗೂ ಪೋಲಿಸ್ ಇಲಾಖೆ ವತಿಯಿಂದ ಇದೆ ದಿನಾಂಕ 27–01–2024 ಶನಿವಾರ ರಂದು ಬೆಳಿಗ್ಗ 10 ಗಂಟೆಗೆ ಪೋಲಿಸ್ ಠಾಣೆ ಆವರಣದಲ್ಲಿ ಅಂಗಡಿ ಮಾಲಿಕರಿಗೆ ಹಾಗೂ ಕನ್ನಡ ಪರ ಸಂಘಟನೆಯ ಮುಖಂಡರುಗಳಿಗೆ ಸಭೆಗೆ ಭಾಗವಹಿಸಲು ತಿಳಿಸಲಾಗುವುದು ಎಂದು ಹೇಳಿದರು. ಈ ಸಂದರ್ಭದಲ್ಲಿ ಕನ್ನಡ ಪರ ಸಂಘಟನೆಗಳ ಒಕ್ಕೂಟದ ಮುಖಂಡರಗಳಾದ ಕೆ.ಕೆ ಪಟ್ಟಣಶೆಟ್ಟೆ, ರೆಹಮಾನ ಮೊಖಾಶಿ, ಪ್ರಶಾಂತ ಅರಳಿಕಟ್ಟಿ, ಅಪ್ಪಾಸಾಬ ಮುಲ್ಲಾ, ಕೆಂಪಯ್ಯ ಪುರಾಣಿಕಮಠ, ಮಲಿಕಜಾನ ತಲವಾರ, ಸಲೀಮ ಮುಲ್ಲಾ ಉಪಸ್ಥಿತರಿದ್ದರು.

## ಶ್ರೀ ರಾಮ ಪ್ರತಿಷ್ಠಾಪನೆ : ಜಿತೋ ಲೇಡಿಜ ವಿಂಗ ವತಿಯಿಂದ ಸ್ವೇಟರ ವಿತರಣೆ



ಬೆಳಗಾವಿ: ಅಯೋಧ್ಯೆಯಲ್ಲಿ ಶ್ರೀರಾಮ ಪ್ರತಿಷ್ಠೆಯ ದಿನದಂದು ಬೆಳಗಾವಿಯ ಜೈನ ಇಂಟರ್‌ನ್ಯಾಷನಲ್ ಟ್ರೇಡ ಆರ್ಗನೈಝೇಶನ ಜಿತೋ ಲೇಡಿಜ ವಿಂಗ ವತಿಯಿಂದ "ಆಶಿಯಾನಾ–2" ಯೋಜನೆಯಡಿ 320 ಶಾಲಾ ಮಕ್ಕಳಿಗೆ ಸ್ವೆಟರ್ ವಿತರಿಸಲಾಯಿತು.

ಬೆಳಗಾವಿಯ ವಿಶ್ವೇಶ್ವರ ನಗರದಲ್ಲಿರುವ ಸರಕಾರಿ ಪ್ರಾಥಮಿಕ ಶಾಲೆ ನಂ 26 ರಲ್ಲಿ ಈ ಕಾರ್ಯಕ್ರಮ ನಡೆಯಿತು. ಈ ಕಾರ್ಯಕ್ರಮದಲ್ಲಿ ಸುಮಾರು 320 ಶಾಲಾ ಮಕ್ಕಳಿಗೆ ಸ್ವೆಟರ್ ವಿತರಿಸಲಾಯಿತು. ಈ ಸಂದರ್ಭದಲ್ಲಿಸ್ವೆಟರ್ ಪಡೆದ ಶಾಲಾ ಮಕ್ಕಳ ಮುಖದಲ್ಲಿ ಮಂದಹಾಸದೊಂದಿದೆ ಅತ್ಯಂತ ಖುಷಿ ವ್ಯಕ್ತ ಪಡಿಸಿದರು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಉದ್ಯಮಿ ಸುನಿಲ ಕಠಾರಿಯಾ, ಹಿರಿಯ ಲೆಕ್ಕಪರೀಶೋಧಕ ಸತಿಶ ಮೆಹತಾ ಅವರು ಆಗಮಿಸಿ ಶಾಲಾ ಮಕ್ಕಳಿಗೆ ಸ್ವೆಟರ್ ವಿತರಿಸಿ ಮಾತನಾಡಿ, ಜಿತೋ ಸಂಸ್ಥೆಯ ಒಂದು ಮಹತ್ವದ ಕಾರ್ಯಕ್ರಮ ಇದಾಗಿದ್ದು, ಸರಕಾರಿ ಶಾಲಾ ಮಕ್ಕಳ ವಿದ್ಯಾಭ್ಯಾಸ, ಶೀಕ್ಷಣ, ಮತ್ತು ಅವರ ಓದಿಗೆ ಎಲ್ಲ ರೀತಿಯ ಸಹಕಾರ ನೀಡಲು ಜಿತೋ ಸಂಸ್ಥೆಯು ತತ್ಪರವಾಗಿದೆ ಎಂದು ಅವರು ತಿಳಿಸಿದರು.

ಸಮಾರಂಭದಲ್ಲಿ ಆದಿತ್ಯ ಮಿಲ್ಕ ಸಂಸ್ಥೆಯ ವತಿಯಿಂದ ಶಾಲಾ ಮಕ್ಕಳಿಗೆ ಸಿಹಿ ವಿತರಿಸಲಾಯಿತು. ಣಮೋಕಾರ ಮಂತ್ರದ ಪಠಣದೊಂದಿಗೆ ಕಾರ್ಯಕ್ರಮ ಪ್ರಾರಂಭಗೊಂಡಿತು. ಜಿತೋ ಲೇಡಿಜ ವಿಂಗ ಅಧ್ಯಕ್ಷೆ ಮಾಯಾ ಜೈನ ಅಧ್ಯಕ್ಷತೆ ವಹಿಸಿದ್ದರು. ಕಾರ್ಯದರ್ಶಿ ಮಮತಾ ಜೈನ ಅತಿಥಿಗಳನ್ನು ಸ್ವಾಗತಿಸಿ ಕೊನೆಯಲ್ಲಿ ವಂದಿಸಿದರು. ಬಿಇಓ ಶ್ರೀಮತಿ ಲೀಲಾವತಿ, ಶಾಲೆಯ ಪ್ರಾಚಾರ್ಯ ಎನ್.ಬಿ.ತಳವಾರ, ಕಾರ್ಯಕ್ರಮ ಸಂಯೋಜಕಿ ಸುನಿತಾ ಕಠಾರಿಯಾ, ಸಹ ಸಂಯೋಜಕಿ ವೈಶಾಲಿ ಉಪಾಧ್ಯೆ, ಶಾಲಾ ಉಸ್ತುವಾರಿ ಸಂಯೋಜಕಿ ಸುನಿತಾ ಸಂಚೇತಿ ಸೇರಿದಂತೆ ಮೊದಲಾದವರು ಉಪಸ್ಥಿತರಿದ್ದರು.

# ಗ್ರಾಮೀಣ ಕ್ರೀಡೆಗಳಿಗೆ ಪ್ರೋತ್ಸಾಹ ಅಗತ್ಯ



ಹುಕ್ಕೇರಿ: ಅಧುನಿಕ ದಿನಗಳಲ್ಲಿ ಸುಂದರವಾಗಿದ್ದ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಲು ಅನುಕೂಲವಾಗಿದ್ದ ಗ್ರಾಮೀಣ ಕ್ರೀಡೆಗಳು ಇಂದು ಮರೆಯಾಗುತ್ತಿವೆ ಅಂತಹವುಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಜಯಭಾರತ ಫೌಂಡೇಶನ್ ವಿಶಿಷ್ಟ ಕಾರ್ಯ ಮಾಡುತ್ತಿದೆ ಎಂದು ಬಸನಗೌಡ ಪಾಟೀಲ ಅಭಿಪ್ರಾಯಪಟ್ಟರು.

ಹುಕ್ಕೇರಿ ತಾಲೂಕಿನ ಯಾದಗೂಡ ಗ್ರಾಮದಲ್ಲಿ ಮಹಿಳಾ ಕಲ್ಯಾಣ ಸಂಸ್ಥೆ ಹಾಗೂ ಜಯಭಾರತ ಫೌಂಡೇಶನ್ ಬೆಳಗಾವಿ ಇವರುಗಳ ಸಹಯೋಗದಲ್ಲಿ ಆಯೋಜಿಸಿದ್ದ ಕಬಡ್ಡಿ ಪಂದ್ಯಾವಳಿಗೆ ಚಾಲನೆ ನೀಡಿ ಮಾಡನಾಡಿದರು.

ಅಶೋಕ ಆಯ್ರನ ನಿರ್ದೇಶಕರಾದ ದಯಾನಂದ ಕದಂ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಕ್ರೀಡಾಕೂಟಗಳು ಕೇವಲ ಜಯ ಅಪಜಯಗಳ ಲೆಕ್ಕಾಚಾರಗಳಾಗದೇ ಪರಸ್ಪರರಲ್ಲಿ ಸಹೋದರತೆ ಬೆಳೆಸುವ ಸಂಕೇತವಾಗಿದೆ ಎಂದರು.

ಯುವಜನಾಂಗ ದೇಶಿಯ ಕ್ರೀಡೆಗಳನ್ನು ಬಿಟ್ಟು ಕೇವಲ ಕ್ರಿಕೆಟನಲ್ಲಿ ಚಿತ್ತ ಹರಿಸುತ್ತಿರುವುದರಿಂದ ದೇಶಿಯ ಕ್ರೀಡೆಗಳು ಮಾಯವಾಗುತ್ತಿವೆ. ಗ್ರಾಮೀಣ ಕ್ರೀಡೆಗಳಿಗೆ ಈಗ ಹೆಚ್ಚು ಮಹತ್ವ ಬರುತ್ತಿದ್ದು ಅದಕ್ಕೆ ಪ್ರೋ ಕಬಡ್ಡಿಯೇ ಸಾಕ್ಷಿ ಎಂದ ಅವರು, ಯುವಕರು ದುಶ್ಚಟಗಳಿಂದ ದೂರವಿದ್ದು ಮಾನಸಿಕ ದೈಹಿಕ ಬೆಳವಣಿಗೆ ಪೂರಕವಾಗುವ ಆಟೋಟಗಳಿಗೆ ಒತ್ತು ನೀಡಬೇಕು ಎಂದರು.

ಈ ಕಬಡ್ಡಿ ಪಂದ್ಯಾವಳಿಯಲ್ಲಿ ಜಿಲ್ಲೆಯ ಬೇರೆ ಬೇರೆ ಗ್ರಾಮಗಳಿಂದ ಒಟ್ಟು 16 ತಂಡಗಳು ಭಾಗವಹಿಸಿದ್ದರು.

ಪಂದ್ಯಕ್ಕೆ ಶಂಕರ ಕುರಬೇಟ, ಮಹಾದೇವ ಪೂಜಾರಿ, ಬಾಬಾಗೌಡ ಕೊಟಗಿ, ಹಾಗೂ ಆನಂದ ನಾಯಕ ನಿರ್ಣಾಯಕರಾದ್ದರು. ಅದರಲ್ಲಿ ಹುಕ್ಕೇರಿ ತಾಲೂಕಿನ ಯಾದಗೂಡ ಗ್ರಾಮದ ಬೀರೇಶ್ವರ ತಂಡಕ್ಕೆ ಪ್ರಥಮ ಬಹುಮಾನ ರೂ. 10,000/– ನಗದು, ಪಾರಿತೋಷಕ ಹಾಗೂ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು. ನಿಡಗುಂದಿಯ ಮಹಾಲಕ್ಷ್ಮೀ ತಂಡದವರಿಗೆ ದ್ವಿತೀಯ ಬಹುಮಾನ ರೂ. 7,000/– ನಗದು, ಪಾರಿತೋಷಕ ಹಾಗೂ ಪ್ರಮಾಣ ಪತ್ರವನ್ನು ನೀಡಲಾಯಿತು.ತೃತೀಯ ಬಹುಮಾನ ಪ್ರಶಾಂತ ಮಾಳಗೆ ತಂಡದವರಿಗೆ ಹಾಗೂ ಅಬ್ಬಾಸ ಮುಲ್ತಾನಿ ತಂಡದವರಿಗೆ ತಲಾ ರೂ. 2,500/– ನಗದು ಹಾಗೂ ಪ್ರಮಾಣ ಪತ್ರಗಳನ್ನು ನೀಡಿ ಗೌರವಿಸಲಾಯಿತು.

ಈ ಪಂದ್ಯಾವಳಿಯಲ್ಲಿ ಗ್ರಾಮದ ಹಿರಿಯರಾದ ಕಲಗೌಡ ಪಾಟೀಲರವರು ಉಪಸ್ಥಿತರಿದ್ದು ಅವರನ್ನು ಸಂಸ್ಥೆಯ ಪರವಾಗಿ ಗೌರವಿಸಲಾಯಿತು.

ಸಂಸ್ಥೆಯ ಗೌರವ ಕಾರ್ಯದರ್ಶಿ ಶ್ರೀಮತಿ. ವೈಜಯಂತಿ.ಎಂ.ಚೌಗಲಾ, ಶ್ರೀಮತಿ. ಶಾಹೀನಬಾನು ಹೊಂಬಾಳ, ಕಿರಣ ಚೌಗಲಾ ಹಾಗೂ ಯಾದಗೂಡ ಗ್ರಾಮದ ರಮೇಶ ಮಹಾಡಿಕ್, ರಂಜನ್ ಮಹಾಡಿಕ್, ನಾಗರಾಜ ಮಲ್ಲಪ್ಪಾ ವಾಳಕಿ, ಗ್ರಾಮದ ಹಿರಿಯರು ಹಾಗೂ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪಂದ್ಯಾವಳಿಯನ್ನು ಯಶಸ್ವಿಗೊಳಿಸಲು ಸಹಕರಿಸಿದರು.

VOL. 04 ISSUE. 300 RNI. KARKAN/2020/79084 REG.NO G-2/PMG/KA/NK/BM/139/2024-26

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089